ಸಂಪುಟ: 06 ಸಂಚಿಕೆ: 135 ಪುಟಗಳು: 08 ಮಂಗಳವಾರ 28 ಜುಲೈ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಎಲ್ಲವನ್ನೂ ಮುತುವರ್ಜಿಯಿಂದ ನಿರ್ವಹಿಸುವ ಗೃಹಿಣಿ ಉಪ್ಪು ಇದ್ದಂತೆ. ಗೈರುಹಾಜರಿಯಲ್ಲೇ ಮಹತ್ವ ಗೊತ್ತಾಗೋದು. ಅವಳನ್ನು ಗೌರವಿಸೋಣ!

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಮೇಕೆದಾಟು ತಮಿಳುನಾಡಿಗೆ ಚಾಟಿ ಏಟು



## ಬೆಂಗಳೂರಿನ 2ನೇ ಏರ್‌ಪೋರ್ಟ್ ಬಗ್ಗೆ ರಾಜ್ಯ ಸರ್ಕಾರದಿಂದ ಯಾವುದೇ ಪ್ರಸ್ತಾವನೆ



• ಉದಯವಾಹಿನಿ, ಬೆಂಗಳೂರು

ದಕ್ಷಿಣ ಮತ್ತು ತುಮಕೂರಿನಲ್ಲಿ ಎರಡನೇ ಏರ್‌ಪೋರ್ಟ್ ನಿಲ್ದಾಣ ನಿರ್ಮಾಣ ವಿಚಾರವಾಗಿ ಸ್ಥಳ ಆಯ್ಕೆ ಸಂಬಂಧ ಪೈಪೋಟಿ ಮಧ್ಯೆ ಇದೀಗ ರಾಜ್ಯ ಸರ್ಕಾರದಿಂದ ಯಾವುದೇ ಪ್ರಸ್ತಾವನೆ ಬಂದಿಲ್ಲ ಎಂದು ಕೇಂದ್ರ ಸ್ಪಷ್ಟನೆ ನೀಡಿದೆ. ಲೋಕಸಭೆಯಲ್ಲಿ ಸಂಸದ ಪಿ.ಸಿ.ಮೋಹನ್ ಪ್ರಶ್ನೆಗೆ ನಾಗರಿಕ ವಿಮಾನಯಾನ ರಾಜ್ಯ ಸಚಿವ ಮುರಳೀಧರ್ ಮೊಹೋಲ್ ಈ ಬಗ್ಗೆ ಉತ್ತರ ನೀಡಿದ್ದಾರೆ. ರಾಜ್ಯ ಸರ್ಕಾರದ ಕೋರಿಕೆಯಂತೆ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ಬೆಂಗಳೂರಿನ ಸುತ್ತಮುತ್ತಲಿನ 3 ಪ್ರಸ್ತಾಪಿತ ಸ್ಥಳಗಳಲ್ಲಿ ಪೂರ್ವ-ಸಾಧ್ಯತಾ ಅಧ್ಯಯನ ನಡೆಸಿ, ಆ ವರದಿಯನ್ನು ರಾಜ್ಯ ಸರ್ಕಾರಕ್ಕೆ ರವಾನಿಸಿತ್ತು. ಆದರೆ ಕೇಂದ್ರ ಸರ್ಕಾರದ ಗ್ರೀನ್‌ಫೀಲ್ಡ್ ವಿಮಾನ ನಿಲ್ದಾಣ ನೀತಿಯಡಿ ಹೊಸ ಪ್ರಸ್ತಾವನೆಯನ್ನು ಸಲ್ಲಿಸಲು ರಾಜ್ಯ ಸರ್ಕಾರದಿಂದ ಯಾವುದೇ ಉತ್ತರ ಅಥವಾ ಸ್ಪಂದನೆ ಬಂದಿಲ್ಲ ಎಂದು ಸಚಿವಾಲಯ ತಿಳಿಸಿದೆ. ರಾಜ್ಯ ಸರ್ಕಾರ ಹೊಸ ಪ್ರಸ್ತಾವನೆಯನ್ನು ಅಧಿಕೃತವಾಗಿ ಸಲ್ಲಿಸಿದ ಬಳಿಕವಷ್ಟೇ 2ನೇ ವಿಮಾನ ನಿಲ್ದಾಣದ ಪ್ರಕ್ರಿಯೆಗಳು ಆರಂಭಗೊಳ್ಳಲಿವೆ ಎಂದು ಕೇಂದ್ರ ಸ್ಪಷ್ಟನೆ ನೀಡಿದೆ. ಇನ್ನೊಂದೆಡೆ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ದಿನಕ್ಕೆ ಸರಾಸರಿ 1.23 ಲಕ್ಷ ಪ್ರಯಾಣಿಕರು ಆಗಮಿಸುತ್ತಿದ್ದು, ವಾರ್ಷಿಕ 51.5 ಮಿಲಿಯನ್ (5.15 ಕೋಟಿ) ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯವನ್ನು ಹೊಂದಿದೆ.

ಬೆಳೆಯುತ್ತಿರುವ ಪ್ರಯಾಣಿಕರ ದಟ್ಟಣೆಯನ್ನು ನಿಭಾಯಿಸಲು ಟರ್ಮಿನಲ್ 2ರ ಹಂತ 2ರ ವಿಸ್ತರಣೆ ಕೈಗೆತ್ತಿಕೊಳ್ಳಲು ಏರ್‌ಪೋರ್ಟ್ ಮಾಸ್ಟರ್ ಪ್ಲಾನ್ ಸಿದ್ಧಪಡಿಸುತ್ತಿದೆ.

## ಪಶುವೈದ್ಯ ನೇಮಕಾತಿ ಹಗರಣ: ಕೆಪಿಎಸ್‌ಸಿ ಕಚೇರಿಗೆ ಆರ್. ಅಶೋಕ್

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ಪಶುವೈದ್ಯರ ನೇಮಕಾತಿಯಲ್ಲಿ ನಡೆದಿರುವ ಅಕ್ರಮಗಳ ಕುರಿತು ತೀವ್ರ ಚರ್ಚೆ ಹಿನ್ನಲೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ ಹಾಗೂ ಶಾಸಕ ಎಸ್. ಸುರೇಶ್ ಕುಮಾರ್ ಅವರನ್ನೊಳಗೊಂಡ ಭಾರತೀಯ ಜನತಾ ಪಕ್ಷದ (ಬಿಜೆಪಿ) ನಿಯೋಗವು ಬೆಂಗಳೂರಿನ ಕೆಪಿಎಸ್‌ಸಿ ಕಚೇರಿಗೆ ಭೇಟಿ ನೀಡಿದೆ. ಕೆಪಿಎಸ್‌ಸಿ ಹಂಗಾಮಿ ಅಧ್ಯಕ್ಷ ಡಾ. ಬಿ. ಪ್ರಭುದೇವ್ ಅವರನ್ನು ಭೇಟಿಯಾಗಿರುವ ನಿಯೋಗ, ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ಚರ್ಚೆ ನಡೆಸಿದೆ.

## ಎಂಎಲ್‌ಸಿ ಸಿಟಿ ರವಿಗೆ ತಾತ್ಕಾಲಿಕ ರಿಲೀಫ್ ನೀಡಿದ ಹೈಕೋರ್ಟ್, ಬಂಧನದಿಂದ ಬಚಾವ್

• ಉದಯವಾಹಿನಿ, ಬೆಂಗಳೂರು

ನೀಟ್ ಪ್ರತಿಭಟನೆ ಕುರಿತು ನೀಡಿದ ಹೇಳಿಕೆ ವಿವಾದಕ್ಕೆ ಸಂಬಂಧಿಸಿದಂತೆ ಬಿಜೆಪಿ ಎಂಎಲ್‌ಸಿ ಸಿ.ಟಿ. ರವಿ ವಿರುದ್ಧ ದಾಖಲಾಗಿರುವ ಎಫ್‌ಐಆರ್ ಪ್ರಕರಣ ಚಿಕ್ಕಮಗಳೂರಿನಿಂದ ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯಕ್ಕೆ ವರ್ಗಾವಣೆಯಾಗಿದೆ.

ಇನ್ನೊಂದಡೆ ಎಫ್‌ಐಆರ್ ಪ್ರಶ್ನಿಸಿ ಸಿಟಿ ರವಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಕರ್ನಾಟಕ ಹೈಕೋರ್ಟ್ ಜುಲೈ 31ಕ್ಕೆ ವಿಚಾರಣೆ ಮುಂದೂಡಿದ್ದು, ಅಲ್ಲಿಯವರೆಗೆ ಬಲವಂತದ ಕ್ರಮ ಕೈಗೊಳ್ಳದಂತೆ ಪೊಲೀಸರಿಗೆ ಸೂಚನೆ ನೀಡಿದೆ. ತಮ್ಮ ವಿರುದ್ಧ ದಾಖಲಾಗಿರುವ ಎಫ್‌ಐಆರ್ ಸಂಖ್ಯೆ 149ಕ್ಕೆ ತಡೆ ನೀಡುವಂತೆ ಕೋರಿ ಸಿಟಿ ರವಿ ಪರ ವಕೀಲರು ಕರ್ನಾಟಕ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದಾರೆ. ಚಿಕ್ಕಮಗಳೂರು ನಗರ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತೆ ಸೆಕ್ಷನ್ 353(2) ಅಡಿಯಲ್ಲಿ ದಾಖಲಾದ ಪ್ರಕರಣಕ್ಕೆ ಮಧ್ಯಂತರ ತಡೆ ನೀಡುವಂತೆ ಮನವಿ ಮಾಡಿದ್ದಾರೆ.

ಈ ಕೇಸ್‌ನಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ ಎಂದು ಸಿಟಿ ರವಿ ಪರ ಹಿರಿಯ ವಕೀಲ ಅರುಣ್ ಶ್ಯಾಮ್ ವಾದ ಮಂಡಿಸಿದ್ದಾರೆ. ನೋಟಿಸ್ ತಲುಪಿಲು ಹೋದ ಪೊಲೀಸರಿಗೆ ಬೆದರಿಕೆ ಹಾಕಿದ್ದಾರೆ.

## 11 ರೈತರಿಗೆ ನಿರೀಕ್ಷಣಾ ಜಾಮೀನು ಮಂಜೂರು : ಕಾನೂನು ಹೋರಾಟಕ್ಕೆ ಸಿಕ್ಕ ಜಯ ಎಂದ ನಿಖಿಲ್

• ಉದಯವಾಹಿನಿ, ಬೆಂಗಳೂರು

ಬಿಡದಿಯ ಉಪನಗರ ಯೋಜನೆ ವಿರೋಧಿಸಿ ಪ್ರತಿಭಟನೆ ಮಾಡಿದ್ದ 11 ರೈತರು ಹಾಗೂ ನಿವಾಸಿಗಳಿಗೆ ರಾಮನಗರ ನ್ಯಾಯಾಲಯವು ನಿರೀಕ್ಷಣಾ ಜಾಮೀನು ಮಂಜೂರು ಮಾಡಿರುವುದು ನಮ್ಮ ಕಾನೂನು ಹೋರಾಟಕ್ಕೆ ಸಿಕ್ಕ ದೊಡ್ಡ ಜಯ ಎಂದು ಜೆಡಿಎಸ್ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದ್ದಾರೆ. ಈ ಸಂಬಂಧ ತಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಅವರು, ಬಿಡದಿಯ ರಾಜಕೀಯ ಪ್ರೇರಿತ ಸುಳ್ಳು ಎಫ್‌ಐಆರ್ ಪ್ರಕರಣದಲ್ಲಿ ನ್ಯಾಯಾಲಯವು ನಿರೀಕ್ಷಣಾ ಜಾಮೀನು ಮಂಜೂರು ಮಾಡಿರುವುದು ಸತ್ಯಕ್ಕೆ ಸಂದ ಜಯವಾಗಿದೆ ಎಂದಿದ್ದಾರೆ. ತಮ ಭೂಮಿ ಮತ್ತು ಜೀವನೋಪಾಯಕ್ಕಾಗಿ ಧ್ವನಿ ಎತ್ತುವವರನ್ನು ಅಧಿಕಾರ ಬಲದಿಂದ ಹತ್ತಿಕ್ಕಲು ಸಾಧ್ಯವಿಲ್ಲ. ವಕೀಲ ಪ್ರದೀಪ್ ಅವರ ನೇತೃತ್ವದ ನಮ ವಕೀಲರ ತಂಡವು ಕಾನೂನು ಹೋರಾಟವನ್ನು ಮುಂದುವರೆಸಲಿದೆ.

## ತಮಿಳುನಾಡು ಸಿಎಂ ವಿಜಯ್ ಹೇಳಿಕೆ ಖಂಡಿಸಿ ಖಾಲಿ ಕೊಡ ಚಳವಳಿ

ಮೇಕೆದಾಟು ಯೋಜನೆಗೆ ತಮಿಳುನಾಡು ಸರ್ಕಾರ ತಕರಾರು ತೆಗೆಯುತ್ತಿರುವುದನ್ನು ಖಂಡಿಸಿ ಕನ್ನಡ ಜಾಗೃತಿ ವೇದಿಕೆಯ ಕಾರ್ಯಕರ್ತರು ಖಾಲಿ ಕೊಡದೊಂದಿಗೆ ಪ್ರತಿಭಟನಾ ಮೆರವಣಿಗೆ ಹಾಗು ತಮಿಳುನಾಡು ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು. ರಾಷ್ಟ್ರೀಯ ಹೆದ್ದಾರಿ 44ರ ಅತ್ತಿಬೆಲೆ ಮುಖ್ಯ ವೃತ್ತದಿಂದ ಅಂತರರಾಜ್ಯ ಗಡಿಗೋಪುರದವರೆಗೆ ಖಾಲಿ ಕೊಡಗಳನ್ನು ಪ್ರದರ್ಶಿಸಿ, ತಮಿಳುನಾಡು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ, ರಾಷ್ಟ್ರೀಯ ಹೆದ್ದಾರಿ ಬಂದ್‌ಗಾಗಿ ಧರಣಿ ಕುಳಿತ ಕನ್ನಡ ಜಾಗೃತಿ ವೇದಿಕೆ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದು ನಂತರ ಬಿಡುಗಡೆ ಮಾಡಿದರು. ಕುಡಿಯುವ ನೀರಿಗಾಗಿ ಮೇಕೆದಾಟು ಯೋಜನೆ ಕೈಗೆತ್ತಿಕೊಳ್ಳಲಾಗುತ್ತಿದೆ. ಬೆಂಗಳೂರು ನಗರ, ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳ ಜನರಿಗೆ ಕುಡಿಯುವ ನೀರಿನ ಅವಶ್ಯಕತೆ ಇದೆ. ಅದಕ್ಕಾಗಿ ಹೋರಾಟ ಮಾಡುತ್ತಿದ್ದೇವೆ. ಏಷ್ಯಾ ಖಂಡದಲ್ಲಿಯೇ ಅತ್ಯಂತ ವೇಗವಾಗಿ ಬೆಂಗಳೂರು ನಗರ ಬೆಳೆಯುತ್ತಿದೆ. ಇಲ್ಲಿ ತಮಿಳು ಜನರು ವಾಸ ಮಾಡುತ್ತಿದ್ದಾರೆ. ಅವರಿಗೆ ಕುಡಿಯುವ ನೀರು ಬೇಕಲ್ಲವೇ? ಎಂದು ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಕೆ.ಮಂಜುನಾಥ ದೇವ ಹೇಳಿದರು.

ಕನ್ನಡ ಜಾಗೃತಿ ವೇದಿಕೆ ಮತ್ತು ಕನ್ನಡಿಗರ ವಿರೋಧವಿದ್ದರೂ ಹೊಗನೇಕಲ್ ಬಳಿ ವಿವಾದಿತ ಸ್ಥಳದಲ್ಲಿ ಚೆಕ್ ಡ್ಯಾಮ್ ನಿರ್ಮಿಸಿದ್ದೀರಿ. ಕುಡಿಯುವ ನೀರಿಗಾಗಿ ಎಂದು ಸಮರ್ಥನೆ ಮಾಡಿಕೊಂಡಿಲ್ಲವೇ? ರಾಜ್ಯದಲ್ಲಿ ಮುಂಗಾರು ಮಳೆ ಕೈಕೊಟ್ಟಿದೆ. ಕಾವೇರಿ ಕೊಳ್ಳದ ನಾಲ್ಕು ಡ್ಯಾಮ್ ಬರಿದಾಗಿವೆ. ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರೇ ನಿಮ್ಮ ಧೋರಣೆ ಸರಿಯಿಲ್ಲ ಎಂದರು.



## ಕರ್ನಾಟಕದ ವಿರುದ್ಧ ನಿರ್ಣಯ ಅಂಗೀಕಾರ



ಕರ್ನಾಟಕದ ಏಕಪಕ್ಷೀಯ ಪ್ರಯತ್ನವನ್ನು ಖಂಡಿಸಿ, ಕಾವೇರಿ ಜಲ ವಿವಾದ ನ್ಯಾಯಮಂಡಳಿಯ 2007ರ ಅಂತಿಮ ತೀರ್ಪು ಮತ್ತು 2018ರ ಸುಪ್ರೀಂಕೋರ್ಟ್ ತೀರ್ಪನ್ನು ಉಲ್ಲಂಘಿಸುತ್ತದೆ ಎಂದು ತಮಿಳುನಾಡು ಸರ್ಕಾರ ಆರೋಪಿಸಿತ್ತು. ಕೇಂದ್ರ ಸರ್ಕಾರವು ತಾಂತ್ರಿಕ, ಪರಿಸರ, ಅರಣ್ಯ ಅಥವಾ ಯಾವುದೇ ಅನುಮೋದನೆ ನೀಡಬಾರದು ಎಂದು ಒತ್ತಾಯಿಸಲಾಗಿತ್ತು. ಕೇಂದ್ರ ಜಲ ಆಯೋಗ ಡಿಪಿಆರ್ ಪರಿಶೀಲಿಸಬಾರದು ಎಂದೂ ಕೋರಲಾಗಿತ್ತು. ತಮಿಳುನಾಡು ಸರ್ಕಾರ ಕಾನೂನು ತಜ್ಞರೊಂದಿಗೆ ಸಮಾಲೋಚನೆ ನಡೆಸುತ್ತಿದೆ. ಮೇಕೆದಾಟು ವಿಚಾರಕ್ಕಾಗಿ ಪ್ರತ್ಯೇಕ ನ್ಯಾಯಮಂಡಳಿ ರಚಿಸುವುದನ್ನು ಪರಿಗಣಿಸಲಾಗುತ್ತಿದೆ.

**ಮೇಕೆದಾಟು ಯೋಜನೆ ಕುರಿತು ಕರ್ನಾಟಕಕ್ಕೆ ಮಹತ್ವದ ಬೆಳವಣಿಗೆ ಸಿಕ್ಕಿದೆ. ಯೋಜನೆ ಜಾರಿಗೊಳಿಸಲು ತಮಿಳುನಾಡು, ಕೇರಳ ಅಥವಾ ಪುದುಚೇರಿಯ ಸಮ್ಮತಿ ಕಡ್ಡಾಯವಲ್ಲ ಎಂದು ಕೇಂದ್ರ ಜಲಶಕ್ತಿ ಸಚಿವಾಲಯ ಸ್ಪಷ್ಟಪಡಿಸಿದೆ. ರಾಜ್ಯಸಭೆಯಲ್ಲಿಂದು ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ತಮಿಳುನಾಡು ಸಂಸದ ಕೇಳಿದ ಪ್ರಶ್ನೆಗೆ ಕೇಂದ್ರ ಜಲಶಕ್ತಿ ಖಾತೆ ರಾಜ್ಯ ಸಚಿವ ರಾಜ್ ಭೂಷಣ್ ಚೌಧರಿ ಲಿಖಿತ ಉತ್ತರ ನೀಡಿದ್ದಾರೆ.**

• ಉದಯವಾಹಿನಿ, ದೆಹಲಿ

ಮೇಕೆದಾಟು ಯೋಜನೆಗೆ ಕರ್ನಾಟಕವು ತಮಿಳುನಾಡು, ಕೇರಳ ಹಾಗೂ ಪುದುಚೇರಿಯಂತಹ ನೆರೆ ರಾಜ್ಯಗಳ ಪ್ರತ್ಯೇಕ ಒಪ್ಪಿಗೆ ಪಡೆಯುವ ಅಗತ್ಯವಿಲ್ಲ ಎಂದು ಕೇಂದ್ರ ಜಲಶಕ್ತಿ ಸಚಿವಾಲಯ ಸ್ಪಷ್ಟಪಡಿಸಿದೆ. ರಾಜ್ಯಸಭೆಯಲ್ಲಿ ಸೋಮವಾರ ನಡೆದ ಪ್ರಶ್ನೋತ್ತರ ಅವಧಿಯಲ್ಲಿ ತಮಿಳುನಾಡಿನ ಸಂಸದ ಡಾ. ಅನ್ಬುಮಣಿ ರಾಮದಾಸ್ ಕೇಳಿದ ಪ್ರಶ್ನೆಗೆ ಕೇಂದ್ರ ಜಲಶಕ್ತಿ ಖಾತೆ ರಾಜ್ಯ ಸಚಿವ ರಾಜ್ ಭೂಷಣ್ ಚೌಧರಿ ಲಿಖಿತ ಉತ್ತರ ನೀಡಿದ್ದು, ಗಡಿಯೊಳಗೆ ನೀರು ಬಳಕೆಗೆ ಕರ್ನಾಟಕಕ್ಕೆ ಪೂರ್ಣ ಅಧಿಕಾರ ಇದೆ. ಸುಪ್ರೀಂಕೋರ್ಟ್ ತೀರ್ಪಿನಲ್ಲಿ ಎಲ್ಲೂ ಒಪ್ಪಿಗೆ ಪಡೆಯಲು ಹೇಳಿಲ್ಲ ಎಂದು ಹೇಳಿದ್ದಾರೆ. ಕಾವೇರಿ ನದಿ ನೀರುವಿವಾದಕ್ಕೆ ಸಂಬಂಧಿಸಿದಂತೆ 2018ರಲ್ಲಿ ನೀಡಲಾದ ಸುಪ್ರೀಂ ಕೋರ್ಟ್ ತೀರ್ಪಿನಲ್ಲಿ, ಕಾವೇರಿ ನದಿಗೆ ಅಡ್ಡಲಾಗಿ ಯಾವುದೇ ನಿರ್ಮಾಣ ಕಾರ್ಯ ಕೈಗೊಳ್ಳಲು ಕರ್ನಾಟಕವು ತಮಿಳುನಾಡು, ಕೇರಳ ಅಥವಾ ಪುದುಚೇರಿಯಿಂದ ಅನುಮತಿ/ಸಮ್ಮತಿ ಪಡೆಯಬೇಕು ಎಂದು ಎಲ್ಲಿಯೂ ಉಲ್ಲೇಖಿಸಿಲ್ಲ ಎಂದು ಕೇಂದ್ರ ಜಲಶಕ್ತಿ ಸಚಿವಾಲಯ ಸಂಸತ್ತಿನಲ್ಲಿ ಸ್ಪಷ್ಟಪಡಿಸಿದೆ.

ಕಾವೇರಿ ನದಿಗೆ ಅಡ್ಡಲಾಗಿ ಯಾವುದೇ ರೀತಿಯ ರಚನೆಯನ್ನು ನಿರ್ಮಿಸಲು ತಮಿಳುನಾಡು, ಕೇರಳ ಮತ್ತು ಪುದುಚೇರಿ ಕೇಂದ್ರಾಡಳಿತ ಪ್ರದೇಶಗಳ ಒಪ್ಪಿಗೆಯನ್ನು ಪಡೆಯಬೇಕು ಎಂಬ ಕಾವೇರಿ ನೀರಿನ ವಿವಾದಕ್ಕೆ ಸಂಬಂಧಿಸಿದಂತೆ ಫೆಬ್ರವರಿ 2018 ರಲ್ಲಿ ಸುಪ್ರೀಂ ಕೋರ್ಟ್ ನೀಡಿದ ತೀರ್ಪಿನ ಬಗ್ಗೆ ಕೇಂದ್ರ ಸರ್ಕಾರಕ್ಕೆ ತಿಳಿದಿದೆಯೇ? ಪ್ರಸ್ತಾವಿತ ಮೇಕೆದಾಟು ಯೋಜನೆಗೆ ಕರ್ನಾಟಕ ಕೆಳಗಿನ ನದಿ ತೀರ್ಪಿನ ರಾಜ್ಯಗಳ ಒಪ್ಪಿಗೆಯನ್ನು ಪಡೆದಿದೆಯೇ ಒಪ್ಪಿಗೆ ಪಡೆದಿದ್ದಲ್ಲಿ ಅದರ ವಿವರಗಳು, ಮತ್ತು ಕೇಂದ್ರ ಸರ್ಕಾರದ ಮುಂದೆ ಪ್ರಸ್ತಾವನೆಯ ಪ್ರಸ್ತುತ ಸ್ಥಿತಿ ಏನು ಎಂದು ಪ್ರಶ್ನಿಸಿದ್ದರು.

ಕಾವೇರಿ ನದಿಗೆ ಅಡ್ಡಲಾಗಿ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಮೇಲ್ಭಾಗದ ರಾಜ್ಯವಾದ ಕರ್ನಾಟಕವು ಕೆಳಭಾಗದ ರಾಜ್ಯಗಳ ಅನುಮತಿ ಪಡೆಯುವುದು ಕಡ್ಡಾಯ ಎಂದು 2018ರ ಫೆಬ್ರವರಿ 16ರ ಸುಪ್ರೀಂ ಕೋರ್ಟ್ ತೀರ್ಪಿನಲ್ಲಿ ಉಲ್ಲೇಖವಾಗಿಲ್ಲ.

2007ರ ಕಾವೇರಿ ನೀರು ವಿವಾದ ನ್ಯಾಯಾಧಿಕರಣದ ತೀರ್ಪಿನ 18ನೇ ವಿಧಿಯನ್ನು ಸುಪ್ರೀಂಕೋರ್ಟ್ ಎತ್ತಿಹಿಡಿದಿದೆ. ಇದರ ಪ್ರಕಾರ, ನ್ಯಾಯಾಧಿಕರಣದ ಆದೇಶಕ್ಕೆ ಧಕ್ಕೆಯಾಗದಂತೆ ತಮ್ಮ ಗಡಿಭಾಗದ ವ್ಯಾಪ್ತಿಯಲ್ಲಿ ನೀರಿನ ಬಳಕೆ ಅಥವಾ ಸೌಲಭ್ಯವನ್ನು ನಿಯಂತ್ರಿಸುವ ಹಕ್ಕು ಆಯಾ ರಾಜ್ಯಗಳಿಗೆ ಇದೆ. ಕರ್ನಾಟಕ ಸರ್ಕಾರವು 2019ರಲ್ಲಿ ಸಲ್ಲಿಸಿದ್ದ 'ಮೇಕೆದಾಟು ಜಲಾಶಯ ಮತ್ತು ಕುಡಿಯುವ ನೀರಿನ ಯೋಜನೆ'ಯ ಸಮಗ್ರ ಯೋಜನಾ ವರದಿಯನ್ನು ಹಿಂತಿರುಗಿಸಲಾಗಿದೆ.

ನ್ಯಾಯಾಧಿಕರಣದ ಆದೇಶ ಹಾಗೂ ಕೇಂದ್ರ ಜಲ ಆಯೋಗದ ಪ್ರಸ್ತುತ ಮಾರ್ಗದರ್ಶಿ ಸೂತ್ರಗಳಿಗೆ ಅನುಗುಣವಾಗಿ ಪರಿಷ್ಕೃತ ವರದಿಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ ಎಂದು ಉತ್ತರದಲ್ಲಿ ತಿಳಿಸಲಾಗಿದೆ.

ಕಾವೇರಿ ಕಣಿವೆಯ ಹಾರಂಗಿ, ಹೇಮಾವತಿ, ಕೆ.ಆರ್.ಎಸ್, ಕಬಿನಿ ಜಲಾಶಯಗಳ ಒಟ್ಟು ಸಾಮರ್ಥ್ಯ 114.57 ಟಿಎಂಸಿ ಆಗಿದ್ದು, ಪ್ರಸ್ತುತ 59.91 ಟಿಎಂಸಿ (ಶೇ. 52) ಸಂಗ್ರಹವಿದೆ. ಕಳೆದ ವರ್ಷ ಇದೇ ಸಮಯದಲ್ಲಿ 110.80 ಟಿಎಂಸಿ ಭರ್ತಿಯಾಗಿತ್ತು. ಬೆಂಗಳೂರು ವಿಭಾಗದ ಪ್ರಮುಖ ಜಲಾಶಯದ ಕೆಆರ್‌ಎಸ್ ನಲ್ಲಿ ಕಳೆದ ವರ್ಷ 47.58 ಟಿಎಂಸಿ ನೀರಿದ್ದರೆ, ಪ್ರಸ್ತುತ ಕೇವಲ 17.32 ಟಿಎಂಸಿ ನೀರು ಮಾತ್ರ ಲಭ್ಯವಿದೆ. ಈ ವರ್ಷ ಕಾವೇರಿ ಕಣಿವೆಯಲ್ಲಿ ಬರದ ಛಾಯೆ ಆವರಿಸುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ.

## ಜಲ ಸಂಪನ್ಮೂಲ ಇಲಾಖೆ ಅಧಿಕಾರಿಗಳ ಜತೆ CM ಸಭೆ




ಮೇಕೆದಾಟು, ಮಹದಾಯಿ ಸೇರಿದಂತೆ ರಾಜ್ಯದ ಕುಡಿಯುವ ನೀರು, ಜಲ ಸಂಪನ್ಮೂಲ ಯೋಜನೆಗಳ ಸ್ಥಿತಿಗತಿ, ರಾಜ್ಯದ ಜಲಾಶಯಗಳಲ್ಲಿನ ನೀರಿನ ಪರಿಸ್ಥಿತಿ ಮತ್ತಿತರ ವಿಚಾರಗಳ ಬಗ್ಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕಾನೂನು ಮತ್ತು ಜಲ ಸಂಪನ್ಮೂಲ ಇಲಾಖೆಗಳ ಹಿರಿಯ ಅಧಿಕಾರಿಗಳ ಜತೆ ದೆಹಲಿಯ ಕರ್ನಾಟಕ ಭವನದಲ್ಲಿ ಸೋಮವಾರ ಸಮಾಲೋಚನೆ ನಡೆಸಿದರು.

● ರಾಜ್ಯಸಭೆಯಲ್ಲಿ ಕೇಂದ್ರ ಸರ್ಕಾರದ ಸ್ಪಷ್ಟನೆ ● ತಮಿಳುನಾಡು ಸಿಎಂ ವಿಜಯ್ ಹೇಳಿಕೆ ಖಂಡಿಸಿ ಖಾಲಿ ಕೊಡ ಚಳವಳಿ ● ಕರ್ನಾಟಕಕ್ಕೆ ತಮಿಳುನಾಡಿನ ಒಪ್ಪಿಗೆ ಅಗತ್ಯವಿಲ್ಲ ಎಂದ ಕೇಂದ್ರ ಜಲಶಕ್ತಿ ಸಚಿವಾಲಯ

## ಮೇಕೆದಾಟು ಯೋಜನೆಗೆ ವಿಜಯ್ ವಿರೋಧ

ಅತ್ತ ವಿಜಯ್ ನೇತೃತ್ವದ ತಮಿಳುನಾಡು ಸರ್ಕಾರ ಹಾಗೂ ಅವರ ತಮಿಳಗ ವೆಟ್ರಿ ಕಳಗಂ ಪಕ್ಷ ಮೇಕೆದಾಟು ಯೋಜನೆಯನ್ನು ತೀವ್ರವಾಗಿ ವಿರೋಧಿಸುತ್ತಿದೆ.

ಸಿಎಂ ಸಿ. ಜೋಸೆಫ್ ವಿಜಯ್ ಅವರು ಈ ವಿಚಾರದಲ್ಲಿ ಸ್ಪಷ್ಟ ಮತ್ತು ಕಠಿಣ ನಿಲುವು ತೆಗೆದುಕೊಂಡಿದ್ದಾರೆ. ಜೂನ್ 19, 2026ರಂದು ಸಿಎಂ ವಿಜಯ್ ಮಂಡಿಸಿದ ನಿರ್ಣಯವನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು.

1 ಮೇಕೆದಾಟು ಯೋಜನೆಗೆ ನೆರೆ ರಾಜ್ಯಗಳ ಒಪ್ಪಿಗೆ ಅಗತ್ಯವಿಲ್ಲ

2 ರಾಜ್ಯಸಭೆಯಲ್ಲಿ ಕೇಂದ್ರ ಜಲಶಕ್ತಿ ಸಚಿವಾಲಯದಿಂದ ಸ್ಪಷ್ಟನೆ

3 ತಮಿಳುನಾಡು ಸಂಸದ ಎ.ರಾಮದಾಸ್ ಪ್ರಶ್ನೆಗೆ ಕೇಂದ್ರ ಉತ್ತರ

**ಕಾವೇರಿ ಕಣಿವೆಯಲ್ಲಿ ಬರದ ಛಾಯೆ**

## ಕರ್ನಾಟಕಕ್ಕೆ ಅನುಕೂಲ

ಮೇಕೆದಾಟು ಯೋಜನೆ ಬೆಂಗಳೂರಿಗೆ ಕುಡಿಯುವ ನೀರು ಒದಗಿಸಲು ಮತ್ತು ಹೆಚ್ಚುವರಿ ನೀರನ್ನು ಸಂಗ್ರಹಿಸಲು ಉದ್ದೇಶಿಸಲಾಗಿತ್ತು. ಕರ್ನಾಟಕ ಸರ್ಕಾರ 2019ರಲ್ಲಿ ಸಲ್ಲಿಸಿದ್ದ ವಿಸ್ತೃತ ಯೋಜನಾ ವರದಿ ಹಿಂತಿರುಗಿಸಲಾಗಿದ್ದು, ನ್ಯಾಯಮಂಡಳಿ ಆದೇಶ ಮತ್ತು ಕೇಂದ್ರ ಜಲ ಆಯೋಗದ ಮಾರ್ಗದರ್ಶನಕ್ಕೆ ಅನುಗುಣವಾಗಿ ಪರಿಷ್ಕೃತ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ. ಈ ಸ್ಪಷ್ಟನೆ ಕರ್ನಾಟಕಕ್ಕೆ ಅನುಕೂಲಕರವಾಗಿದ್ದು, ಯೋಜನೆ ಮುಂದುವರಿಕೆಗೆ ದಾರಿ ಮಾಡಿಕೊಡುತ್ತದೆ.

ಕಾವೇರಿ ನದಿಗೆ ಅಡ್ಡಲಾಗಿ ಯಾವುದೇ ರೀತಿಯ ರಚನೆಯನ್ನು ನಿರ್ಮಿಸಲು ತಮಿಳುನಾಡು, ಕೇರಳ ಮತ್ತು ಪುದುಚೇರಿ ಕೇಂದ್ರಾಡಳಿತ ಪ್ರದೇಶಗಳ ಒಪ್ಪಿಗೆಯನ್ನು ಪಡೆಯಬೇಕು ಎಂಬ ಫೆಬ್ರವರಿ 2018ರಲ್ಲಿ ಸುಪ್ರೀಂಕೋರ್ಟ್ ನೀಡಿದ ತೀರ್ಪಿನ ಬಗ್ಗೆ ಕೇಂದ್ರ ಸರ್ಕಾರಕ್ಕೆ ತಿಳಿದಿದೆಯೇ? ಪ್ರಸ್ತಾವಿತ ಮೇಕೆದಾಟು ಯೋಜನೆಗೆ ಕರ್ನಾಟಕ ಕೆಳಗಿನ ನದಿ ತೀರ್ಪಿನ ರಾಜ್ಯಗಳ ಒಪ್ಪಿಗೆಯನ್ನು ಪಡೆದಿದೆಯೇ? ಮತ್ತು ಕೇಂದ್ರ ಸರ್ಕಾರದ ಮುಂದೆ ಪ್ರಸ್ತಾವನೆಯ ಪ್ರಸ್ತುತ ಸ್ಥಿತಿ ಏನು ಎಂದು ಪ್ರಶ್ನಿಸಿದ್ದರು.

# ತೀವ್ರ ಚರ್ಚೆಗೆ ಗ್ರಾಸವಾಗಿದೆ ಡಿಜಿಟಲ್ ಸಮಾಲೋಚನಾ ವರ್ಗಾವಣಾ ವ್ಯವಸ್ಥೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದ ಮುದ್ರಾಂಕ ಮತ್ತು ನೋಂದಣಿ ಇಲಾಖೆಯಲ್ಲಿ ವರ್ಗಾವಣೆ ಪ್ರಕ್ರಿಯೆಯನ್ನು ಸಂಪೂರ್ಣ ಪಾರದರ್ಶಕಗೊಳಿಸುವ ಉದ್ದೇಶದಿಂದ ಜಾರಿಗೆ ತರಲು ಉದ್ದೇಶಿಸಿರುವ ಡಿಜಿಟಲ್ ಸಮಾಲೋಚನಾ ವರ್ಗಾವಣೆ ವ್ಯವಸ್ಥೆಯು ಪ್ರಸ್ತುತ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಈ ಹೊಸ ಪದ್ಧತಿಯನ್ನು ರದ್ದುಗೊಳಿಸಬೇಕು ಅಥವಾ ಮುಂದಿನ ವರ್ಷಕ್ಕೆ ಮುಂದೂಡಬೇಕು ಎಂಬ ಒತ್ತಡಗಳು ಕೇಳಿಬಂದಿದ್ದು, ಇಲಾಖೆಯಲ್ಲಿ ಪರ-ವಿರೋಧದ ಬಿಸಿ ಮುಟ್ಟಿದೆ.

ಇಲಾಖೆಯಲ್ಲಿ ವರ್ಷಗಳಿಂದ ಬೇರೂರಿದ್ದ ಭ್ರಷ್ಟಾಚಾರ, ರಾಜಕೀಯ ಲಾಬಿ ಮತ್ತು ಪ್ರಭಾವಿ ಸ್ಥಳಗಳಿಗೆ (ವಿಶೇಷವಾಗಿ ಬೆಂಗಳೂರು ಹಾಗೂ ಅಧಿಕ ಆದಾಯ ಬರುವ ಪ್ರದೇಶಗಳಿಗೆ) ವರ್ಗಾವಣೆ ಪಡೆಯಲು ನಡೆಯುತ್ತಿದ್ದ ಅವ್ಯವಹಾರಗಳಿಗೆ ಕಡಿವಾಣ ಹಾಕಲು ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿತ್ತು.

ರಾಜ್ಯ ಸರ್ಕಾರವು ಮೇ 27, 2026 ರಂದು ಕರ್ನಾಟಕ ನಾಗರಿಕ ಸೇವಾ (ಮುದ್ರಾಂಕ ಮತ್ತು ನೋಂದಣಿ ಇಲಾಖೆಯಲ್ಲಿ ಸಮಾಲೋಚನೆ ಆಧರಿತ ವರ್ಗಾವಣೆ) ನಿಯಮಗಳು-2026 ಅನ್ನು ಅಧಿಕೃತವಾಗಿ ಅಧಿಸೂಚಿಸಿತು. ಹಿರಿಯ ಉಪ ನೋಂದಣಾಧಿಕಾರಿಗಳು, ಉಪ ನೋಂದಣಾಧಿಕಾರಿಗಳು



ಹಾಗೂ ಪ್ರಥಮ ದರ್ಜೆ ಸಹಾಯಕರ ವರ್ಗಾವಣೆಯನ್ನು ಕೇವಲ ಡಿಜಿಟಲ್ ಸಮಾಲೋಚನೆ ಮೂಲಕವೇ ನಡೆಸಲು ನಿರ್ಧರಿಸಲಾಗಿತ್ತು. ನೋಂದಣಿ ಕಚೇರಿಗಳನ್ನು ಎ, ಬಿ ಮತ್ತು ಸಿ ವಲಯಗಳಾಗಿ ವಿಂಗಡಿಸಿ, ನಿರ್ದಿಷ್ಟ ಅವಧಿ ಪೂರೈಸಿದವರನ್ನು ಕಡ್ಡಾಯ ವರ್ಗಾವಣೆಗೊಳಪಡಿಸಲು ಕಟ್ಟುನಿಟ್ಟಿನ ಮಾನದಂಡಗಳನ್ನು ರೂಪಿಸಲಾಗಿತ್ತು.

ಕರ್ನಾಟಕ ರಾಜ್ಯ ಮುದ್ರಾಂಕ ಮತ್ತು ನೋಂದಣಿ ಇಲಾಖೆ ನೌಕರರ ಸಂಘ ಹಾಗೂ ಒಂದು ವರ್ಗದ ಅಧಿಕಾರಿಗಳು ಈ ಡಿಜಿಟಲ್ ಸಮಾಲೋಚನಾ ಪ್ರಕ್ರಿಯೆಯನ್ನು ವಿರೋಧಿಸಿ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ. ಪ್ರಸ್ತುತ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಅಥವಾ ತರಾತುರಿಯಲ್ಲಿ ವರ್ಗಾವಣೆ ಮಾಡುವುದರಿಂದ ಅಧಿಕಾರಿಗಳ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತದೆ ಮತ್ತು ಕುಟುಂಬದ ನಿರ್ವಹಣೆಗೆ ವ್ಯತ್ಯಯವಾಗುತ್ತದೆ ಎಂಬ ವಾದವನ್ನು ನೌಕರರ ಸಂಘ ಮುಂದಿಟ್ಟಿದೆ. ಇಲಾಖೆಯಲ್ಲಿ ವರ್ಗಾವಣೆಗೆ ಅರ್ಹವಿರುವ ಒಟ್ಟು ಅಧಿಕಾರಿಗಳ ಸಂಖ್ಯೆ ತೀರಾ ಕಡಿಮೆಯಿರುವಾಗ (ಶೇಕಡಾ 6ರಷ್ಟು ಮಾತ್ರ), ಇಡೀ ಡಿಜಿಟಲ್ ಸಮಾಲೋಚನಾ ಪ್ರಕ್ರಿಯೆಯನ್ನು ಜಾರಿಗೊಳಿಸುವುದು ಅಪ್ರಾಯೋಗಿಕ ಎಂಬುದು ಅವರ ವಾದ. ಡಿಜಿಟಲ್ ಮಾಲೋಚನೆಯಿಂದ ಆಡಳಿತಾತಕ ಸುಧಾರಣೆ ಮತ್ತು ಹಿರಿಯ ಅಧಿಕಾರಿಗಳ ವಿವೇಚನಾ ಅಧಿಕಾರಕ್ಕೆ ಕತ್ತರಿ ಬೀಳಲಿದೆ ಎಂಬುದು ವಿರೋಧಿಸುವವರ ಅಭಿಪ್ರಾಯ.

## ಪರವಾಗಿರುವವರ ವಾದ

ಮತ್ತೊಂದೆಡೆ, ಇಲಾಖೆಯ ಕೆಲ ಪ್ರಾಮಾಣಿಕ ಅಧಿಕಾರಿಗಳು ಮತ್ತು ಸುಧಾರಣಾ ವಾದಿಗಳು ಹೊಸ ಡಿಜಿಟಲ್ ಪದ್ಧತಿಯನ್ನು ಬಲವಾಗಿ ಸಮರ್ಥಿಸಿಕೊಂಡಿದ್ದಾರೆ. ಸಿಂಡಿಕೇಟ್‌ಗಳಿಗೆ ಬ್ರೇಕ್ ಕೆಲವು ಪ್ರಭಾವಿ ಅಧಿಕಾರಿಗಳು ಹಣ ಮತ್ತು ರಾಜಕೀಯ ಪ್ರಭಾವ ಬಳಸಿ ಕೇವಲ ಲಾಭದಾಯಕ ಕಚೇರಿಗಳಲ್ಲೇ ವರ್ಷಗಟ್ಟಲೆ ತಿಷ್ಠೆ ಹೂಡುವುದನ್ನು ತಪ್ಪಿಸಲು ಈ ವ್ಯವಸ್ಥೆ ಅತ್ಯಗತ್ಯ ಎಂದು ವಾದಿಸಲಾಗಿದೆ. ಡಿಜಿಟಲ್ ಸಮಾಲೋಚನೆ ಜಾರಿಗೆ ಬಂದರೆ ಯಾವುದೇ ಶಿಫಾರಸು ಇಲ್ಲದೆ, ಪಾರದರ್ಶಕವಾಗಿ ಕೌನ್ಸೆಲಿಂಗ್ ಮೂಲಕ ಯೋಗ್ಯ ಸ್ಥಳಗಳಿಗೆ ನಿಯೋಜನೆ ಪಡೆಯಲು ಪ್ರಾಮಾಣಿಕ ಸಿಬ್ಬಂದಿಗೆ ನ್ಯಾಯ ಸಿಗುತ್ತದೆ ಎಂಬುದು ಇವರ ವಾದವಾಗಿದೆ. ಕಂದಾಯ ಸಚಿವರು ಹಾಗೂ ಉನ್ನತ ಮಟ್ಟದ ಅಧಿಕಾರಿಗಳ ಜೊತೆ ನಡೆದ ಸಭೆಗಳಲ್ಲಿ ಈ ಕುರಿತು ಸಾಧಕ-ಬಾಧಕಗಳ ಚರ್ಚೆ ನಡೆಲಾಗಿದೆ. ನೌಕರರ ಸಂಘವು ಈ ವ್ಯವಸ್ಥೆಯನ್ನು ಕನಿಷ್ಠ ಒಂದು ವರ್ಷ ಮುಂದೂಡಬೇಕೆಂದು ಪಟ್ಟು ಹಿಡಿದಿದ್ದರೆ, ಸಾರ್ವಜನಿಕ ವಲಯದಲ್ಲಿ ಮತ್ತು ಇಲಾಖೆಯ ಪಾರದರ್ಶಕತೆಯನ್ನು ಬಯಸುವವರಿಂದ ಇದಕ್ಕೆ ತೀವ್ರ ಬೆಂಬಲ ವ್ಯಕ್ತವಾಗಿದೆ. ಕಂದಾಯ ಇಲಾಖೆಯು ಈ ಕುರಿತು ಸಾಧಕ-ಬಾಧಕಗಳ ಸಮಗ್ರ ವರದಿಯನ್ನು ಸಿದ್ಧಪಡಿಸುತ್ತಿದ್ದು, ಸರ್ಕಾರದ ಅಂತಿಮ ನಿರ್ಧಾರದ ಮೇಲೆ ಇಲಾಖೆಯ ಮುಂದಿನ ಆಡಳಿತಾತಕ ಸುಧಾರಣೆಗಳು ನಿಂತಿವೆ.

**ಈ ದಿನದ ದರ** ಪೆಟ್ರೋಲ್: 111.37 ₹/L ಡೀಸೆಲ್ : 99.26 ₹/L ಬಂಗಾರ: ₹ 14,589 /Gram 24ct ₹13,370/Gram 22ct ಬೆಳ್ಳಿ: ₹235.00/Gram

# ಹೊಸ ಸಚಿವರಿಗೆ ವರ್ಗಾವಣೆ ಅಧಿಕಾರವಿಲ್ಲ

• ಉದಯವಾಹಿನಿ, ಬೆಂಗಳೂರು

ಮುಂದಿನ ಮೂರ್ನಾಲ್ಕು ದಿನಗಳಲ್ಲಿ ಅಧಿಕಾರ ಸ್ವೀಕರಿಸಲಿರುವ ನೂತನ ಸಚಿವರು ರಾಜ್ಯ ಸರಕಾರದ ಸಾರ್ವಜನಿಕ ವರ್ಗಾವಣೆಯಿಂದ ವಂಚಿತವಾಗಿದ್ದಾರೆ ಹೌದು, ರಾಜ್ಯ ಸಚಿವ ಸಂಪುಟ ವಿಸ್ತರಣೆಗೆ ಕ್ಷಣಗಣನೆ ಶುರುವಾಗಿದ್ದು, ಶೀಘ್ರವೇ ನೂತನ ಸಚಿವರು ಅಧಿಕಾರ ಸ್ವೀಕರಿಸಲಿದ್ದಾರೆ. ಆದರೆ ಅವರಿಗೆ ಆರಂಭಿಕ ಸಮಸ್ಯೆ ಎನ್ನುವಂತೆ ವರ್ಗಾವಣೆ ಅವಕಾಶ ಕೈತಪ್ಪಿ ಹೋಗಿದೆ.

ನೂತನ ಸಚಿವರು ಅಧಿಕಾರ ಆರಂಭಿಸಿದರೂ ತಮ್ಮ ವಿವೇಚನೆಯಂತೆ ತಮ್ಮ ಇಲಾಖೆ ವ್ಯಾಪ್ತಿಯ ಸಿಬ್ಬಂದಿಯನ್ನು ಇಚ್ಚಿಸಿದಂತೆ ವರ್ಗಾವಣೆ ಮಾಡಲಾಗದು, ಕಾರಣ ಅದಕ್ಕಾಗಿ ನಿಗದಿ ಮಾಡಿದ್ದ ಅವಧಿ ಮುಕ್ತಾಯಗೊಂಡಿದ್ದು, ಸಚಿವರಾಗಿ ಬರುವವರು ಯಾವುದೇ ಸಿಬ್ಬಂದಿಯ ವರ್ಗಾವಣೆಗೂ ಮುಂತ್ರಿಗಳಿಗೆ ಮನವಿ ಸಲ್ಲಿಸಿ ಅವರಿಂದ ಅನುಮೋದನೆ ಪಡೆದು ವರ್ಗಾವಣೆ ಮಾಡಿಸಿಕೊಳ್ಳಬೇಕಾಗಿದೆ.

ಒಂದು ವೇಳೆ ಕೆಲವು ಸಿಬ್ಬಂದಿ ಈಗಾಗಲೇ ವರ್ಗಾವಣೆಯಾಗಿದ್ದರೆ ಅವರನ್ನು ಸಚಿವರು ಕೂಡ ಬದಲಿಸುವುದು ಕಷ್ಟ. ಈಗಾಗಲೇ ವರ್ಗಾವಣೆಯಾಗಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯನ್ನು ಮುಖ್ಯಮಂತ್ರಿಗಳ ಆದೇಶದ ಮೂಲಕ ಮತ್ತೆ ವರ್ಗಾವಣೆ ಮಾಡಿಸದೆ ಅಂಥ ಸಿಬ್ಬಂದಿ ತಮ್ಮ ವಿರುದ್ಧದ ವರ್ಗಾವಣೆ ಆದೇಶವನ್ನು ಕೋರ್ಟ್‌ನಲ್ಲಿ ಪ್ರಶ್ನಿಸುವ ಸಾಧ್ಯತೆ ಹೆಚ್ಚಾಗಿರುತ್ತದೆ. ಹೀಗಾಗಿ ನೂತನ ಸಚಿವರು ವರ್ಗಾವಣೆಯಿಂದ ವಂಚಿತರಾಗಿದ್ದಾರೆ. ಒಂದು ವೇಳೆ ಸಂಪುಟದಲ್ಲಿ ಇದರ ಬಗ್ಗೆ ನಿರ್ಧರಿಸಿ ಮತ್ತೆ ವರ್ಗಾವಣೆ ಆದೇಶ ಮಾಡಬಹುದು.

# ಭಾರೀ ಅಗ್ನಿ ಅವಘಡ: ಕ್ಷಣಾರ್ಧದಲ್ಲಿ ಹೊತ್ತಿ ಉರಿದ 4 ಖಾಸಗಿ ಬಸ್‌ಗಳು!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬೆಂಗಳೂರು ನಗರ ಹೊರವಲಯದ ಆನೇಕಲ್ ತಾಲ್ಲೂಕಿನ ಹಳೆ ಚಂದಾಪುರ ಸಮೀಪ ಸಂಭವಿಸಿದ ಭಾರೀ ಅಗ್ನಿ ಅವಘಡದಲ್ಲಿ ನಾಲ್ಕು ಖಾಸಗಿ ಬಸ್‌ಗಳು ಸಂಪೂರ್ಣ ಸುಟ್ಟು ಕರಕಲಾಗಿವೆ. ಘಟನೆಯಿಂದ ಸ್ಥಳೀಯ ನಿವಾಸಿಗಳು ಹಾಗೂ ಸಂಚಾರಿಗರಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಭಾನುವಾರ ಮಧ್ಯಾಹ್ನ ಸುಮಾರು 3.10 ಗಂಟೆ ವೇಳೆಗೆ ನಿಲ್ಲಿಸಿದ್ದ ನಾಲ್ಕು ಖಾಸಗಿ ಬಸ್‌ಗಳಿಗೆ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಕೆಲವೇ ಕ್ಷಣಗಳಲ್ಲಿ ಅಗ್ನಿಜ್ವಾಲೆಗಳು ಬಸ್‌ಗಳನ್ನು ಸಂಪೂರ್ಣ ಆವರಿಸಿವೆ. ಪ್ರತ್ಯಕ್ಷದರ್ಶಿಗಳ ಪ್ರಕಾರ, ಬೆಂಕಿಯಿಂದ ದಟ್ಟ ಹೊಗೆ ಆಕಾಶದೆತ್ತರಕ್ಕೆ ಏರಿದ್ದು, ದೂರದ ಪ್ರದೇಶಗಳಿಂದಲೂ ಹೊಗೆ ಗೋಚರಿಸಿತು. ಇದರಿಂದ ಸುತ್ತಮುತ್ತಲಿನ ಜನರಲ್ಲಿ ಭಯದ ವಾತಾವರಣ ಉಂಟಾಗಿ, ಹಲವರು ಸುರಕ್ಷಿತ ಸ್ಥಳಗಳಿಗೆ ಓಡಿಹೋದರು ಎನ್ನಲಾಗಿದೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ತಕ್ಷಣವೇ ಬೆಂಕಿ ನಂದಿಸುವ ಕಾರ್ಯಾಚರಣೆ ಆರಂಭಿಸಿದರು. ಸತತ ಪ್ರಯತ್ನದ ಬಳಿಕ ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಗಿದ್ದು, ಸಮೀಪದ ಆಸ್ತಿಗಳು ಹಾಗೂ ಇತರ ವಾಹನಗಳಿಗೆ ಬೆಂಕಿ ವ್ಯಾಪಿಸುವುದನ್ನು ತಡೆಯುವಲ್ಲಿ ಯಶಸ್ವಿಯಾದರು.

ಪ್ರಾಥಮಿಕ ಮಾಹಿತಿಯ ಪ್ರಕಾರ, ಬೆಂಕಿಯ ತೀವ್ರತೆಗೆ ನಾಲ್ಕೂ ಖಾಸಗಿ ಬಸ್‌ಗಳು ಸಂಪೂರ್ಣ ಸುಟ್ಟು ಭಸ್ಮವಾಗಿದ್ದು, ಕೋಟ್ಯಂತರ ರೂಪಾಯಿ ಮೌಲ್ಯದ ನಷ್ಟ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ. ಆದರೆ, ಘಟನೆಯ ವೇಳೆ ಯಾವುದೇ ಪ್ರಯಾಣಿಕರು ಅಥವಾ ಸಿಬ್ಬಂದಿ ಬಸ್‌ಗಳಲ್ಲಿ ಇರದ ಕಾರಣ ಯಾರಿಗೂ ಗಾಯಗಳಾಗಿಲ್ಲ ಅಥವಾ ಪ್ರಾಣಹಾನಿ ಸಂಭವಿಸಿಲ್ಲ.

# ಮೊಬೈಲ್ ಅಂಗಡಿ ಸಿಬ್ಬಂದಿಗಳ ನಡುವೆ ಮಾರಾಮಾರಿ, 17 ಮಂದಿ ವಿರುದ್ಧ ಪ್ರಕರಣ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜಧಾನಿ ಬೆಂಗಳೂರಿನ ರಾಜ್‌ಕುಮಾರ್ ರಸ್ತೆಯಲ್ಲಿ ಎರಡು ಮೊಬೈಲ್ ಅಂಗಡಿಗಳ ಮಾಲೀಕರು ಹಾಗೂ ಅವರ ಸಿಬ್ಬಂದಿಗಳ ನಡುವೆ ನಡೆದ ಭೀಕರ ಮಾರಾಮಾರಿ ಕೆಲಕಾಲ ಸಂಚಾರ ಅಸ್ತವ್ಯಸ್ತಗೊಳಿಸಿ ಸಾರ್ವಜನಿಕರಲ್ಲಿ ಆತಂಕ ಮೂಡಿಸಿತು. ತಕ್ಷಣ ಸ್ಥಳಕ್ಕಾಗಮಿಸಿದ ಮಾಗಡಿ ರಸ್ತೆ ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದು 17 ಮಂದಿಯ ವಿರುದ್ಧ ಗಲಾಟೆ ಪ್ರಕರಣ ದಾಖಲಿಸಿದ್ದಾರೆ. ಜುಲೈ 23, 2026ರ ರಾತ್ರಿ ಸುಮಾರು 9.40 ಗಂಟೆಗೆ ರಾಜ್‌ಕುಮಾರ್ ರಸ್ತೆಯಲ್ಲಿರುವ ಕಲರ್ಸ್ ಮೊಬೈಲ್ ಅಂಗಡಿ ಎದುರು ಈ ಘಟನೆ ನಡೆದಿದೆ ಎನ್ನಲಾಗಿದೆ. ಗಸ್ತಿನಲ್ಲಿದ್ದ ಸಹಾಯಕ ಪೊಲೀಸ್ ಉಪನಿರೀಕ್ಷಕರು (ಎಎಸ್‌ಐ) ದಾಖಲಿಸಿರುವ ಎಫ್‌ಐಆರ್ ಪ್ರಕಾರ, ಸುಮಾರು 20 ಮಂದಿ ರಸ್ತೆಯಲ್ಲೇ ಪರಸ್ಪರ ನಿಂದನೆ ಮಾಡುತ್ತಾ ಕೈಕೈ ಮಿಲಾಯಿಸುತ್ತಿರುವುದು ಕಂಡುಬಂದಿತ್ತು. ಸಾರ್ವಜನಿಕರ ಎದುರೇ ನಡೆದ ಈ ಗಲಾಟೆಯಿಂದ ರಸ್ತೆಯಲ್ಲಿ ಭಾರಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ ಕಲರ್ಸ್ ಮೊಬೈಲ್ ಮಾಲೀಕ ಸಿದ್ದರಾಜು ಆರ್ (40) ಹಾಗೂ ಸ್ಟಾರ್ ಮೊಬೈಲ್ ಮಾಲೀಕ ದೀಪಕ್ (30) ಈ ಗಲಾಟೆಯ ಪ್ರಮುಖ ಪ್ರಚೋದಕರಾಗಿರುವುದು ತಿಳಿದುಬಂದಿದೆ. ಸಣ್ಣ ವಿಚಾರಕ್ಕೆ ಆರಂಭವಾದ ವಾಗ್ವಾದ ಕ್ಷಣಾರ್ಧದಲ್ಲೇ ಹಿಂಸಾತ್ಮಕ ಘರ್ಷಣೆಯಾಗಿ ಮಾರ್ಪಟ್ಟಿದ್ದು, ಎರಡೂ ಗುಂಪಿನವರು ಪರಸ್ಪರ ಹಲ್ಲೆ ನಡೆಸಿದ್ದಾರೆ. ಪರಿಣಾಮ ರಸ್ತೆ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡಿದ್ದು, ಸಮೀಪದ ಅಂಗಡಿಗಳು ಹಾಗೂ ಆಸ್ತಿಪಾಸ್ತಿಗೆ ಹಾನಿಯಾಗುವ ಆತಂಕವೂ ಎದುರಾಯಿತು.

# ಹೊಸ 'ಎ' ಖಾತಾ ಪಡೆಯಲು ರಿಯಾಯಿತಿ: ಅರ್ಜಿ ಸಲ್ಲಿಸಲು ಆಗಸ್ಟ್ 23ರವರೆಗೆ ಗಡುವು ವಿಸ್ತರಣೆ

ಉದಯವಾಹಿನಿ ಚಿತ್ರ




• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯಲ್ಲಿ ಹೊಸ ಎ ಖಾತಾ ಪಡೆಯಲು ಅರ್ಜಿ ಸಲ್ಲಿಸುವ ಅರ್ಹ ಆಸ್ತಿಗಳಿಗೆ ವಿಧಿಸಲಾಗುತ್ತಿರುವ ಬೆಟರ್‌ಮೆಂಟ್ ಲೆವಿಯನ್ನು ಮಾರ್ಗಸೂಚಿ ಮೌಲ್ಯದ ಶೇ.5ರಿಂದ ಶೇ.2ಕ್ಕೆ ಇಳಿಸಿ ನೀಡಿರುವ ರಿಯಾಯಿತಿಯನ್ನು 2026ರ ಆಗಸ್ಟ್ 23ರವರೆಗೆ ಕರ್ನಾಟಕ ಸರ್ಕಾರ ವಿಸ್ತರಿಸಿದೆ.

ನಗರಾಭಿವೃದ್ಧಿ ಇಲಾಖೆ 2026ರ ಜುಲೈ 24ರಂದು ಹೊರಡಿಸಿರುವ ಪರಿಷ್ಕೃತ ಸರ್ಕಾರಿ ಆದೇಶದ ಪ್ರಕಾರ, ಏಕ ಗವಾಕ್ಷಿ ವ್ಯವಸ್ಥೆಯಡಿ ಹೊಸ 'ಎಖಾತಾ ಪಡೆಯಲು ಸಲ್ಲಿಸುವ ಅರ್ಜಿಗಳಿಗೆ ಆಗಸ್ಟ್ 23ರವರೆಗೆ ಶೇ.2ರ ಬೆಟರ್‌ಮೆಂಟ್ ಲೆವಿ ಅನ್ವಯವಾಗಲಿದೆ. ಹಿಂದಿನ ಅಧಿಸೂಚನೆಯ ಇತರೆ ಎಲ್ಲಾ ಷರತ್ತುಗಳು ಯಥಾಸ್ಥಿತಿಯಲ್ಲಿ ಮುಂದುವರಿಯಲಿವೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಸಲ್ಲಿಸಿದ್ದ ಪ್ರಸ್ತಾವನೆಯಲ್ಲಿ, 'ಬಿ' ಖಾತಾದಿಂದ 'ಎ' ಖಾತಾಗೆ ಪರಿವರ್ತನೆಗೆ ಶೇ.2ರ ಲೆವಿ ವಿಧಿಸಲಾಗುತ್ತಿದ್ದರೆ, ಹೊಸ 'ಎ' ಖಾತಾ ಅರ್ಜಿಗಳಿಗೆ ಶೇ.5ರ ಲೆವಿ ವಿಧಿಸಲಾಗುತ್ತಿರುವುದರಿಂದ ಸಮಾನ ಪರಿಸ್ಥಿತಿಯಲ್ಲಿರುವ ಆಸ್ತಿ ಮಾಲೀಕರ ನಡುವೆ ಅಸಮಾನತೆ ಉಂಟಾಗಿದೆ ಎಂದು ನಿವಾಸಿಗಳ ಸಂಘಗಳು ಹಾಗೂ ವಿವಿಧ ಸಂಘಟನೆಗಳು ಮನವಿ ಸಲ್ಲಿಸಿರುವುದಾಗಿ ತಿಳಿಸಿತ್ತು. ಜಿಬಿಎ ಅಡಿಯಲ್ಲಿನ ಐದು ಪುರಸಭೆಯ ನಿಗಮಗಳಿಗೆ ಆದಾಯ ಸಂಗ್ರಹವನ್ನು ಸುಧಾರಿಸುತ್ತದೆ ಎಂದು ಅಧಿಕಾರಿಗಳು ವಿಶ್ವಾಸ ವ್ಯಕ್ತ ಪಡಿಸಿದ್ದಾರೆ. ಗಡುವನ್ನು ಮೀರಿ ರಿಯಾಯಿತಿ ನೀಡುವ ಅಧಿಕಾರಿಗಳು ಶಿಸ್ತು ಕ್ರಮವನ್ನು ಎದುರಿಸಬೇಕಾಗುತ್ತದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. ಆಗಸ್ಟ್ 23ಕ್ಕೆ ಈ ರಿಯಾಯಿತಿ ಕೊನೆಗೊಳ್ಳಲಿದ್ದು, ಅರ್ಜಿದಾರರು ಆನಂತರ ಶೇ 5ರಷ್ಟು ಮೂಲ ಅಭಿವೃದ್ಧಿ ಶುಲ್ಕವನ್ನೇ ಪಾವತಿಸಬೇಕಾಗುತ್ತದೆ.

> ಜಿಬಿಎ ಅಂದಾಜಿನ ಪ್ರಕಾರ ಸುಮಾರು ಐದು ಲಕ್ಷ ಆಸ್ತಿಗಳು ಹೊಸ ಎ-ಖಾತಾಗೆ ಅರ್ಹವಾಗಿವೆ, ಆದರೆ ಇಲ್ಲಿಯವರೆಗೆ ಸುಮಾರು 7,000 ಅರ್ಜಿಗಳು ಮಾತ್ರ ಬಂದಿವೆ. ಕಡಿಮೆಯಾದ ಶುಲ್ಕವು ಹೆಚ್ಚಿನ ಆಸ್ತಿ ಮಾಲೀಕರು ಮುಂದೆ ಬರಲು ಪ್ರೋತ್ಸಾಹಿಸುತ್ತದೆ.

# ದುಬಾರಿ ಬೆಲೆಯ ಕಾರುಗಳು ಸೇರಿ 25ಕ್ಕೂ ಹೆಚ್ಚು ವಾಹನಗಳು ಸುಟ್ಟು ಭಸ್ಮ!

• ಉದಯವಾಹಿನಿ, ಬೆಂಗಳೂರು

ಸೋಮವಾರ ಬೆಳಗಿನ ಜಾವ ಇಲ್ಲಿನ ಗ್ಯಾರೇಜ್‌ನಲ್ಲಿ ಭಾರಿ ಬೆಂಕಿ ಕಾಣಿಸಿಕೊಂಡಿದ್ದು, 25ಕ್ಕೂ ಹೆಚ್ಚು ಕಾರುಗಳು ಸುಟ್ಟು ಭಸ್ಮವಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಥಣಿಸಂದ್ರದ ಕಾರ್ ಗ್ಯಾರೇಜ್‌ನಲ್ಲಿ ಬೆಳಿಗ್ಗೆ 5.30 ರ ಸುಮಾರಿಗೆ ಈ ಘಟನೆ ಸಂಭವಿಸಿದೆ. ಯಾವುದೇ ಸಾವುನೋವು ಸಂಭವಿಸಿಲ್ಲ ಎಂದು ಅವರು ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ಹಲವಾರು ದುಬಾರಿ ಬೆಲೆಯ ಕಾರುಗಳು ಸೇರಿದಂತೆ 25 ಕ್ಕೂ ಹೆಚ್ಚು ವಾಹನಗಳು ಸಂಪೂರ್ಣವಾಗಿ ಬೆಂಕಿಗೆ ಆಹುತಿಯಾಗಿವೆ. ವೇಗವಾಗಿ ಹರಡಿದ ಬೆಂಕಿಯು, ನಿಲ್ಲಿಸಿದ್ದ ವಾಹನಗಳನ್ನು ಆವರಿಸಿದೆ.

ಬೆಂಕಿಯನ್ನು ನಿಯಂತ್ರಣಕ್ಕೆ ತರಲು ಐದು ಅಗ್ನಿಶಾಮಕ ವಾಹನಗಳು ಕಾರ್ಯಾಚರಣೆ ನಡೆಸಿದವು. ಶಾರ್ಟ್ ಸರ್ಕ್ಯೂಟ್ ಬೆಂಕಿಗೆ ಕಾರಣವಾಗಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ.'25ಕ್ಕೂ ಹೆಚ್ಚು ಕಾರುಗಳು ಬೆಂಕಿಯಲ್ಲಿ ಸಂಪೂರ್ಣವಾಗಿ ಸುಟ್ಟುಹೋಗಿವೆ. ಕಾರಣವನ್ನು ಕಂಡುಹಿಡಿಯಲಿದೆ ಮತ್ತು ವಿವರವಾದ ವರದಿ ಸಲ್ಲಿಸುತ್ತದೆ.

# ಗಾಯದ ಸಮಸ್ಯೆ ಗೆದ್ದು ಗ್ಲಾಸ್ಗೋಗೆ ಹಾರಿದ ಬೆಂಗಳೂರಿನ ಯಶಸ್ ಪಲಾಕ್ಷ

• ಉದಯವಾಹಿನಿ, ಬೆಂಗಳೂರು

ದಿನಗೂಲಿ ಕಾರ್ಮಿಕರ ಕುಟುಂಬದಲ್ಲಿ ಜನಿಸಿ, ಆರ್ಥಿಕ ಸಂಕಷ್ಟಗಳ ನಡುವೆ ಬೆಳೆದ ಬೆಂಗಳೂರಿನ 24 ವರ್ಷದ ಅಥ್ಲೀಟ್ ಯಶಸ್ ಪಲಾಕ್ಷ ಇಂದು ಭಾರತದ ಅತ್ಯಂತ ವೇಗದ ಸಕ್ರಿಯ 400 ಮೀ. ಹರ್ಡಲ್ಸ್ ಓಟಗಾರನಾಗಿ ಕಾಮನ್ ವೆಲ್ತ್ ಕ್ರೀಡಾಕೂಟದಲ್ಲಿ ದೇಶವನ್ನು ಪ್ರತಿನಿಧಿಸುತ್ತಿದ್ದಾರೆ. ಹಲವು ಗಂಭೀರ ಗಾಯಗಳನ್ನು ಎದುರಿಸಿ, ನಿರಂತರ ಹಿನ್ನಡೆಗಳನ್ನು ಮೀರಿ ಅವರು ಗ್ಲಾಸ್ಗೋ ಕಾಮನ್‌ವೆಲ್ತ್ ಗೇಮ್ಸ್ 2026ಕ್ಕೆ ಅರ್ಹತೆ ಪಡೆದಿರುವುದು ಸ್ಫೂರ್ತಿದಾಯಕ ಕಥೆಯಾಗಿದೆ. ತಮ್ಮ ಅಥ್ಲೆಟಿಕ್ಸ್ ಪಯಣದ ಬಗ್ಗೆ ಮಾತನಾಡಿರುವ ಯಶಸ್, ಕ್ರೀಡೆಯೇ ತಮ್ಮ ಕನಸಾಗಿತ್ತು ಎಂದು ಹೇಳುತ್ತಾರೆ. ನಮ್ಮ ಕುಟುಂಬದವರು ಪದವಿ ಪಡೆಯುತ್ತಿದ್ದರು.

# ಆಕಾಶ ಏರ್‌ನಿಂದ ಉದಯಪುರ ಬಳಿಕ ಪಿಂಕ್ ಸಿಟಿ ಜೈಪುರಕ್ಕೂ ನೇರ ವಿಮಾನ

## ಬೆಂಗಳೂರಿನ ಟೆಕ್ಕಿಗಳಿಗೆ, ಉದ್ಯಮಿಗಳಿಗೆ ಹಾಗೂ ಪ್ರವಾಸಿಗರಿಗೆ ರಾಜಸ್ಥಾನ ಪ್ರವಾಸ ಈಗ ಮತ್ತಷ್ಟು ಸುಲಭವಾಗಲಿದೆ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಿಂದ ಗುಲಾಬಿ ನಗರ ಜೈಪುರಕ್ಕೆ ಪ್ರವಾಸ ಅಥವಾ ವ್ಯಾಪಾರ – ವಹಿವಾಟಿಗೆ ತೆರಳುವ ಕನ್ನಡಿಗರಿಗೆ ಒಂದು ಶುಭ ಸುದ್ದಿ ಇದೆ. ದೇಶದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ವಿಮಾನಯಾನ ಸಂಸ್ಥೆಯಾದ 'ಆಕಾಶ ಏರ್' ಮುಂಬರುವ ಅಕ್ಟೋಬರ್ 11, 2026ರಿಂದ ಬೆಂಗಳೂರು ಮತ್ತು ಜೈಪುರ ನಡುವೆ ದೈನಂದಿನ ನೇರ ವಿಮಾನ ಸೇವೆಯನ್ನು ಆರಂಭಿಸುವುದಾಗಿ ಘೋಷಿಸಿದೆ.

ತನ್ನ ದೇಶೀಯ ಜಾಲವನ್ನು ವಿಸ್ತರಿಸುತ್ತಿರುವ ಆಕಾಶ ಏರ್ ಪಾಲಿಗೆ ಜೈಪುರ 29ನೇ ತಾಣವಾಗಿದೆ. ರಾಜಸ್ಥಾನದ ಪ್ರಮುಖ ಪ್ರವಾಸಿ ಮತ್ತು ವಾಣಿಜ್ಯ ಕೇಂದ್ರವಾಗಿರುವ ಜೈಪುರವನ್ನು, ಭಾರತದ ಐಟಿ ರಾಜಧಾನಿ ಬೆಂಗಳೂರು ಹಾಗೂ ಆರ್ಥಿಕ ರಾಜಧಾನಿ ಮುಂಬೈಗೆ ಬೆಸೆಯುವ ನಿಟ್ಟಿನಲ್ಲಿ ಸಂಸ್ಥೆ ಮಹತ್ವದ ಹೆಜ್ಜೆ ಇಟ್ಟಿದೆ.

> **1** ಕನ್ನಡಿಗರಿಗೆ ಒಂದು ಶುಭ ಸುದ್ದಿ
> **2** ಸಂಸ್ಥೆ ಮಹತ್ವದ ಹೆಜ್ಜೆ ಇಟ್ಟಿದೆ
> **3** ದೈನಂದಿನ ನೇರ ವಿಮಾನ ಸೇವೆ

ಬೆಂಗಳೂರಿನ ಟೆಕ್ಕಿಗಳಿಗೆ, ಉದ್ಯಮಿಗಳಿಗೆ ಹಾಗೂ ಪ್ರವಾಸಿಗರಿಗೆ ರಾಜಸ್ಥಾನ ಪ್ರವಾಸ ಈಗ ಮತ್ತಷ್ಟು ಸುಲಭವಾಗಲಿದೆ. ಬೆಂಗಳೂರಿನಿಂದ ನೇರವಾಗಿ ಜೈಪುರಕ್ಕೆ ಅಕ್ಟೋಬರ್ 11ರಿಂದ ಸೇವೆ ಆರಂಭವಾಗುತ್ತಿದ್ದರೆ, ಅಕ್ಟೋಬರ್ 15ರಿಂದ ಬೆಂಗಳೂರಿನಿಂದ ರಾಜಸ್ಥಾನದ ಮತ್ತೊಂದು ಸುಂದರ ನಗರವಾದ ಉದಯಪುರಕ್ಕೂ ವಿಮಾನ ಸೇವೆಗಳು ಶುರುವಾಗಲಿವೆ.

'ಗಿಫ್ಟ್ ಸಿಟಿ'ಯಲ್ಲಿ ನೂತನ 'ಗ್ಲೋಬಲ್ ಟೆಕ್ ಸೆಂಟರ್' ಆರಂಭಿಸಿದ ಎಚ್‌ಸಿಎಲ್ ಟೆಕ್; ಯುವಕರಿಗೆ ಭರ್ಜರಿ ಉದ್ಯೋಗಾವಕಾಶಆಗಸ್ಟ್ 2022ರಲ್ಲಿ ಆರಂಭವಾಗಿ ಇದುವರೆಗೆ ಬರೋಬ್ಬರಿ 29 ದಶಲಕ್ಷಕ್ಕೂ ಹೆಚ್ಚು ಪ್ರಯಾಣಿಕರಿಗೆ ಸೇವೆ ನೀಡಿರುವ 'ಆಕಾಶ ಏರ್', ತನ್ನ ವಿಶಿಷ್ಟ ಸೌಲಭ್ಯಗಳಿಂದ ಗಮನ ಸೆಳೆಯುತ್ತಿದೆ. ಬೆಂಗಳೂರಿನಿಂದ ಜೈಪುರಕ್ಕೆ ( 1529): ಬೆಳಗ್ಗೆ 08:20ಕ್ಕೆ ಬೆಂಗಳೂರಿನಿಂದ ಹೊರಡಲಿರುವ ವಿಮಾನ ಬೆಳಗ್ಗೆ 10:50ಕ್ಕೆ ಜೈಪುರ ತಲುಪಲಿದೆ. ಜೈಪುರದಿಂದ ಬೆಂಗಳೂರಿಗೆ (ಕಿ1530): ಬೆಳಗ್ಗೆ 11:30ಕ್ಕೆ ಜೈಪುರದಿಂದ ಹೊರಡಲಿರುವ ವಿಮಾನ ಮಧ್ಯಾಹ್ನ 2:00 ಗಂಟೆಗೆ ಬೆಂಗಳೂರು ತಲುಪಲಿದೆ.ಮುಂಬೈನಿಂದ ಜೈಪುರಕ್ಕೆ (1153): ಬೆಳಗ್ಗೆ 09:10ಕ್ಕೆ ಮುಂಬೈನಿಂದ ಹೊರಡಲಿರುವ ವಿಮಾನ ಬೆಳಗ್ಗೆ 11:10ಕ್ಕೆ ಜೈಪುರ ತಲುಪಲಿದೆ.

ಜೈಪುರದಿಂದ ಮುಂಬೈಗೆ ( 1154): ಮಧ್ಯಾಹ್ನ 12:00ಕ್ಕೆ ಜೈಪುರದಿಂದ ಹೊರಡಲಿರುವ ವಿಮಾನ ಮಧ್ಯಾಹ್ನ 1:55 ಗಂಟೆಗೆ ಮುಂಬೈ ತಲುಪಲಿದೆ.

ಉದಯವಾಹಿನಿ ಚಿತ್ರ




> ಆರಾಮದಾಯಕ ಪ್ರಯಾಣ, ಚಾರ್ಜಿಂಗ್ ಸೌಲಭ್ಯ, ಕೆಫೆ ಆಕಾಶ ಮೂಲಕ ರುಚಿಕರ ಊಟ ಸಂಸ್ಥೆಯ ವಿಶೇಷತೆಯಾಗಿವೆ. ಒಟ್ಟಿನಲ್ಲಿ, ಮುಂಬರುವ ದಸರಾ - ದೀಪಾವಳಿ ರಜೆಗಳಲ್ಲಿ ರಾಜಸ್ಥಾನದತ್ತ ಪ್ರವಾಸ ಬೆಳೆಸುವ ಪ್ಲ್ಯಾನ್‌ನಲ್ಲಿರುವ ಕನ್ನಡಿಗರಿಗೆ ಆಕಾಶ ಏರ್‌ನ ಈ ಹೊಸ ಸೇವೆ ಹೇಳಿ ಮಾಡಿಸಿದಂತಿದೆ.

**ಮತ್ತೊಂದು ಮೈಲಿಗಲ್ಲಾಗಿದೆ.** ಈ ಹೊಸ ಸೇವೆಯ ಬಗ್ಗೆ ಮಾತನಾಡಿರುವ ಆಕಾಶ ಏರ್‌ನ ಸಹ ಸಂಸ್ಥಾಪಕ ಮತ್ತು ಮುಖ್ಯ ವಾಣಿಜ್ಯ ಅಧಿಕಾರಿ ಆನಂದ್ ಶ್ರೀನಿವಾಸನ್, ಜೈಪುರಕ್ಕೆ ವಿಮಾನ ಸೇವೆ ಆರಂಭಿಸುತ್ತಿರುವುದು ನಮ್ಮ ದೇಶೀಯ ನೆಟ್‌ವರ್ಕ್ ವಿಸ್ತರಣೆಯ ಮತ್ತೊಂದು ಮೈಲಿಗಲ್ಲಾಗಿದೆ.

**ನಮ್ಮ ಬದ್ಧತೆ** ರಾಜಸ್ಥಾನವು ನಮಗೆ ಪ್ರಮುಖ ಮಾರುಕಟ್ಟೆಯಾಗಿದ್ದು, ಬೆಂಗಳೂರು ಮತ್ತು ಮುಂಬೈನಂತಹ ಪ್ರಮುಖ ಆರ್ಥಿಕ ಮತ್ತು ಪ್ರವಾಸೋದ್ಯಮ ಕೇಂದ್ರಗಳನ್ನು ಪಿಂಕ್ ಸಿಟಿಯೊಂದಿಗೆ ಸಂಪರ್ಕಿಸಲು ನಾವು ಉತ್ಸುಕರಾಗಿದ್ದೇವೆ. ಪ್ರಯಾಣಿಕರಿಗೆ ಆರಾಮದಾಯಕ ಹಾಗೂ ವಿಶ್ವಾಸಾರ್ಹ ಅನುಭವ ನೀಡುವುದು ನಮ್ಮ ಬದ್ಧತೆಯಾಗಿದೆ ಎಂದು ಭರವಸೆ ನೀಡಿದ್ದಾರೆ.

ಈ ಹೊಸ ಮಾರ್ಗದ ವಿಮಾನಗಳ ಟಿಕೆಟ್ ಬುಕ್ಕಿಂಗ್ ಈಗಾಗಲೇ ಆರಂಭವಾಗಿದೆ. ಪ್ರಯಾಣಿಕರು ಆಕಾಶ ಏರ್‌ನ ಅಧಿಕೃತ ವೆಬ್‌ಸೈಟ್, ಆಪ್‌ಗಳು ಹಾಗೂ ಇತರ ಪ್ರಮುಖ ಟಿಕೆಟ್ ಬುಕ್ಕಿಂಗ್ ಏಜೆನ್ಸಿಗಳ ಮೂಲಕ ಟಿಕೆಟ್ ಕಾಯ್ದಿರಿಸಬಹುದು.

# ಗಾಡಿ ನಂಬರ್ ಮ್ಯಾಚ್ ಆಗಿಲ್ಲ ಅಂದ್ರೆ ಟ್ರಾವೆಲ್ ಮಾಡಲೇಬೇಡಿ ಎಂದ ಸೀಮಂತ್ ಕುಮಾರ್

• ಉದಯವಾಹಿನಿ, ಬೆಂಗಳೂರು

ರೈಡ್-ಹೇಲಿಂಗ್ ಅಪ್ಲಿಕೇಶನ್‌ಗಳಲ್ಲಿ ಆಟೋ, ಕ್ಯಾಬ್ ಬುಕ್ ಮಾಡುವವರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಇದರ ನಡುವೆ, ಬುಕ್ ಮಾಡಿದಾಗ ಆಪ್‌ನಲ್ಲಿ ಕಾಣಿಸುವ ವಾಹನದ ನಂಬರ್ ಒಂದು ಹಾಗು ಪಿಕ್ ಮಾಡಲು ಬರುವ ಗಾಡಿಯ ನಂಬರ್ ಮತ್ತೊಂದು ಎನ್ನುವ ಕಂಪ್ಲೇಂಟ್ ಸಾಕಷ್ಟು ಕೇಳಿ ಬರುತ್ತಿದೆ. ಈ ಬಗ್ಗೆ ಸಾರ್ವಜನಿಕರಿಗೆ ಖಡಕ್ ಎಚ್ಚರಿಕೆ ನೀಡಿರುವ ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ಪ್ರಯಾಣಿಕರು ಅಂತಹ ಪ್ರಕರಣಗಳನ್ನು ಪೊಲೀಸರಿಗೆ ವರದಿ ಮಾಡುವಂತೆ ಒತ್ತಾಯಿಸಿದ್ದಾರೆ. ನೀವು, ಕ್ಯಾಬ್ ಅಥವಾ ಆಟೋ ಬುಕ್ ಮಾಡಿದಾಗ, ಆಪ್‌ನಲ್ಲಿ ಬುಕ್ ಆಗುವ ನಂಬರ್ ಹಾಗು ಪಿಕ್ ಮಾಡಲು ಬರುವ ವಾಹನದ ನಂಬರ್ ಹೊಂದಾಣಿಕೆಯಾಗದಿದ್ದರೆ ಖಂಡಿತವಾಗಿಯೂ ಆ ವಾಹನವನ್ನು ಹತ್ತಬೇಡಿ. ಅದರಂತೆ, ಉಬರ್, ಓಲಾ, ರಾಪಿಡೊ, ನಮ್ಮ ಯಾತ್ರೆಯಂತಹ ರೈಡ್-ಹೇಲಿಂಗ್ ಆ್ಯಪ್‌ನಲ್ಲಿ ಕಾಣಿಸುವ ವಾಹನದ ನಂಬರ್ ಅಥವಾ ಚಾಲಕನ ಹೆಸರು, ನಿಮ್ಮ ಎದುರಿಗಿರುವ ವಾಹನಕ್ಕೆ ಹೊಂದಾಣಿಕೆಯಾಗದಿದ್ದರೆ ಯಾವುದೇ ಕಾರಣಕ್ಕೂ ಪ್ರಯಾಣ ಮಾಡಬೇಡಿ ಎಂದು ಬೆಂಗಳೂರು ಪೊಲೀಸ್ ಕಮಿಷನರ್ ಖಡಕ್ ಸೂಚನೆ ನೀಡಿದ್ದಾರೆ. ಮುಂದುವರೆದು, ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ರೈಡ್-ಅಗ್ರಿಗೇಟರ್ ಪ್ಲಾಟ್‌ಫಾಮ್‌ಗಳೊಂದಿಗೆ ಸುರಕ್ಷತಾ ಕಾಳಜಿಗಳ ಕುರಿತು ಸಭೆಗಳನ್ನು ನಡೆಸುವುದನ್ನು ಮುಂದುವರಿಸಿದ್ದೇನೆ ಎಂದ ಸಿಂಗ್, ಪ್ರಯಾಣಿಕರು ಅಂತಹ ಪ್ರಕರಣಗಳನ್ನು ಪೊಲೀಸರಿಗೆ ವರದಿ ಮಾಡಿದರೆ, ನಾವು ದೂರು ದಾಖಲಿಸಿ ತನಿಖೆ ಮಾಡಬಹುದು ಎಂದು ತಿಳಿಸಿದ್ದಾರೆ.ಆಪ್‌ನಲ್ಲಿ ದಾಖಲಾಗಿರದ ವಾಹನವನ್ನು ಹತ್ತಿದರೆ, ಆ್ಯಪ್‌ನ ಜಿಪಿಎಸ್ ಟ್ರ್ಯಾಕಿಂಗ್ ಮತ್ತು ತುರ್ತು ಎಸ್‌ಒಎಸ್ ವೈಶಿಷ್ಟ್ಯಗಳು ಕೆಲಸ ಮಾಡುವುದಿಲ್ಲ. ಜೊತೆಗೆ, ಯಾವುದೇ ಅಹಿತಕರ ಘಟನೆ ಸಂಭವಿಸಿದಲ್ಲಿ, ಈ ವಾಹನ ನಮ್ಮ ಸಿಸ್ಟಮ್ ಮೂಲಕ ಬುಕ್ ಆಗಿಲ್ಲ ಎಂದು ಹೇಳಿ ಆಪ್ ಕಂಪನಿಗಳು ಜವಾಬ್ದಾರಿಯಿಂದ ನುಣುಚಿಕೊಳ್ಳಬಹುದು.

ಉದಯವಾಹಿನಿ ಚಿತ್ರ



> ಅದರಲ್ಲೂ, ಸಿಂಗಲ್ ನಂಬರ್ ಪ್ಲೇಟ್ ದುರುಪಯೋಗಪಡಿಸಿಕೊಳ್ಳುವ ಅಥವಾ ಸೂಕ್ತ ಪರವಾನಗಿ ಮತ್ತು ಪೊಲೀಸ್ ವೆರಿಫಿಕೇಶನ್ ಇಲ್ಲದ ಚಾಲಕರು ಇಂತಹ ಕೃತ್ಯ ಎಸಗುತ್ತಾರೆ. ಸೀಮಂತ್ ಕುಮಾರ್

# ವಿಧಾನಸಭೆಯಲ್ಲಿ bjp-jds ಸೇರಿ ಕಾಂಗ್ರೆಸ್ ಸರ್ಕಾರಕ್ಕೆ ನೀರಿಳಿಸುತ್ತೇವೆ: ಬಿ.ವೈ. ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು

ಬರ ನಿರ್ವಹಣೆಯಲ್ಲಿ ವೈಫಲ್ಯ, ಕೆಪಿಎಸ್‌ಸಿ ನೇಮಕಾತಿಯಲ್ಲಿ ಅಕ್ರಮ, ಪಡಿತರ ಅಕ್ಕಿ ಕಳ್ಳಸಾಗಣೆ, ಬೆಲೆ ಏರಿಕೆ ಕುರಿತು ವಿಧಾನ ಮಂಡಲದ ಅಧಿವೇಶನದಲ್ಲಿ ಸರ್ಕಾರವನ್ನು ಪ್ರಶ್ನಿಸಲು ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅಧಿವೇಶನ ಆರಂಭಕ್ಕೂ ಮುನ್ನ ಪಕ್ಷದ ಶಾಸಕರು, ವಿಧಾನ ಪರಿಷತ್ ಸದಸ್ಯರ ಸಭೆ ಕರೆಯಲಿದ್ದೇವೆ. ಈ ಕುರಿತಾಗಿ ಜೆಡಿಎಸ್ ನಾಯಕರ ಜತೆಗೂ ಚರ್ಚಿಸಬೇಕಿದೆ.

ಎಚ್.ಡಿ.ದೇವೇಗೌಡ ಅವರ ಪತ್ನಿ ಚನ್ನಮ್ಮ ಅವರ ನಿಧನದ ಕಾರಣಕ್ಕೆ, ಆ ಪಕ್ಷದ ನಾಯಕರ ಜತೆ ಮಾತುಕತೆ ನಡೆಸಲು ಆಗಿಲ್ಲ.


ಉದಯವಾಹಿನಿ ಚಿತ್ರ

ಅವರ ಜೊತೆ ಚರ್ಚಿಸಿ ಬರ, ಖಾತರಿ ಯೋಜನೆಗಳು, ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಅಕ್ರಮಗಳು ಮತ್ತು ಬೆಂಗಳೂರಿನಲ್ಲಿ ಪ್ರಸ್ತಾವಿತ ಎರಡನೇ ವಿಮಾನ ನಿಲ್ದಾಣ ಸೇರಿದಂತೆ ಎಲ್ಲಾ ಪ್ರಮುಖ ಸಾರ್ವಜನಿಕ ಸಮಸ್ಯೆಗಳನ್ನು ಎತ್ತುತ್ತದೆ ಮತ್ತು ಕಾಂಗ್ರೆಸ್ ಸರ್ಕಾರವನ್ನು ಹೊಣೆಗಾರರನ್ನಾಗಿ ಮಾಡುತ್ತದೆ ಎಂದು ಹೇಳಿದರು. ತನ್ನ ಖಾತರಿ ಯೋಜನೆಗಳನ್ನು ಪ್ರಕಟಿಸಿದರೂ ಅಭಿವೃದ್ಧಿಯನ್ನು ನಿರ್ಲಕ್ಷಿಸಿದೆ ಎಂದು ವಿಜಯೇಂದ್ರ ಆರೋಪಿಸಿದರು. ಗೃಹ ಲಕ್ಷ್ಮಿಯಂತಹ ಯೋಜನೆಗಳ ಅಡಿಯಲ್ಲಿ ಫಲಾನುಭವಿಗಳಿಗೆ ನಿರೀಕ್ಷಿತ ಪ್ರಯೋಜನಗಳು ಸಿಗುತ್ತಿಲ್ಲ.

ಪ್ರಸ್ತಾವಿತ ಎರಡನೇ ವಿಮಾನ ನಿಲ್ದಾಣ ಯೋಜನೆ ಬಗ್ಗೆ ವಿಜಯೇಂದ್ರ ಪ್ರಶ್ನಿಸಿದರು, ಈ ಯೋಜನೆಯು ಸಾರ್ವಜನಿಕ ಹಿತಾಸಕ್ತಿಗಿಂತ ರಿಯಲ್ ಎಸ್ಟೇಟ್ ಹಿತಾಸಕ್ತಿಗಾಗಿ ನಡೆಸಲ್ಪಡುತ್ತಿದೆಯೇ ಎಂಬ ಬಗ್ಗೆ ಕಳವಳ ವ್ಯಕ್ತವಾಗಿದೆ ಎಂದು ಹೇಳಿದರು.

# ಅಮಾನತುಗೊಂಡ KPSC ಮುಖ್ಯಸ್ಥ, ಮಾಜಿ ಸಿಬ್ಬಂದಿ ವಿರುದ್ಧ FIR

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ 400 ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪದ ಮೇಲೆ ಅಮಾನತುಗೊಂಡ ಕೆಪಿಎಸ್‌ಸಿ ಅಧ್ಯಕ್ಷ ಎಸ್. ಶಿವಶಂಕರಪ್ಪ ಸಾಹುಕರ್, ಮಾಜಿ ಕೆಪಿಎಸ್‌ಸಿ ಸದಸ್ಯರು, ಅಧಿಕಾರಿಗಳು ಮತ್ತು ಆಯ್ಕೆಯಾದ 29 ಅಭ್ಯರ್ಥಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಸಂಬಂಧಿಕರಿಗೆ ಹಾಗೂ ಹಣ ನೀಡಿದವರಿಗೆ ಹುದ್ದೆ ನೀಡಲಾಗುತ್ತಿದೆ ಎಂದು ಆರೋಪಿಸಿ ಪಶು ವೈದ್ಯಾಧಿಕಾರಿ ಮಂಜುನಾಥ ಎಂಬುವರು ಶಿವಶಂಕರಪ್ಪ ವಿರುದ್ಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ದೂರಿನ ಅನ್ವಯ ಶಿವಶಂಕರಪ್ಪ ಸಾಹುಕಾರ್, ಕೆಪಿಎಸ್‌ಸಿ ಸದಸ್ಯರು, ಕೆಲ ಅಭ್ಯರ್ಥಿಗಳ ಮೇಲೆ ಎಫ್‌ಐಆರ್ ದಾಖಲಾಗಿದೆ. ಜನವರಿಯಲ್ಲಿ ನಡೆದಿದ್ದ ಪಶು ವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆಯಲ್ಲಿ ಶಿವಶಂಕರಪ್ಪ ಸಂಬಂಧಿ ಸೇರಿ ಸುಮಾರು 29 ಅಭ್ಯರ್ಥಿಗಳು ಅಕ್ರಮವಾಗಿ ಉತ್ತೀರ್ಣರಾಗಿದ್ದಾರೆ. ಇಂತಹ ಕೆಲ ಅಭ್ಯರ್ಥಿಗಳಿಗೆ ಮಧ್ಯವರ್ತಿಗಳು ತರಬೇತಿ ನೀಡಿದ್ದಾರೆ. ಕೆಲವರಿಗೆ ಓಎಂಆರ್ ಶೀಟ್ ತಿದ್ದುಪಡಿ ಮಾಡಿ ಅಕ್ರಮ ನಡೆಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಕರ್ನಾಟಕ ಲೋಕಸೇವಾ ಆಯೋಗವು ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ 400 ಪಶುವೈದ್ಯಾಧಿಕಾರಿಗಳ ಹುದ್ದೆ ನೇಮಕಾತಿಗೆ ಪರೀಕ್ಷೆ ನಡೆಸಿದ್ದು, ಜುಲೈ 17ರಂದು ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಿದೆ.

# ಈ ವಾರದೊಳಗೆ ಸಚಿವ ಸಂಪುಟ ವಿಸ್ತರಣೆ ಪ್ರಕ್ರಿಯೆ ಪೂರ್ಣ: ದೆಹಲಿಗೆ ತೆರಳುವ ಮುನ್ನ ಸಿಎಂ ಡಿಕೆ ಶಿವಕುಮಾರ್ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಈ ವಾರದೊಳಗೆ ಸಚಿವ ಸಂಪುಟ ವಿಸ್ತರಣೆ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ತಿಳಿಸಿದರು. ದೆಹಲಿಗೆ ಪ್ರಯಾಣ ಬೆಳೆಸುವ ಮೊದಲು ಸದಾಶಿವನಗರದಲ್ಲಿರುವ ತಮ್ಮ ನಿವಾಸದ ಬಳಿ ಸುದ್ದಿಗಾರರ ಜೊತೆ ಅವರು ಮಾತನಾಡಿದರು. ಸಚಿವ ಸಂಪುಟ ವಿಸ್ತರಣೆ ಬಗ್ಗೆ ಕೇಳಿದಾಗ, 'ಸಚಿವ ಸಂಪುಟ ವಿಸ್ತರಣೆ ವಿಚಾರದಲ್ಲಿ ನೀವು (ಮಾಧ್ಯಮಗಳು) ಆತುರದಲ್ಲಿದ್ದೀರಿ' ಎಂದರು.

ದೆಹಲಿಯಲ್ಲಿ ಸಂಸದರ ಜೊತೆಗಿನ ಸಭೆ ಬಗ್ಗೆ ಕೇಳಿದಾಗ, ಇಂದು ನಮ್ಮ ಸಂಸತ್ ಸದಸ್ಯರನ್ನು ಭೇಟಿ ಮಾಡುತ್ತಿದ್ದು, ಅವರಿಗೆ ರಾಜ್ಯದ ಬರ ಪರಿಸ್ಥಿತಿ, ನೀರಿನ ಪರಿಸ್ಥಿತಿ, ಕಾವೇರಿ, ಮಹದಾಯಿ, ಮೇಕೆದಾಟು, ಕೃಷ್ಣ ಸೇರಿದಂತೆ ಅನೇಕ ನೀರಾವರಿ ಯೋಜನೆಗಳ ಬಗ್ಗೆ ಮನವರಿಕೆ ಮಾಡಿಕೊಡಬೇಕಾಗಿದೆ ಎಂದರು. ನಾನು ಮುಖ್ಯಮಂತ್ರಿಯಾದ ಬಳಿಕ ಮೊದಲ ಬಾರಿಗೆ ಯಾವ ವಿಚಾರದಲ್ಲಿ ಎಲ್ಲರನ್ನು ಒಟ್ಟಾಗಿ ತೆಗೆದುಕೊಂಡು ಹೋಗಬೇಕು ಎಂದು ಸಂಸದರಿಗೆ ಮನವಿ ಮಾಡಲು ಹೋಗುತ್ತಿದ್ದೇನೆ.

ನಂತರ ಬೆಂಗಳೂರಿನಲ್ಲಿ ಸರ್ವಪಕ್ಷ ಸಭೆ ಕರೆಯಲಾಗುವುದು. ರಾಜ್ಯದ ಹಿರಿಯ ನಾಯಕರ ಜೊತೆಗೂ ಪ್ರಮುಖ ವಿಚಾರಗಳನ್ನು ಚರ್ಚಿಸಲಾಗುವುದು ಎಂದು ತಿಳಿಸಿದರು. ನಾವು ಬರ, ನೀರಿನ ಸಮಸ್ಯೆ ಮತ್ತು ಕಾವೇರಿ ಸಮಸ್ಯೆ, ಮಹಾದಾಯಿ, ಮೇಕೆದಾಟು ಮತ್ತು ಕೃಷ್ಣಾ ನದಿ ಸಮಸ್ಯೆಗಳ ಬಗ್ಗೆ ಚರ್ಚಿಸುತ್ತೇವೆ. ಇದನ್ನೆಲ್ಲ ನಾವು ತಿಳಿಸಬೇಕಾಗಿದೆ. ಚರ್ಚಿಸಲು ಹಲವು ಯೋಜನೆಗಳಿವೆ ಎಂದು ಶಿವಕುಮಾರ್ ಹೇಳಿದರು.

ಉದಯವಾಹಿನಿ ಚಿತ್ರ



> ಇಲ್ಲಿ ಬಹಳ ಹಿರಿಯ ನಾಯಕರನ್ನು ಭೇಟಿ ಮಾಡಬೇಕಾಗಿದೆ. ನಾನು ಹಿಂತಿರುಗಿದ ತಕ್ಷಣ, ನಾನು ಅವರನ್ನೂ ಭೇಟಿ ಮಾಡುತ್ತೇನೆ. ನಾನು ವಿರೋಧ ಪಕ್ಷದ ನಾಯಕ, ಮಾಜಿ ಮುಖ್ಯಮಂತ್ರಿಗಳು ಮತ್ತು ಎಲ್ಲರನ್ನೂ ಭೇಟಿ ಮಾಡುತ್ತೇನೆ. ಅವರಿಗೆ ತಿಳಿಸಬೇಕಾದ ಕೆಲವು ಪ್ರಮುಖ ವಿಷಯಗಳಿವೆ. ನಾನು ಅದನ್ನು ಮಾಡುತ್ತೇನೆ ಎಂದು ಅವರು ಹೇಳಿದರು. –ಸಿಎಂ ಡಿಕೆ ಶಿವಕುಮಾರ್

# ಲೆಕ್ಕಾಚಾರಕ್ಕೆ ಪ್ರಯಾಣಿಕರ ಅಸಮಾಧಾನ, ಶುಲ್ಕ ಪರಿಷ್ಕರಣೆಗೆ ಒತ್ತಾಯ

## ಪ್ರಯಾಣ ದರ ನಿಗದಿ ಸಮಿತಿ ಶಿಫಾರಸಿನ ಮೇರೆಗೆ 2025ರ ಫೆಬ್ರವರಿಯಿಂದಲೇ ಬಿಎಂಆರ್‌ಸಿಎಲ್ ಗರಿಷ್ಠ 90 ದರವನ್ನು ವಿಧಿಸುತ್ತಿದೆ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಪ್ರಯಾಣಿಕರು ಈಗಾಗಲೇ ಗರಿಷ್ಠ 90 ಪ್ರಯಾಣ ದರವನ್ನು ಪಾವತಿಸುತ್ತಿದ್ದರೆ, ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತದ ಸ್ವಂತ ದಾಖಲೆಗಳಲ್ಲೇ 2031ರ ವೇಳೆಗೆ ಗರಿಷ್ಠ ದರ 75 ಮಾತ್ರ ಎಂದು ಉಲ್ಲೇಖಿಸಿರುವುದು ಹೊಸ ವಿವಾದಕ್ಕೆ ಕಾರಣವಾಗಿದೆ. ಈ ಹಿನ್ನೆಲೆಯಲ್ಲಿ ಮೆಟ್ರೋ ದರವನ್ನು ಮರುಪರಿಶೀಲಿಸಿ ತಕ್ಷಣ ಪರಿಷ್ಕರಿಸುವಂತೆ ಪ್ರಯಾಣಿಕರು ಆಗ್ರಹಿಸಿದ್ದಾರೆ. ಜೂನ್ 2024ರಲ್ಲಿ ಸಿದ್ಧಗೊಂಡ ಮೆಟ್ರೋ ಹಂತ-3ಎ (ರೆಡ್ ಲೈನ್: ಹೆಬ್ಬಾಳ ಸರ್ಜಾಪುರ) ಯೋಜನೆಯ ವಿವರವಾದ ವರದಿಯಲ್ಲಿ, ಪ್ರತಿ ಮೂರು ವರ್ಷಕ್ಕೊಮ್ಮೆ 12% ದರ ಹೆಚ್ಚಳವಾಗಲಿದೆ ಎಂಬ ಲೆಕ್ಕಾಚಾರದ ಆಧಾರದ ಮೇಲೆ 2031ರಲ್ಲಿ ಗರಿಷ್ಠ ಪ್ರಯಾಣ ದರ 75 ರೂ ಆಗಲಿದೆ ಎಂದು ಅಂದಾಜಿಸಲಾಗಿತ್ತು.

> **1** ತಪ್ಪಾದ ಸೂತ್ರದಿಂದ ದರ ಏರಿಕೆ
> **2** ಮೊದಲು ಈಗಿನ ದರ ಸರಿಪಡಿಸಿ
> **3** 12% ದರ ಹೆಚ್ಚಳ ಎಂಬ ಅಂದಾಜ

ಆದರೆ, ಪ್ರಯಾಣ ದರ ನಿಗದಿ ಸಮಿತಿ ಶಿಫಾರಸಿನ ಮೇರೆಗೆ 2025ರ ಫೆಬ್ರವರಿಯಿಂದಲೇ ಬಿಎಂಆರ್‌ಸಿಎಲ್ ಗರಿಷ್ಠ 90 ದರವನ್ನು ವಿಧಿಸುತ್ತಿದೆ.ಆಸಕ್ತಿಕರ ಸಂಗತಿಯೆಂದರೆ,

ಉದಯವಾಹಿನಿ ಚಿತ್ರ



2026ರಲ್ಲಿ ಪರಿಷ್ಕರಿಸಲಾದ ಹಂತ-3ಎ ಡಿಪಿಆರ್‌ನಲ್ಲಿಯೂ ಪ್ರತಿ ಮೂರು ವರ್ಷಕ್ಕೊಮ್ಮೆ 12% ದರ ಹೆಚ್ಚಳ ಎಂಬ ಅಂದಾಜನ್ನೇ ಮುಂದುವರಿಸಲಾಗಿದೆ. ಆದರೆ, ಎಫ್‌ಎಫ್‌ಸಿ ವಾರ್ಷಿಕ ಗರಿಷ್ಠ 5% ದರ ಹೆಚ್ಚಳಕ್ಕೆ ಶಿಫಾರಸು ಮಾಡಿತ್ತು. ಈ ವ್ಯತ್ಯಾಸದಿಂದ ಮೆಟ್ರೋ ದರ ಪರಿಷ್ಕರಣೆಗೆ ಒತ್ತಾಯಗಳು ಮತ್ತಷ್ಟು ಬಲಗೊಂಡಿದ್ದರೂ, ಈ ಬಗ್ಗೆ ಬಿಎಂಆರ್‌ಸಿಎಲ್ ಹಲವು ತಿಂಗಳುಗಳಿಂದ ಯಾವುದೇ ಸ್ಪಷ್ಟನೆ ನೀಡಿಲ್ಲ ಎಂದು ಪ್ರಯಾಣಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮೆಟ್ರೋ ದರ ಏರಿಕೆಯಲ್ಲಿ ಬಿಎಂಆರ್‌ಸಿಎಲ್ ದರ ನಿಗದಿ ಸೂತ್ರವನ್ನು ತಪ್ಪಾಗಿ ಅನ್ವಯಿಸಿದ್ದು, ಆರಂಭದಲ್ಲಿ 105% ದರ ಹೆಚ್ಚಳವಾಗಿದ್ದು, ನಂತರ ಅದನ್ನು 71%ಕ್ಕೆ ಇಳಿಸಲಾಯಿತು ಎಂಬ ಆರೋಪಗಳು ಈಗಾಗಲೇ ಕೇಳಿಬಂದಿವೆ. ಇದರಿಂದ ಬಿಎಂಆರ್‌ಸಿಎಲ್ ತನ್ನದೇ ಡಿಪಿಆರ್‌ನಲ್ಲಿ ಅಂದಾಜಿಸಿದ್ದ ದರಕ್ಕಿಂತಲೂ ಹೆಚ್ಚಿನ ಮೊತ್ತವನ್ನು ಪ್ರಯಾಣಿಕರು ಪಾವತಿಸುತ್ತಿದ್ದಾರೆ ಎನ್ನಲಾಗಿದೆ.

ದರ ನಿಗದಿ ಪ್ರಕ್ರಿಯೆಯನ್ನೂ ಮರುಪರಿಶೀಲಿಸಬೇಕು. ಈ ಪ್ರಕ್ರಿಯೆಯಲ್ಲಿ ಪ್ರಯಾಣಿಕರು ಹಾಗೂ ಇತರ ಹಿತಾಸಕ್ತಿಗಳಿಗೆ ಸಮರ್ಪಕ ಪ್ರತಿನಿಧಿತ್ವ ಸಿಗುತ್ತಿಲ್ಲ ಎಂದೂ ಅವರು ಆರೋಪಿಸಿದರು. **ನಮ್ಮ ಮೆಟ್ರೋ ಮತ್ತಷ್ಟು ದುಬಾರಿ; ಪ್ರಯಾಣಿಕರಿಗೆ ಬಿಗ್ ಶಾಕ್:** ಶೇ.12ರಷ್ಟು ದರ 'ಸಾರ್ವಜನಿಕ ಸಾರಿಗೆ ಲಾಭಕ್ಕಾಗಿ ಅಲ್ಲ'ತಪ್ಪಾದ ಲೆಕ್ಕಾಚಾರಗಳಿಂದಾಗಿ, ಹೆಚ್ಚಿನ ಪ್ರಯಾಣಿಕರು ಬಳಸುತ್ತಿದ್ದರೂ ಬೆಂಗಳೂರು ಮೆಟ್ರೋ ದರವು ಭಾರತದ ಇತರ ನಗರಗಳ ಮೆಟ್ರೋಗಳಿಗಿಂತ ಹೆಚ್ಚು ದುಬಾರಿಯಾಗಿದೆ ಎಂದು ಅವರು ಆರೋಪಿಸಿದರು.

> ಬಿಎಂಆರ್‌ಸಿಎಲ್ ತನ್ನ ವೆಚ್ಚ, ಆದಾಯ ಮತ್ತು ಲಾಭದ ಸಂಪೂರ್ಣ ವಿವರಗಳನ್ನು ಒಳಗೊಂಡ ಶ್ವೇತಪತ್ರ ಪ್ರಕಟಿಸಬೇಕು ಎಂದು ಅವರು ಆಗ್ರಹಿಸಿದರು. ಪ್ರಯಾಣ ದರವನ್ನು ಹೇಗೆ ನಿಗದಿಪಡಿಸಲಾಗುತ್ತಿದೆ ಹಾಗೂ ಪ್ರಸ್ತುತ ದರ ವ್ಯವಸ್ಥೆಗೆ ಯಾರು ಹೊಣೆ ಎಂಬುದನ್ನು ತಿಳಿದುಕೊಳ್ಳುವ ಹಕ್ಕು ಪ್ರಯಾಣಿಕರಿಗಿದೆ ಎಂದು ಹೇಳಿದರು.

**ಮತ್ತೊಮ್ಮೆ ದರ ಹೆಚ್ಚಳ ಜಾರಿ** ಬೆಂಗಳೂರು ಮೆಟ್ರೋ ಪ್ರಯಾಣಿಕರ ಸಂಘದ ಸಹ-ಸಂಯೋಜಕ ರಾಜೇಶ್ ಭಟ್ ಮಾತನಾಡಿ, ಮತ್ತೊಮ್ಮೆ ದರ ಹೆಚ್ಚಳ ಜಾರಿಗೊಳಿಸುವ ಮುನ್ನ, ಈಗಿನ ದರ ವ್ಯವಸ್ಥೆಯಲ್ಲಿರುವ ಲೋಪಗಳನ್ನು ಸರಿಪಡಿಸಬೇಕು. ದರ ನಿಗದಿ ಸೂತ್ರದ ತಪ್ಪು ಅನ್ವಯ ಹಾಗೂ ಹಿಂದಿನ ಅತಿಯಾದ ದರ ಏರಿಕೆ ಕುರಿತು ಸ್ಪಷ್ಟನೆ ನೀಡದೆ ವಾರ್ಷಿಕ 5% ಹೆಚ್ಚಳ ಜಾರಿಗೆ ತರಬಾರದು ಎಂದು ಒತ್ತಾಯಿಸಿದರು.

## ಮಹಾನಗರ ಪಾಲಿಕೆಯಿಂದ ಮನೆ ಮನೆ ಜಾಗೃತಿ


• ಉದಯವಾಹಿನಿ, ಮೈಸೂರು,

ಭಾರತ ಚುನಾವಣಾ ಆಯೋಗದ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯದ ಅಂಗವಾಗಿ ಮೈಸೂರು ಮಹಾನಗರಪಾಲಿಕೆಯಿಂದ ನಗರದ ವಿವಿಧ ಪ್ರದೇಶಗಳಲ್ಲಿ ಜಾಗೃತಿ ಹಾಗೂ ಪರಿಶೀಲನಾ ಕಾರ್ಯಕ್ರಮ ನಡೆಸಲಾಯಿತು. ಪ್ರತಿ ಮನೆಗೂ ಎಸ್ಐಆರ್ ಫಾರಂಗಳು ತಲುಪಿರುವ ಬಗ್ಗೆ ಮತ್ತು ಸಾರ್ವಜನಿಕರು ಭರ್ತಿ ಮಾಡಿರುವ ಫಾರಂಗಳನ್ನು ಬಿಎಲ್ಒಗಳ ಮೂಲಕ ಮರಳಿ ಸಂಗ್ರಹಿಸುವ ಕುರಿತು ಮೈಕ್ ಮೂಲಕ ಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮದ ಭಾಗವಾಗಿ ಮಹಾನಗರಪಾಲಿಕೆ ಆಯುಕ್ತರು ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ, ಮನೆ ಮನೆಗಳಿಗೆ ತೆರಳಿ ಸಾರ್ವಜನಿಕರೊಂದಿಗೆ ನೇರ ಸಂವಾದ ನಡೆಸಿದರು. ಎಸ್ಐಆರ್ ಫಾರಂ ವಿತರಣೆ ಹಾಗೂ ಸಂಗ್ರಹಣೆ ಕುರಿತು ಮಾಹಿತಿ ಪಡೆದು ಪರಿಶೀಲಿಸಿದರು. ಸಾರ್ವಜನಿಕರ ಅಭಿಪ್ರಾಯಗಳನ್ನು ಆಲಿಸಿ, ಯಾವುದೇ ಗೊಂದಲಗಳಿದ್ದಲ್ಲಿ ಸ್ಥಳದಲ್ಲೇ ಸ್ಪಷ್ಟನೆ ನೀಡಲಾಯಿತು. ಈ ಸಂದರ್ಭದಲ್ಲಿ ಕೆ.ಆರ್. ವಿಧಾನಸಭಾ ಕ್ಷೇತ್ರ ಇಆರ್ಓ ಹಾಗೂ ಎಆರ್ಓಗಳು ಉಪಸ್ಥಿತರಿದ್ದು, ಎಸ್ಐಆರ್ ಕಾರ್ಯವು ಸುಗಮವಾಗಿ ಮತ್ತು ಪರಿಣಾಮಕಾರಿಯಾಗಿ ನಡೆಯುವಂತೆ ಅಗತ್ಯ ಮೇಲ್ವಿಚಾರಣೆ ನಡೆಸಿದರು.

## ಬಂಡೀಪುರ, ನಾಗರಹೊಳೆ ಸಫಾರಿಗೆ ಶುಲ್ಕ ಹೆಚ್ಚಳ : ಪ್ರವಾಸಿಗರಿಗೆ ಹೊರೆಯಾದ ಶುಲ್ಕ

• ಉದಯವಾಹಿನಿ, ಗುಂಡ್ಲುಪೇಟೆ

ರಾಜ್ಯದ ಪ್ರಮುಖ ಹುಲಿ ಸಂರಕ್ಷಿತ ಪ್ರದೇಶಗಳಾದ ಬಂಡೀಪುರ ಹಾಗೂ ನಾಗರಹೊಳೆ ರಾಷ್ಟ್ರೀಯ ಉದ್ಯಾನವನಗಳಲ್ಲಿ ಪ್ರವಾಸಿಗರಿಗೆ ನೀಡಲಾಗುತ್ತಿರುವ ಸಫಾರಿ ಸೇವೆಗಳ ದರವನ್ನ ಅರಣ್ಯ ಇಲಾಖೆ ಪರಿಷ್ಕರಿಸಿದ್ದು ಹೊಸ ದರಗಳು ಸೆಪ್ಟೆಂಬರ್ 1ರಿಂದ ಜಾರಿಗೆ ಬರಲಿವೆ, ಜೀಪ್ ಹಾಗೂ ಬಸ್ ಸಫಾರಿಗಳ ಶುಲ್ಕದಲ್ಲಿ ಗಮನಾರ್ಹ ಏರಿಕೆ ಮಾಡಲಾಗಿದೆ. ಈವರೆಗೆ 1.5 ಗಂಟೆಗಳ ಜೀಪ್ ಸಫಾರಿಗೆ ವಿಧಿಸಲಾಗುತ್ತಿದ್ದ 1,500 ದರವನ್ನ ಹೆಚ್ಚಳ ಮಾಡಿದ್ದು ಪ್ರಸ್ತುತ ಬಸ್ ಸಫಾರಿಯ ದರವೂ ಹೆಚ್ಚಳವಾಗಿದೆ. ಪ್ರವಾಸೋದ್ಯಮಕ್ಕೆ ಅನುಗುಣವಾಗಿ ಸೇವೆಗಳ ಗುಣಮಟ್ಟ ಸುಧಾರಣೆ ಹಾಗೂ ಅರಣ್ಯ ಸಂರಕ್ಷಣಾ ಚಟುವಟಿಕೆಗಳಿಗೆ ಅಗತ್ಯ ಸಂಪನ್ಮೂಲ ಒದಗಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ



ಉದಯವಾಹಿನಿ ಚಿತ್ರ

ಎಂದು ಇಲಾಖೆ ತಿಳಿಸಿದೆ. ಬಂಡೀಪುರ ಮತ್ತು ನಾಗರಹೊಳೆ ಉದ್ಯಾನಗಳಲ್ಲಿ ಬಸ್ ಸಫಾರಿಯ ದರವನ್ನ ವಯಸ್ಕರಿಗೆ 650ರಿಂದ 1 ಸಾವಿರಕ್ಕೆ ಏರಿಸಲಾಗಿದೆ. ಮಕ್ಕಳ ಟಿಕೆಟ್ ದರವನ್ನ 350 ರಿಂದ 500 ಕ್ಕೆ ಪರಿಷ್ಕರಿಸಲಾಗಿದೆ. ಜೀಪ್ ಸಫಾರಿಯ ದರವನ್ನ ವಯಸ್ಕರಿಗೆ 1,500 ಹಾಗೂ ಮಕ್ಕಳಿಗೆ 750 ನಿಗದಿಪಡಿಸಲಾಗಿದೆ. ಅರಣ್ಯ ಇಲಾಖೆ ಅಧಿಕಾರಿಗಳ ಮಾಹಿತಿ ಪ್ರಕಾರ, ಪರಿಷ್ಕೃತ ದರಗಳು ಸೆಪ್ಟೆಂಬರ್ 1 ರಿಂದ ಜಾರಿಗೆ ಬರಲಿದ್ದು, ಆನ್‌ಲೈನ್ ಹಾಗೂ ಸ್ಥಳದಲ್ಲಿಯೇ ಟಿಕೆಟ್ ಬುಕ್ಕಿಂಗ್ ಮಾಡುವ ಪ್ರವಾಸಿಗರಿಗೂ ಈ ದರಗಳು ಅನ್ವಯವಾಗಲಿವೆ.

ಪ್ರವಾಸಿಗರ ಸುರಕ್ಷತೆ, ಅರಣ್ಯ ಸಂಪತ್ತಿನ ಸಂರಕ್ಷಣೆ ಹಾಗೂ ಸಫಾರಿ ಸೇವೆಗಳ ಗುಣಮಟ್ಟ ಹೆಚ್ಚಿಸುವ ಉದ್ದೇಶದಿಂದ ದರ ಪರಿಷ್ಕರಣೆ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇದರಿಂದ ಬಂಡೀಪುರ ಹಾಗೂ ನಾಗರಹೊಳೆಗೆ ಭೇಟಿ ನೀಡುವ ಪ್ರವಾಸಿಗರು ಹೊಸ ದರಗಳ ಬಗ್ಗೆ ಮುಂಚಿತವಾಗಿ ಮಾಹಿತಿ ಪಡೆದು ತಮ್ಮ ಪ್ರವಾಸವನ್ನ ಯೋಜಿಸಿಕೊಳ್ಳುವಂತೆ ಇಲಾಖೆ ಮನವಿ ಮಾಡಿದೆ.

# ಎಸ್ಸಿ-ಎಸ್ಟಿ ಅನುದಾನ ಬಳಕೆ ಬಗ್ಗೆ ಅಧಿಕಾರಿಗಳ ಉದಾಸೀನ ಸಲ್ಲದು: ಸಿಬಿಎಸ್

## ನಮ್ಮ ಮೀಸಲಾತಿಯ ಅನುದಾನವನ್ನು ಯಾವ ಕಾರಣಕ್ಕೆ ಖರ್ಚು ಮಾಡಿದ್ದಾರೆ ಯಾರಿಗೆ ಖರ್ಚು ಮಾಡಿದ್ದಾರೆ

• ಉದಯವಾಹಿನಿ, ಚಿಕ್ಕನಾಯಕನಹಳ್ಳಿ

ತಾಲ್ಲೂಕಿನ ಪ್ರತಿ ಗ್ರಾಮ ಪಂಚಾಯಿತ್ತಿ ವ್ಯಾಪ್ತಿಗೆ ಬಿಡುಗಡೆಯಾಗುವ ಅನುದಾನದಲ್ಲಿ ಶೇ. 25.1 ರಷ್ಟು ಅನುದಾನದಲ್ಲಿ ಎಸ್‌ಸಿ, ಎಸ್‌ಟಿ ಸಮುದಾಯದ ಅಭಿವೃದ್ದಿಗೆ ಯಾವ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದ್ದೀರಿ ಎಂಬುದನ್ನು ಹಾಗೂ ಫಲಾನುಭವಿಗಳ ಸ್ಪಷ್ಟ ಹಾಗೂ ನಿಖರವಾದ ಮಾಹಿತಿಯನ್ನು ನೀಡಬೇಕು ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ಸೂಚನೆ ನೀಡಿದರು.

1 ಸ್ಪಷ್ಟ ಹಾಗೂ ನಿಖರವಾದ ಮಾಹಿತಿ
2 ನಾವು ಅನೇಕ ಸಭೆಯಲ್ಲಿ ತಿಳಿಸಿದರು
3 ಆದರೆ ಇದುವರೆಗೆ ಈ ಕೆಲಸ ಮಾಡಿಲ್ಲ

ಪಟ್ಟಣದ ತಾಲ್ಲೂಕು ಆಡಳಿತ ಸೌಧದ ಸಭಾಂಗಣದಲ್ಲಿ ನಡೆದ ವಿಶೇಷ ಎಸ್‌ಸಿ, ಎಸ್‌ಟಿ ಹಿತರಕ್ಷಣಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ತಾಲ್ಲೂಕಿನಲ್ಲಿರುವ 27ಗ್ರಾ.ಪಂ.ಗಳ ವ್ಯಾಪ್ತಿಯಲ್ಲಿ ಸರಿಯಾದ ಮಾಹಿತಿ ನೀಡುವಂತೆ ಈ ಹಿಂದೆ ತಿಳಿಸಿದ್ದರು ಸರಿಯಾದ ಮಾಹಿತಿ ನೀಡಿಲ್ಲ ಬೇಕಾಬಿಟ್ಟಿ ಮಾಹಿತಿ ನೀಡಿದ್ದಾರೆ ಅದ್ದರಿಂದ ಸರಿಯಾದ ಸ್ಪಷ್ಟವಾದ ಮಾಹಿತಿಯನ್ನು ನೀಡುವಂತೆ ತಿಳಿಸಿದರು.

ದಲಿತ ಮುಖಂಡ ಮಲ್ಲಿಕಾರ್ಜುನ್ ಮಾತನಾಡಿ, ನಾವು ಅನೇಕ ಸಭೆಯಲ್ಲಿ ತಿಳಿಸಿದರು ಸರಿಯಾದ ಮಾಹಿತಿ ನೀಡದ ಅದಿಕಾರಿಗಳು ಬೇಜಾವಬ್ದಾರಿ ತೋರಿದ್ದಾರೆ. ಇದರೊಂದಿಗೆ ತಾಲ್ಲೂಕಿನಲ್ಲಿ ಇದುವರೆಗೆ ಸು.20ಜನ ಅಂತರ್ಜಾತಿ ವಿವಾಹವಾಗಿದ್ದಾರೆ. ಆದರೆ ಇದುರವೆಗೆ ಅವರಿಗೆ ಸರ್ಕಾರಿದಿಂದ ಸಿಗಬೇಕಾದ ಸೌಲಭ್ಯಗಳು ಸಿಕ್ಕಿಲ್ಲ. ಇದರೊಂದಿಗೆ


ಉದಯವಾಹಿನಿ ಚಿತ್ರ

ಗ್ರಾ.ಪಂ.ಅಧಿಕಾರಿಗಳು ಕೇವಲ ಅಂಕಿ ಅಂಶಗಳನ್ನು ನೀಡಿದ್ದಾರೆ ವಿನಃ ಸರಿಯಾದ ಸಂಪೂರ್ಣವಾದ ಮಾಹಿತಿ ನೀಡಿಲ್ಲ ಇನ್ನಾದರು ಮುಂದಿನ ಸಭೆಯಲ್ಲಿ ಸರಿಯಾದ ಮಾಹಿತಿ ನೀಡಬೇಕು ಎಂದರು.

ರಾಜ್ಯ ಮಾದಿಗ ದಂಡೋರ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಬೇವಿನಹಳ್ಳಿ ಚನ್ನಬಸವಯ್ಯ ಮಾತನಾಡಿ, ನಮ್ಮ ಮೀಸಲಾತಿಯ ಅನುದಾನವನ್ನು ಯಾವ ಕಾರಣಕ್ಕೆ ಖರ್ಚು ಮಾಡಿದ್ದಾರೆ.

ಯಾರಿಗೆ ಖರ್ಚು ಮಾಡಿದ್ದಾರೆ ಎಂಬುದರ ಬಗ್ಗೆ ಪ್ರತಿ ಗ್ರಾ.ಪಂ.ನ ನೋಟಿಸ್ ಬೋರ್ಡ್‌ನಲ್ಲಿ ಪ್ರಕಟಿಸಬೇಕು. ಆದರೆ ಇದುವರೆಗೆ ಈ ಕೆಲಸ ಮಾಡಿಲ್ಲ. ನಮ್ಮ ಎಸ್‌ಸಿ ಎಸ್‌ಟಿ ಎಂದರೆ ಅಧಿಕಾರಿಗಳಿಗೂ ಅಸಡ್ಡೆಯಾಗಿದೆ ಎಂದು ಆರೋಪಿಸಿದರು.

ಸಭೆಯಲ್ಲಿ ಗಣಿಬಾಧಿತ ಪ್ರದೇಶದ ವಸತಿ, ನಿವೇಶನ ನೀಡುವ ಬಗ್ಗೆ, ಇ- ಸ್ವತ್ತು ಮಾಡಿಕೊಡುವ, ಜಾಣೆಹಾರ್ ನಮ್ಮ ಜನಾಂಗದ ಜನರಿಗೆ ಕುಡಿಯುವ ನೀರನ್ನು ಒದಗಿಸುವುದು, ಸಫಾಯಿ ಕರ್ಮಚಾರಿಗಳಿಗೆ ಎಷ್ಟು ಜನ ಇರುವುದು ಫಲಾನುಭವಿಗಳಿಗೆ ಸರ್ಕಾರದ ಯಾವ ಯಾವ ಸೌಲಭ್ಯವನ್ನು ಕಲ್ಪಿಸಿಕೊಟ್ಟಿರುವ ಬಗ್ಗೆ ಸೇರಿದಂತೆ ಇತರೆ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಸಭೆಯಲ್ಲಿ ಮುಖಂಡರುಗಳಾದ ಜಿ.ಪಂ. ಮಾಜಿ ಅದ್ಯಕ್ಷ ರಘುನಾಥ್, ಅಶೋಕ್, ಬೆಳಗಿನಹಳ್ಳಿ ರಾಜು, ಸಾಕ್ಯಗೌತಮ್, ಸಿ.ಎಸ್.ಲಿಂಗದೇವರು, ಗಿರಿಯಪ್ಪ, ಚಿದಾನಂದಮೂರ್ತಿ, ಶ್ರೀನಿವಾಸ್, ನರಸಿಂಹಮೂರ್ತಿ, ಮಂಜನಾಥ್, ಗೋವಿಂದ ಉಪಸ್ಥಿತರಿದ್ದರು.

> ಇದುವರೆಗೆ ನಿವೇಶನ ಇಲ್ಲದವರಿಗೆ ನಿವೇಶನ ನೀಡಿಲ್ಲ ಮನೆಗಳನ್ನು ನೀಡಿಲ್ಲ, ಶೆಟ್ಟಿಕೆರೆ ಗ್ರಾ.ಪಂ.ವ್ಯಾಪ್ತಿಯಲ್ಲಿ 8.5 ಲಕ್ಷ ರೂ. ವೆಚ್ಚದಲ್ಲಿ ಅಂಗಡಿಮಳಿಗೆಗಳನ್ನು ನಿರ್ಮಿಸಿದ್ದು ಇದರಲ್ಲಿ ನಮಗೆ ಮೀಸಲಾತಿ ನೀಡದೆ ಎಲ್ಲ ಮಳಿಗೆಗಳನ್ನು ಜನರಲ್‌ಗೆ ನೀಡಿದ್ದಾರೆ ಈ ಬಗ್ಗೆ ಕ್ರಮಕೈಗೊಳ್ಳುವಂತೆ ತಿಳಿಸಿದರು.- ತಹಶೀಲ್ದಾರ್ ಮಮತಾ ಎಂ

### ವಿವಾಹವಾದವರಿಗೆ ಆದ್ಯತೆ

ತಾಲ್ಲೂಕಿನಲ್ಲಿ ನಿವೇಶನ ರಹಿತರಿಗೆ, ನಿವೇಶನ ಇರುವಂತಹರಿಗೆ ಮನೆ ಮಂಜೂರಾಗಿರುವ ಬಗ್ಗೆ ಗ್ರಾಮ ಸಭೆಯಲ್ಲಿ ಆಯ್ಕೆ ಮಾಡಬೇಕು ಅದರಂತೆ ಪಟ್ಟಣದಲ್ಲಿ ಈಗಾಗಲೇ ಗುರುತಿಸಿರುವ 410 ಮನೆಗಳಲ್ಲಿ ಎಸ್‌ಸಿ ಎಸ್‌ಟಿಗೆ ಎಷ್ಟು ಮೀಸಲಾತಿ ನೀಡಬೇಕು ಎಂದು ಗುರುತಿಸಿ ಇದರೊಂದಿಗೆ ಅಂಗವಿಕಲರಿಗೆ, ವೃದ್ದರಿಗೆ, ಕಡುಬಡವರಿಗೆ ವಿಧವೆಯರಿಗೆ, ಅಂತರ್ಜಾತಿ ವಿವಾಹವಾದವರಿಗೆ ಆದ್ಯತೆ ನೀಡಿ ಎಂದು ಸೂಚನೆ ನೀಡಿದರು.

# ಜಯಘೋಷದೊಂದಿಗೆ ಕಾರ್ಗಿಲ್ ವಿಜಯೋತ್ಸವ ಆಚರಣೆ

• ಉದಯವಾಹಿನಿ, ಗುಂಡ್ಲುಪೇಟೆ

ಕರ್ನಾಟಕ ಕಾವಲು ಪಡೆ ವತಿಯಿಂದ ಕಾರ್ಗಿಲ್ ವಿಜಯೋತ್ಸವ ಅಂಗವಾಗಿ ಪಟ್ಟಣದಲ್ಲಿ ಕಾರ್ಗಿಲ್ ದಿವಸವನ್ನ ಅರ್ಥಪೂರ್ಣವಾಗಿ ಆಚರಿಸಲಾಯಿತು. ರಾಷ್ಟ್ರೀಯ ಹೆದ್ದಾರಿಯಲ್ಲಿ ದೇಶಭಕ್ತಿ ಘೋಷಣೆಗಳನ್ನ ಕೂಗಿ ಜಾಗೃತಿ ಮೂಡಿಸಿದ ಕಾರ್ಯಕರ್ತರು ಬಳಿಕ ಪಟ್ಟಣದ ಪುರಸಭೆ ಆವರಣದಲ್ಲಿರುವ ಮಹಾತ್ಮ ಗಾಂಧಿ ಪ್ರತಿಮೆ ಎದುರು ವೀರ ಯೋಧರಿಗೆ ನಮನ ಸಲ್ಲಿಸಿದರು.

ನಿವೃತ್ತ ಶಿಕ್ಷಕ ಮಾಸ್ಟರ್ ಮಲ್ಲಯ್ಯ ಮಾತನಾಡಿ ಕಾರ್ಗಿಲ್ ಯುದ್ಧದಲ್ಲಿ ಭಾರತೀಯ ಸೇನೆಯ ವೀರ ಯೋಧರು ತೋರಿದ ಶೌರ್ಯ, ತ್ಯಾಗ ಮತ್ತು ದೇಶಭಕ್ತಿಯ ಕುರಿತು ವಿವರಿಸಿದರು. ಕನ್ನಡಪರ ಹಿರಿಯ ಹೋರಾಟಗಾರ ಬ್ರಹ್ಮಾನಂದ್ ಮಾತನಾಡಿ, ಕಾರ್ಗಿಲ್ ಯುದ್ಧದ ಐತಿಹಾಸಿಕ ಮಹತ್ವವನ್ನು ತಿಳಿಸುವ ಜೊತೆಗೆ ರಾಷ್ಟ್ರಭಕ್ತಿಯ ಮೌಲ್ಯಗಳನ್ನು ಸಮಾಜದಲ್ಲಿ ಬಿತ್ತರಿಸುತ್ತಿರುವ ಕರ್ನಾಟಕ ಕಾವಲು ಪಡೆಯ ಕಾರ್ಯವೈಖರಿಯನ್ನು


ಉದಯವಾಹಿನಿ ಚಿತ್ರ

ಶ್ಲಾಘಿಸಿದರು. ಕಾವಲು ಪಡೆ ತಾಲ್ಲೂಕು ಅಧ್ಯಕ್ಷ ಎ. ಅಬ್ದುಲ್ ಮಾಲಿಕ್ ಮಾತನಾಡಿ, ಕಾರ್ಗಿಲ್ ಯುದ್ಧದಲ್ಲಿ ಪ್ರಾಣಾರ್ಪಣೆ ಮಾಡಿದ ವೀರ ಯೋಧರನ್ನ ಸ್ಮರಿಸಿ ಅವರಿಗೆ ಭಾವಪೂರ್ಣ ನಮನ ಸಲ್ಲಿಸಿದರು. ದೇಶದ ಏಕತೆ, ಅಖಂಡತೆ ಹಾಗೂ ಭದ್ರತೆಗಾಗಿ ಸೈನಿಕರ ತ್ಯಾಗವನ್ನು ಪ್ರತಿಯೊಬ್ಬರೂ ಸದಾ ಗೌರವಿಸಬೇಕು ಎಂದು ಕರೆ ನೀಡಿದರು.ಈ ವೇಳೆ ಜಿಲ್ಲಾ ಕಾರ್ಯಾಧ್ಯಕ್ಷ ಅಬ್ದುಲ್ ರಷೀದ್, ತಾಲ್ಲೂಕು ಗೌರವಾಧ್ಯಕ್ಷ ರಾಮೇಗೌಡ, ತಾಲ್ಲೂಕು ಕಾರ್ಯದರ್ಶಿ ಎಸ್. ಮುಬಾರಕ್, ಟೌನ್ ಅಧ್ಯಕ್ಷ ಸಾದಿಕ್ ಪಾಷ, ಕಿಲಗೆರೆ ವಾಸು, ಟೌನ್ ಸಂಚಾಲಕ ಮಿಮಿಕ್ರಿ ರಾಜು, ಡ್ಯಾನ್ಸರ್ ಪವನ್ ಸೇರಿದಂತೆ ಕರ್ನಾಟಕ ಕಾವಲು ಪಡೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿರೋದು ಸ್ವಾಗತಾರ್ಹ

• ಉದಯವಾಹಿನಿ, ತುಮಕೂರು

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ಸ್ವಾಗತಾರ್ಹವಾಗಿದೆ. ರಾಷ್ಟ್ರೀಯ ವಿಷಯಗಳಲ್ಲಿ ಸಚಿವರು ತಮ್ಮ ಜವಾಬ್ದಾರಿಯನ್ನು ಹೊರುವ ಹೊಣೆಗಾರಿಕೆಯನ್ನು ಇದು ಮತ್ತಷ್ಟು ಬಲಪಡಿಸಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಹೇಳಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲಕ್ಷಾಂತರ ಜನರ ಭವಿಷ್ಯದ ಜೊತೆ ಆಟ ಆಡುವಂತಹದ್ದು ಸರಿಯಲ್ಲ. ಧರ್ಮೇಂದ್ರ ಪ್ರಧಾನ್‌ಗೆ ಮಾತ್ರವಲ್ಲ, ಆ ಅರ್ಹತೆ ಯಾರಿಗೂ ಇಲ್ಲ. ಯುವಕರ ಭವಿಷ್ಯಕ್ಕೆ ಅನುಕೂಲ ಮಾಡಿಕೊಡಬೇಕೇ ವಿನಃ ಭವಿಷ್ಯಕ್ಕೆ ಅಡ್ಡ ಬರಬಾರದು ಎಂದರು. ನೀಟ್ ಪರೀಕ್ಷೆ ಬಹಳ ದೊಡ್ಡದು. ಲಕ್ಷಾಂತರ ಮಕ್ಕಳು ಅವರ ಭವಿಷ್ಯವನ್ನು ನಿರ್ಮಾಣ ಮಾಡಿಕೊಳ್ಳಲು ಬರೆಯುವ ಪರೀಕ್ಷೆ ಇದು. ಅದರಲ್ಲಿ ಯಾವುದೇ ತಪ್ಪುಗಳು ಆಗಬಾರದು. ಜವಾಬ್ದಾರಿಯನ್ನು ಹೊತ್ತಿರುವವರು ಅದನ್ನು ನೋಡಿಕೊಳ್ಳಬೇಕು. ಹೆಜ್ಜೆ ಹೆಜ್ಜೆಗೂ ಪರಿಶೀಲನೆ ಮಾಡಿ, ಪರೀಕ್ಷೆ ಚೆನ್ನಾಗಿ ಆಗುವಂತೆ ನೋಡಿಕೊಂಡು, ಆ ಮಕ್ಕಳಿಗೆ ಹೆಚ್ಚಿನ ಅಂಕಗಳು ಬರುವ ರೀತಿಯಲ್ಲಿ ಅವರಿಗೆ ಅವಕಾಶಗಳನ್ನು ಕಲ್ಪಿಸಬೇಕು ಎಂದು ಹೇಳಿದರು. ತೆಗೆಯಬೇಕು ಎಂದು ಹೋರಾಟ ಮಾಡಿದ್ದರು. ಧರ್ಮೇಂದ್ರ ಪ್ರಧಾನ್ ಅವರು ಜವಾಬ್ದಾರಿವಹಿಸಿಕೊಂಡಿದ್ದರು.

# ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ ಕರೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಮುಖ್ಯಮಂತ್ರಿ ಹಾಗೂ ಗೃಹ ಸಚಿವರ ನಿರ್ದೇಶನದಂತೆ ವ್ಯಸನಮುಕ್ತ ಸಮಾಜ ನಿರ್ಮಾಣದ ಉದ್ದೇಶದಿಂದ ಬೇಡ ಬ್ರೋ/ಸೈಸ್ ಕರ್ನಾಟಕ' ಧ್ಯೇಯವಾಕ್ಯದಡಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವ ಅಭಿಯಾನವನ್ನು ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ ಹೇಳಿದರು.

ನಗರದ ಜಿಲ್ಲಾ ಕೇಂದ್ರ ಬಸ್ ನಿಲ್ದಾಣದ ಎದುರು ಆಯೋಜಿಸಿದ್ದ ಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದ ಅವರು, ಮಾದಕ ವಸ್ತುಗಳ ಸೇವನೆ ಹಾಗೂ ಅಕ್ರಮ ಸಾಗಾಟ ತಡೆಗಟ್ಟಲು ಪೊಲೀಸ್ ಇಲಾಖೆ ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು


ಉದಯವಾಹಿನಿ ಚಿತ್ರ

ಹಮ್ಮಿಕೊಂಡಿದೆ. ಇದರ ಅಂಗವಾಗಿ, ನೂರಾರು ಪೊಲೀಸ್ ಸಿಬ್ಬಂದಿ ಭಾಗವಹಿಸಿದ ಬೈಕ್ ರಯಾಲಿ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿತು. ಜಾಗೃತಿ ಅಭಿಯಾನದ ಅಂಗವಾಗಿ ಸಾರ್ವಜನಿಕ ಸ್ಥಳಗಳಲ್ಲಿ ಕ್ಯೂಆರ್ ಕೋಡ್ ಸ್ಟಿಕ್ಕರ್‌ಗಳನ್ನು ಅಳವಡಿಸಲಾಗಿದ್ದು, ಅವುಗಳನ್ನು ಸ್ಕ್ಯಾನ್ ಮಾಡುವ ಮೂಲಕ ನಾಗರಿಕರು ತಮ್ಮ ಸುತ್ತಮುತ್ತ ನಡೆಯುವ ಮಾದಕ ವಸ್ತುಗಳ ಮಾರಾಟ, ಬಳಕೆ ಹಾಗೂ ಇತರೆ ಕಾನೂನುಬಾಹಿರ ಚಟುವಟಿಕೆಗಳ ಬಗ್ಗೆ ಪೊಲೀಸ್ ಇಲಾಖೆಗೆ ಮಾಹಿತಿ ನೀಡಬಹುದಾಗಿದೆ ಎಂದು ತಿಳಿಸಿದರು. ರಸ್ತೆಗಳಲ್ಲಿ ಸಂಚರಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿತು.


ಮಾದಕ ವಸ್ತುಗಳ ವಿರುದ್ಧದ ಹೋರಾಟದಲ್ಲಿ ಸಾರ್ವಜನಿಕರ ಸಹಭಾಗಿತ್ವ ಅತ್ಯಗತ್ಯವಾಗಿದ್ದು, ಪೊಲೀಸ್ ಇಲಾಖೆಯೊಂದಿಗೆ ಜನತೆ ಕೈಜೋಡಿಸಿದರೆ ಅಪರಾಧ ಕೃತ್ಯಗಳನ್ನು ಪರಿಣಾಮಕಾರಿ ಯಾಗಿ ತಡೆಗಟ್ಟಲು ಸಾಧ್ಯವಾಗುತ್ತದೆ ಎಂದು ಹೇಳಿದರು.

# ಮೃತ ತಾಯಿ ಆನೆಯನ್ನು ಎದ್ದೇಳಿಸಲು ಮರಿಯಾನೆಯ ಪ್ರಯತ್ನ ಹೃದಯ ವಿದ್ರಾವಕ ಘಟನೆ

• ಉದಯವಾಹಿನಿ, ಮಡಿಕೇರಿ

ಮೂಕ ಪ್ರಾಣಿಗಳಿಗೂ ಭಾವನೆಗಳಿವೆ. ಅವುಗಳೂ ಸಂಬಂಧಗಳಿಗೆ ಬೆಲೆ ಕೊಡುತ್ತವೆ. ಅದರಲ್ಲೂ ಆನೆಗಳು ಹೆಚ್ಚುಕಡಿಮೆ ಮನುಷ್ಯರಂತೆ ವರ್ತಿಸುತ್ತವೆ ಎನ್ನುವ ಮಾತಿದೆ. ಇದು ನಿಜ ಕೂಡ. ಇದಕ್ಕೆ ಸಾಕ್ಷಿ ಎಂಬಂತೆ ಇದೀಗ ಮರಿ ಆನೆಯ ಹೃದಯ ವಿದ್ರಾವಕ ವಿಡಿಯೊವೊಂದು ವೈರಲ್ ಆಗಿದೆ. ಇದನ್ನು ನೋಡಿ ನೆಟ್ಟಿಗರು ಭಾವುಕರಾಗಿದ್ದಾರೆ. ತಾಯಿ ಆನೆಯ ಮೃತದೇಹದ ಬಳಿ ಮರಿ ಆನೆ ರೋಧಿಸುತ್ತಿರುವ ದೃಶ್ಯ ಇದಾಗಿದ್ದು, ನೋಡುಗರ ಕಣ್ಣಂಚು ಒದ್ದೆಯಾಗಿಸಿದೆ ಕೊಡಗು ಜಿಲ್ಲೆಯ ಅಮ್ಮತಿ ಸಮೀಪದ ಆನಂದಪುರದಲ್ಲಿ ಈ ಘಟನೆ ನಡೆದಿದೆ.

ಖಾಸಗಿ ಕಾಫಿ ಎಸ್ಟೇಟ್‌ನಲ್ಲಿ ಮೃತಪಟ್ಟ ತಾಯಿ ಆನೆಯ ದೇಹವನ್ನು ಬಿಟ್ಟು ದೂರ ಹೋಗಲು ನಿರಾಕರಿಸಿದ ಆನೆ ಮರಿಯ ಗೋಳಾಟವು ಇದೀಗ ಪ್ರಾಣಿಪ್ರಿಯರ ಹೃದಯ ತಟ್ಟಿದೆ.


ಉದಯವಾಹಿನಿ ಚಿತ್ರ

ಮತ್ತೊಮ್ಮೆ ವನ್ಯಜೀವಿ-ಮನುಷ್ಯರ ನಡುವಿನ ಸಂಘರ್ಷ ಚರ್ಚೆಗೆ ಕಾರಣವಾಗಿದೆ. ನೀರವತೆಯನ್ನು ಸೀಳಿ ಆನೆ ಮರಿಯ ನಿರಂತರ ಕೂಗು ಕೇಳಿ ಬಂದ ಹಿನ್ನೆಲೆಯಲ್ಲಿ ಗ್ರಾಮಸ್ಥರು ಕಾಫಿ ತೋಟದತ್ತ ತೆರಳಿದ್ದರು. ಈ ವೇಳೆ ಸುಮಾರು 30 ವರ್ಷದ ಹೆಣ್ಣು ಕಾಡಾನೆಯ ಮೃತದೇಹ ಪತ್ತೆಯಾಗಿತ್ತು. ಮರುದಿನ ಬೆಳಗ್ಗೆ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದರು.

## ಕೊರಟಗೆರೆ ಶೇ. 100 ರಷ್ಟು ಗಣತಿ ಅರ್ಜಿ ವಿತರಣೆ

• ಉದಯವಾಹಿನಿ, ಕೊರಟಗೆರೆ

ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ -2026ರಲ್ಲಿ ಕೊರಟಗೆರೆ ವಿಧಾನ ಸಭಾ ಕ್ಷೇತ್ರದಲ್ಲಿ 2,09,495 ಮಂದಿ ಮತದಾರರಿಗೆ ಗಣತಿ ಫಾರಂಗಳನ್ನು ವಿತರಿಸಿ ಶೇ.100 ರಷ್ಟು ಪ್ರಗತಿ ಸಾದಿಸಿದ್ದು ಈಗಾಗಲೇ 1.68,482 ಫಾರಂಗಳನ್ನು ಡಿಜಿಟಲೈಸಿಂಗ್ ಮಾಡುವ ಮೂಲಕ ಶೇ.80.25 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಮತದಾರರ ನೋಂದಣಾಧಿಕಾರಿ ಸೋಮಪ್ಪ ಕಡಕೋಳ ತಿಳಿಸಿದರು. ಪಟ್ಟಣದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ನಡೆದ ವಿಶೇಷ ಸಮಗ್ರ ಪರಿಷ್ಕರಣೆಯ-2026 ಮಾಹಿತಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕೊರಟಗೆರೆ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಮತ್ತು ಪಟ್ಟಣದಲ್ಲಿ ವೇಗವಾಗಿ ಮತದಾರರ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ನಿಧಾನ ಮತ್ತು ಗೊಂದಲವಿರುವ ಕಡೆ ಮತ್ತೊರ್ವ ಹೆಚ್ಚುವರಿ ಬಿಎಲ್‌ಓ ಮತ್ತು ಸಿಬ್ಬಂದಿಗಳನ್ನು ನೇಮಿಸಲಾಗಿದೆ. ಮುಂದಿನ 8 ದಿನಗಳೊಳಗೆ ಮತದಾರರ ಡಿಜಿಟಲ್ ಕಾರ್ಯ ಶೇ 100 ರಷ್ಟು ಪ್ರಗತಿ ಸಾಧಿಸುವುದಾಗಿ ತಿಳಿಸಿದರು.



ತಹಶೀಲ್ದಾರ್ ಮಂಜುನಾಥ್ ಮಾತನಾಡಿ, ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ಕೆ ಜನಪ್ರತಿನಿಧಿಗಳ ಸಹಕಾರ ಅತಿ ಮುಖ್ಯವಾಗಿದ್ದು, ಮನೆ ಮನೆಗೆ ಭೇಟಿ ನಿಡುವ ಅಧಿಕಾರಿಗಳಿಗೆ ಮತದಾರರು ಸ್ಥಳಾಂತರ ಹೊಂದಿರುವವರ, ಸಾವಾಗಿರುವವರ ಹಾಗೂ ನಕಲಿ, ಗೈರಿನ ಬಗ್ಗೆ ಮಾಹಿತಿಯನ್ನು ಅಧಿಕಾರಿಗಳಿಗೆ ನೀಡಬೇಕಿದೆ, ಇದರ ಬಗ್ಗೆ ಗೊಂದಲ ಇದ್ದಲ್ಲಿ ಸಹಾಯವಾಣಿಗೆ ಸಂರ್ಕಿಸಲು ಮನವಿ ಮಾಡಿದರು. ಸಹಾಯವಾಣಿ ಕೊರಟಗೆರೆ ಗ್ರಾಮಿಣ ಭಾಗದ ದೂರವಾಣಿ ಸಂಖ್ಯೆ-08138-232153, ಕೊರಟಗೆರೆ ಪಟ್ಟಣಕ್ಕೆ ದೂರವಾಣಿ ಸಂಖ್ಯೆ 08138-295546 ಗೆ ಕರೆ ಮಾಡಿ ಮತದಾರರ ಸಮಸ್ಯೆ ಏನೇ ಇದ್ದರೂ ಪತ್ರಿ ನಿತ್ಯ ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ರವರೆಗೆ ಕರೆ ಮಾಡಿ ಮಾಹಿತಿ ಪಡೆಯುವಂತೆ ಮನವಿ ಮಾಡಿದರು.

# ನೀಟ್ ಅಕ್ರಮ ಖಂಡಿಸಿ ಪ್ರಗತಿಪರ ಸಂಘಟನೆಗಳಿಂದ ಧರಣಿ ಸತ್ಯಾಗ್ರಹ!

## ಮೃತ ವಿದ್ಯಾರ್ಥಿಗಳ ಕುಟುಂಬಕ್ಕೆ 1 ಕೋಟಿ ಪರಿಹಾರ ನೀಡಬೇಕು. ನೀಟ್ ಪರೀಕ್ಷಾ ವ್ಯವಸ್ಥೆಯನ್ನು ರದ್ದುಗೊಳಿಸಬೇಕು

• ಉದಯವಾಹಿನಿ, ತಿಪಟೂರು

ನೀಟ್ ಅಕ್ರಮ ಖಂಡಿಸಿ ಹಾಗೂ ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮೇಲಿನ ಹಲ್ಲೆಯನ್ನು ಖಂಡಿಸಿ ಪ್ರಗತಿಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಧರಣಿ ಸತ್ಯಾಗ್ರಹವನ್ನು ನಗರದಲ್ಲಿ ನಡೆಸಲಾಯಿತು.

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ವಿದ್ಯಾರ್ಥಿ ಸಮೂಹದ ಹೋರಾಟಕ್ಕೆ ಸಿಕ್ಕ ಜಯವಾಗಿದ್ದು, ಕಠಿಣ ಹೋರಾಟದ ಮೂಲಕ ಭ್ರಷ್ಟ ಆಡಳಿತ ವ್ಯವಸ್ಥೆಯನ್ನು ಎಚ್ಚರಿಸಿದ ದೇಶಭಕ್ತ ವಿದ್ಯಾರ್ಥಿಗಳಿಗೆ ಅಭಿನಂದಿಸಿ ಸಂಭ್ರಮ ವ್ಯಕ್ತಪಡಿಸಲಾಯಿತು. ಪ್ರತಿಭಟನಾ ನಿರತರನ್ನು ಉದ್ದೇಶಿಸಿ ಮಾತನಾಡಿದ ಜನಸ್ಪಂದನಾ ಟ್ರಸ್ಟ್ ಅಧ್ಯಕ್ಷ ಹಾಗೂ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸಿ.ಬಿ. ಶಶಿಧರ್, ಕೇಂದ್ರ ಸರ್ಕಾರ ನೀಟ್ ಸೇರಿದಂತೆ ಹಲವಾರು ಪರೀಕ್ಷೆಗಳಲ್ಲಿ ಅಕ್ರಮ ನಡೆಸಿ ಪ್ರಶ್ನೆಪತ್ರಿಕೆ ಸೋರಿಕೆ ಮಾಡಿ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಆಟವಾಡುತ್ತಿದೆ. ಪರೀಕ್ಷಾ ಅಕ್ರಮದಿಂದ ಅನೇಕ



ಉದಯವಾಹಿನಿ ಚಿತ್ರ

ಪ್ರತಿಭಾವಂತ ವಿದ್ಯಾರ್ಥಿಗಳು ಮೆಡಿಕಲ್, ಇಂಜಿನಿಯರಿಂಗ್ ಸೇರಿದಂತೆ ಉನ್ನತ ವ್ಯಾಸಂಗದಿಂದ ವಂಚಿತರಾಗಿದ್ದಾರೆ. ಭ್ರಷ್ಟ ಪರೀಕ್ಷಾ ವ್ಯವಸ್ಥೆಯಿಂದ ಮನನೊಂದ ಸುಮಾರು 20 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದು, ಕೇಂದ್ರ ಸರ್ಕಾರದ ನಿರ್ಲಜ್ಜ ವ್ಯವಸ್ಥೆಯ ವಿರುದ್ಧ ಲಕ್ಷಾಂತರ ವಿದ್ಯಾರ್ಥಿಗಳು ಬೀದಿಗಿಳಿದು ಹೋರಾಟ ಮಾಡಬೇಕಾಯಿತು ಎಂದರು.ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮೇಲೆ ದೇಶದ್ರೋಹದ ಪಟ್ಟ ಕಟ್ಟಿ ಅಮಾನುಷವಾಗಿ ದೌರ್ಜನ್ಯ ನಡೆಸಿ, ಪೊಲೀಸ್ ಬಲಪ್ರಯೋಗದ ಮೂಲಕ ವಿದ್ಯಾರ್ಥಿ ಹೋರಾಟವನ್ನು ಹತ್ತಿಕ್ಕಲು ಯತ್ನಿಸಿದರು. ಆದರೆ ವಿದ್ಯಾರ್ಥಿಗಳು ತಮ್ಮ ಅಚಲವಾದ ನಿಲುವಿನಿಂದ ಹಿಂದೆ ಸರಿಯದೆ ಹೋರಾಟ ಮಾಡಿದ ಫಲವಾಗಿ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿದ್ದಾರೆ. ರಾಜೀನಾಮೆಯ ಶ್ರೇಯಸ್ಸು ಹೋರಾಟ ನಿರತ ದೇಶಭಕ್ತ ವಿದ್ಯಾರ್ಥಿ ಸಮೂಹಕ್ಕೆ ಸಲ್ಲಬೇಕು ಎಂದು ಅವರು ಹೇಳಿದರು.

ಕೇಂದ್ರ ಸರ್ಕಾರ ಕೂಡಲೇ ಮೃತ ವಿದ್ಯಾರ್ಥಿಗಳ ಕುಟುಂಬಕ್ಕೆ 1 ಕೋಟಿ ಪರಿಹಾರ ನೀಡಬೇಕು. ನೀಟ್ ಪರೀಕ್ಷಾ ವ್ಯವಸ್ಥೆಯನ್ನು ರದ್ದುಗೊಳಿಸಬೇಕು. ನೀಟ್ ಹಾಗೂ ರಾಷ್ಟ್ರೀಯ ಮಟ್ಟದ ಪರೀಕ್ಷೆಗಳನ್ನು ನಡೆಸುತ್ತಿರುವ ಕೇಂದ್ರ ಪರೀಕ್ಷಾ ಮಂಡಳಿಯನ್ನು ರದ್ದುಗೊಳಿಸಬೇಕು. ನೀಟ್ ಸೇರಿದಂತೆ ಎಲ್ಲಾ ಪರೀಕ್ಷೆಗಳನ್ನು ಕೇಂದ್ರ ಸರ್ಕಾರವೇ ಪಾರದರ್ಶಕ ಹಾಗೂ ಕಠಿಣವಾಗಿ ನಡೆಸಬೇಕು ಎಂದು ಆಗ್ರಹಿಸಿದರು.ವೈದ್ಯ ಡಾ. ಅನಿಲ್ ಮಾತನಾಡಿ, ಕೇಂದ್ರ ಸರ್ಕಾರ ಏಕೀಕೃತ ಪರೀಕ್ಷಾ ವ್ಯವಸ್ಥೆ ಜಾರಿಗೆ ತಂದ ನಂತರ ಕರ್ನಾಟಕದ ವಿದ್ಯಾರ್ಥಿಗಳಿಗೆ ಹೆಚ್ಚು ಅನ್ಯಾಯವಾಗಿದೆ.

> ಇದರಿಂದ ಲಕ್ಷಾಂತರ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದ್ದು, ಕೇಂದ್ರ ಸರ್ಕಾರದ ಜನವಿರೋಧಿ ಧೋರಣೆ ವಿರುದ್ಧ ಉಗ್ರ ಹೋರಾಟ ನಡೆಸಲಾಗುವುದು. ಪ್ರಜಾಪ್ರಭುತ್ವ ವಿರೋಧಿ ಧೋರಣೆ ಮುಂದುವರೆದರೆ ಕಾನೂನು ಭಂಗ ಹೋರಾಟ ಮಾಡಲಾಗುವುದು ಎಂದು ತಿಳಿಸಿದರು.-ಸಿ.ಬಿ. ಶಶಿಧರ್

### ಸರ್ಕಾರವೇ ಪರೀಕ್ಷೆ ನಡೆಸಬೇಕು

ಸರ್ಕಾರ ಕೂಡಲೇ ಕೇಂದ್ರ ಪರೀಕ್ಷಾ ಮಂಡಳಿಯನ್ನು ರದ್ದುಗೊಳಿಸಬೇಕು. ನೀಟ್ ಪರೀಕ್ಷೆಯನ್ನು ರದ್ದುಗೊಳಿಸಿ, ಕೇಂದ್ರ ಸರ್ಕಾರವೇ ಪರೀಕ್ಷೆ ನಡೆಸಬೇಕು. ಪಾರದರ್ಶಕ ಹಾಗೂ ಪ್ರಾಮಾಣಿಕ ಪರೀಕ್ಷಾ ವ್ಯವಸ್ಥೆ ರೂಪಿಸಬೇಕು ಎಂದು ಒತ್ತಾಯಿಸಿದರು.

# ಮಿನಿ ನ್ಯೂಸ್

## ಮೇವು ಪಡಿತರ ನೀತಿಯನ್ನು ಜಾರಿಗೆ ತರುವಂತೆ ರೈತಸಂಘ ಆಗ್ರಹ

• ಉದಯವಾಹಿನಿ, ಕೆ.ಆರ್.ಪೇಟೆ.


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಕಾಣಿಸಿಕೊಂಡಿರುವ ತೀವ್ರ ಬರಗಾಲದ ಹಿನ್ನೆಲೆಯಲ್ಲಿ ಜಾನುವಾರುಗಳ ಸಂರಕ್ಷಣೆಗಾಗಿ ಮೇವು ಪಡಿತರ ನೀತಿಯನ್ನು ಜಾರಿಗೆ ತರುವಂತೆ ರೈತಸಂಘದ ಅಧ್ಯಕ್ಷ ಕಾರಿಗನಹಳ್ಳಿ ಪುಟ್ಟೇಗೌಡ ಆಗ್ರಹಿಸಿದ್ದಾರೆ. ನಿರೀಕ್ಷಿತ ಪ್ರಮಾಣದ ಮಳೆಯಾಗದ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ತೀವ್ರ ಬರಗಾಲದ ಸನ್ನಿವೇಶ ನಿರ್ಮಾಣವಾಗಿದೆ. ಅಣೆಕಟ್ಟೆಗಳು ಭರ್ತಿಯಾಗದ ಹಿನ್ನೆಲೆಯಲ್ಲಿ ರೈತರು ಬೆಳೆ ಬೆಳೆಯಾಗದ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೆರೆ-ಕಟ್ಟೆಗಳು ಭರ್ತಿಯಾಗದೆ ಅಂತರ್ಜಲ ಮಟ್ಟ ಕುಸಿಯುತ್ತಿರುವುದರಿಂದ ಪಂಪ್ ಸೆಟ್ ಆಧಾರಿತ ಕೃಷಿಯ ಮೇಲೂ ವ್ಯತಿರಿಕ್ತ ಪರಿಣಾಮ ಉಂಟಾಗಿದೆ. ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದೆ. ಬರಗಾಲದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಜನರ ಹಿತರಕ್ಷಣೆಗೆ ನೀಡುವಷ್ಟೇ ಆದ್ಯತೆಯನ್ನು ರೈತ ಕುಟುಂಬಗಳ ಜೀವನಾಡಿಯಾಗಿರುವ ದನಕರುಗಳ ಸಂರಕ್ಷಣೆಗೂ ನೀಡಬೇಕು ಎಂದಿರುವ ರೈತ ನಾಯಕ ಪುಟ್ಟೇಗೌಡ ಬರಗಾಲದಿಂದಾಗಿ ದನಕರುಗಳಿಗೆ ಮೇವಿನ ಅಭಾವ ಕಾಣಿಸಿಕೊಳ್ಳುತ್ತಿದ್ದು ಹೈನುಗಾರಿಕೆಯನ್ನೆ ನಂಬಿ ಬದುಕುತ್ತಿರುವ ರೈತ ಕುಟುಂಬಗಳು ಆತಂಕಕ್ಕೆ ಸಿಲುಕಿವೆ ಎಂದಿದ್ದಾರೆ.

## ಕ್ರೀಡಾ, ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಳವಳ್ಳಿ.

ಪಟ್ಟಣದ ಶಾಂತಿ ಪದವಿ ಪೂರ್ವ ಕಾಲೇಜು ಶಾಂತಿ ಭವನ ಮಳವಳ್ಳಿ ಆವರಣದಲ್ಲಿ ಹಮ್ಮಿಕೊಂಡಿದ್ದ 2026 27ನೇ ಸಾಲಿನ ಕ್ರೀಡಾ ಮತ್ತು ಸಾಮಾಜಿಕ ಚಟುವಟಿಕೆಗಳ ಉದ್ಘಾಟನೆ ಹಾಗೂ ಪ್ರತಿಭ ಪುರಸ್ಕಾರ ಸಮಾರಂಭವು ಜರುಗಿತು ಸಮಾರಂಭದಲ್ಲಿ ಉದ್ಘಾಟನಾ ಕಾರ್ಯಕ್ರಮವನ್ನು ನೆರವೇರಿಸಿದಆಕಾಶವಾಣಿ ಜನಪದ ಕಲಾವಿದರು ಆದ ನೆಗಮಳೆ ರಾಜ ಚಂದ್ರಜ್ ಶ್ರೀ ರವರು ಕಾರ್ಯಕ್ರಮದ ಉದ್ಘಾಟನೆ ಕಾರ್ಯಕ್ರಮವನ್ನು ನೆರವೇರಿಸಿ ಮಾತನಾಡುತ್ತಾ ಮಾತನಾಡಿತಾಯಿಯ ಜೋಗುಳ ಅಪ್ಪನ ಬೈಗುಳ ಗುರುಗಳ ದಂಡನೆ ಇದ್ದರೆ ಯುವಜನತೆ ಗ ಸ್ಪೂರ್ತಿಯಾಗುತ್ತದೆ ಸಮಾಜದ ಚಿಕಿತ್ಸೆಯ ಕೆಲಸಗಳನ್ನು ಮಾಡಿದರೆ ಯುವಜನತೆ ಸರಿ ಹೋಗುತ್ತದೆ ವೇಗವಾಗಿ ನಡೆಯುತ್ತಿರುವ ವಿಜ್ಞಾನ ಮಾನವರು ಪೂರಕವಾಗಿರಬೇಕು ವಿಜ್ಞಾನವೆಂಬುದು ಮಾರಕವಾಗಿರಬಾರದು ವಿಜ್ಞಾನದ ಜೊತೆಗೆ ಸಂಸ್ಕೃತಿಯನ್ನು ಸುಖ ಶಾಂತಿ ನೆಮ್ಮದಿಗಳನ್ನು ಮೈಗೂಡಿಸಿಕೊಂಡು ದುಶ್ಚಟಗಳಿಂದ ದೂರವಿರಬೇಕು ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಶೇಕಡ 80ರಷ್ಟು ವಿದ್ಯಾರ್ಥಿ ವಿದ್ಯಾರ್ಥಿನಿಯರು ಮತ್ತಷ್ಟು ಪರೀಕ್ಷೆಗಳನ್ನು ಬರೆದು ಮುಂದಿನ ಗುರಿ ಸಾಧಿಸಬಹುದು ವಿದ್ಯಾರ್ಥಿನಿ ವಿದ್ಯಾರ್ಥಿಗಳು ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಉತ್ತಮ ಸಮಾಜ ನಿರ್ಮಾಣವಾಗಬೇಕೆಂದು ಕರೆ ನೀಡಿದರು ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳನ್ನು ತಮ್ಮ ನಗೆ ಹಾಸ್ಯ ದ ಮೂಲಕ ನೆಗೆಬೇರಿದರು.

## ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಕೊಳಿಸಲು ಮಾಧ್ಯಮಗಳು ಶ್ರಮಿಸಬೇಕು ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೊಳ್ಳೇಗಾಲ

ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ರಿ) ಕೊಳ್ಳೇಗಾಲ ತಾಲ್ಲೂಕು ಘಟಕ ವತಿಯಿಂದ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ-2026 ಸಮಾ ರಂಭಕ್ಕೆ ಕೊಳ್ಳೇಗಾಲ ಶಾಸಕರು ಎ. ಆರ್. ಕೃಷ್ಣಮೂರ್ತಿ ಚಾಲನೆ ನೀಡಿ ಮಾತನಾಡಿದರು. ಪ್ರಸ್ತುತ ಪತ್ರಿಕೋದ್ಯಮ ಉತ್ತಮ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಪತ್ರಿಕೆಗಳಿಗೆ ನಾಗರೀಕ ಸಮಾಜದಲ್ಲಿ ಗೌರವವಿದೆ. ಭಾರತೀಯರೆಲ್ಲರೂ ಒಂದೇ ಎಂದು ಹೇಳುತ್ತೇವೆ. ಸಂವಿಧಾನದಡಿ ಪ್ರತಿಯೊಬ್ಬರಿಗೂ ಸಮಾನ ಅವಕಾಶ ದೊರೆತಿದೆ. ಆದರೂ ಜಾತೀಯತೆ, ಅಸ ಮಾನತೆ, ದೌರ್ಜನ್ಯ, ಅತ್ಯಾಚಾರಗಳು ನಡೆಯುತ್ತಿದೆ. ಇವುಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಮಾಧ್ಯಮಗಳು ಕೆಲಸ ಮಾಡಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಕೊ ಳ್ಳಿಸುವ ನಿಟ್ಟಿನಲ್ಲಿ ಶ್ರಮಿಸಬೇಕು ಎಂದರು.

ಕೊಳ್ಳೇಗಾಲ ತಾಲ್ಲೂಕು ಪತ್ರಕರ್ತರು ನಿವೇಶನ, ಲ್ಯಾಪ್ ಟಾಪ್ ವಿತರಿಸಲು ಮನವಿ ಮಾಡಿದ್ದು ಈ ಬಗ್ಗೆ ಕ್ರಮವಹಿಸಲಾಗುತ್ತದೆ. ಪತ್ರಕರ್ತರ ಭವನ ನಿರ್ಮಾಣಕ್ಕೆ ಅನುದಾನ ನೀಡಿ ಪೂರ್ಣಗೊಳಿಸಲಾಗುತ್ತದೆ ಎಂದರು.

ತಾಲ್ಲೂಕು ಸಂಘದ ಅಧ್ಯಕ್ಷ ಚಿಕ್ಕಮಾಳಿಗೆ ಮಾತನಾಡಿ, ಪತ್ರಕರ್ತರು ಸೌಲಭ್ಯಗಳ ಕೊರತೆಗಳ ನಡುವೆ ಸಮಾಜ ಪರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರಾಮಾಣಿಕವಾಗಿ ಜನರ ಸಮಸ್ಯೆಗಳನ್ನು ಬೆಳಕು ಚೆಲ್ಲುತ್ತಿದ್ದಾರೆ. ಶಾಸಕ ಎ.ಆರ್.ಕೃಷ್ಣಮೂರ್ತಿ ಅವರು ತಮ್ಮ ನೇತೃತ್ವದಲ್ಲಿ ಕೊಳ್ಳೇಗಾಲ ಪತ್ರಕರ್ತರ ಭವನ ಕಾಮಗಾರಿ ಪೂರ್ಣಗೊಳ್ಳಬೇಕು.

## ಸುಭಿಕ್ಷಕ್ಕಾಗಿ ಮರವತ್ತೂರು ಅಮ್ಮನವರಿಗೆ ವಿಶೇಷ ಪೂಜಾ ಕೈಂಕರ್ಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಶಿಡ್ಲಘಟ್ಟ

ಉತ್ತಮ ಮಳೆಯಾಗಿ ನಾಡಿನಲ್ಲಿ ಸುಭಿಕ್ಷತೆ ನೆಲೆಸಬೇಕು, ರೈತರು ನೆಮ್ಮದಿಯಿಂದ ಬದುಕಬೇಕು ಹಾಗೂ ಸಮೃದ್ಧ ಬೆಳೆ ಬೆಳೆಯಬೇಕು ಎಂಬ ಸಂಕಲ್ಪದೊಂದಿಗೆ ಶಿಡ್ಲಘಟ್ಟದ ಹತ್ತು ಮಂಡಳಿಗಳ ಭಕ್ತರು ತಾಲ್ಲೂಕು ವೀರಾಪುರ ಬಳಿಯ ಶ್ರೀ ಮಲೈ ಮಹದೇಶ್ವರ ಸ್ವಾಮಿ ದೇವಾಲ ಯದ ಆವರಣದಲ್ಲಿ ಮರವತ್ತೂರು ಅಮ್ಮನವರಿಗೆ ವಿಶೇಷ ಪೂಜೆ ಸಲ್ಲಿಸಿ ಸಾಮೂಹಿಕ ಪ್ರಾರ್ಥನೆ ನಡೆಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕರ್ನಾಟಕ ಗುತ್ತಿಗೆದಾರರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜು ನಾಥ್, ಉತ್ತಮ ಮಳೆಯಾಗಿ ರೈತರ ಸಂಕಷ್ಟ ದೂರವಾಗಬೇಕು. ಜಲಾಶಯಗಳು ಭರ್ತಿಯಾಗಿ ಕೃಷಿ ಚಟುವಟಿಕೆಗಳು ಚುರುಕುಗೊಳ್ಳಬೇಕು ಎಂಬ ಉದ್ದೇಶದಿಂದ ದೇವಿಯ ಸನ್ನಿಧಿಯಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಗಿದೆ ಎಂದು ಹೇಳಿದರು.ಗಂಗಮ್ಮದೇವಿ ವಸಂತ್ ಮಾತನಾಡಿ, ಮಳೆಯ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಶಿಡ್ಲಘಟ್ಟದ ವಿವಿಧ ಮಂಡಳಿಗಳ ಭಕ್ತರು ಒಗ್ಗೂಡಿ ವಿಶೇಷ ಪೂಜೆ ಹಮ್ಮಿಕೊಂಡಿ ದ್ದಾರೆ. ದೇವಿಯ ಆಶೀರ್ವಾದದಿಂದ ಉತ್ತಮ ಮಳೆಯಾಗಿ ರಾಜ್ಯದಲ್ಲಿ ಸುಭಿಕ್ಷತೆ ನೆಲೆಸಲಿ ಎಂಬುದು ಎಲ್ಲರ ಆಶಯವಾಗಿದೆ ಎಂದು ತಿಳಿಸಿದರು.ಪೂಜೆಯ ಬಳಿಕ ಭಕ್ತರು ದೇವಿಯ ನಾಮಸ್ಮರಣೆ, ಭಜನೆ ಹಾಗೂ ಜಯಘೋಷಗಳಲ್ಲಿ ಪಾಲ್ಗೊಂಡರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ನಿಮ್ಮ ಸಮರ್ಪಣೆ ಮತ್ತು ಶ್ರಮವನ್ನು ಗಮನಿಸಲಾಗುತ್ತದೆ ಮತ್ತು ಇಂದು ನಿಮಗೆ ಸ್ವಲ್ಪ ಆರ್ಥಿಕ ಪ್ರತಿಫಲಗಳನ್ನು ತರುತ್ತದೆ. ಕಲ್ಪನೆಗಳ ಹಿಂದೆ ಓಡಬೇಡಿ ಹಾಗೂ ಸಾಧ್ಯವಾದಷ್ಟೂ ವಾಸ್ತವವಾದಿಗಳಾಗಿರಿ. ನಿಮ್ಮ ಸ್ನೇಹಿತರ ಜೊತೆ ಸಮಯ ಕಳೆಯಿರಿ.

**ವೃಷಭ** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ನಿಮ್ಮ ಮನೆಯ ಪರಿಸ್ಥಿತಿ ಸ್ವಲ್ಪ ಅನಿರೀಕ್ಷಿತವಾಗಿರುತ್ತದೆ.

**ಮಿಥುನ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಅದ್ಭುತ ದಿನ. ಹಣದ ಸಾಲವನ್ನು ತೆಗೆದುಕೊಂಡಿರುವ ಜನರು,ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ. ನೀವು ಬಾಕಿಯಿರುವ ಎಲ್ಲಾ ಕುಟುಂಬದ ಸಾಲಗಳನ್ನು ತೀರಿಸಲು ಸಾಧ್ಯವಾಗುತ್ತದೆ.

**ಕರ್ಕಾಟಕ** ಉತ್ತಮ ಆರೋಗ್ಯ ಏನಾದರೂ ಅಸಾಮಾನ್ಯವಾಗಿದ್ದನ್ನು ಸಾಧಿಸಲು ಸಾಧ್ಯವಾಗಿಸುವ ಒಂದು ವಿಶೇಷ ದಿನ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ.

**ಸಿಂಹ** ಕಿಕ್ಕಿರಿದ ಬಸ್‌ನಲ್ಲಿ ಪ್ರಯಾಣಿಸುವಾಗ ರಕ್ತದೊತ್ತಡವಿರುವ ರೋಗಿಗಳು ಅವರ ಆರೋಗ್ಯದ ಬಗ್ಗೆ ಹೆಚ್ಚು ಎಚ್ಚರಿಕೆ ವಹಿಸಬೇಕು. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ನಿಮ್ಮ ಜೀವನ ಸಂಗಾತಿಯ ನಿರ್ಲಕ್ಷತೆ ಸಂಬಂಧವನ್ನು ಹಾಳು ಮಾಡಬಹುದು.

**ಕನ್ಯಾ** ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

**ತುಲಾ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಕೆಟ್ಟದ್ದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ ಅಗತ್ಯವಿರುವ ಬೆಳಕನ್ನು ನೀಡುತ್ತದೆ.

**ವೃಶ್ಚಿಕ** ಹಲ್ಲುನೋವು ಅಥವಾ ಹೊಟ್ಟೆ ಹಾಳಾಗುವಿಕೆ ನಿಮಗೆ ಕೆಲವು ಸಮಸ್ಯೆಗಳನ್ನು ತರಬಹುದು. ತಕ್ಷಣ ಪರಿಹಾರ ಪಡೆಯಲು ವೈದ್ಯರ ಸಲಹೆ ಪಡೆಯಿರಿ. ತಮ್ಮ ಹಣವನ್ನು ಇನ್ನೊಬ್ಬರಿಗೆ ನೀಡಲು ಇಷ್ಟಪಡುವುದಿಲ್ಲ ಆದರೆ ಇಂದು ನೀವು ಅಗತ್ಯವಿರುವವರಿಗೆ ಹಣವನ್ನು ಕೊಟ್ಟು ವಿಶ್ರಾಂತಿಯನ್ನು ಅನುಭವಿಸುವಿರಿ.

**ಧನಸ್ಸು** ಮಾನಸಿಕ ಸ್ಪಷ್ಟತೆಯನ್ನು ನಿರ್ವಹಿಸಲು ಗೊಂದಲ ಮತ್ತು ಹತಾಶೆಯನ್ನು ತಪ್ಪಿಸಿ ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ.

**ಮಕರ** ಕುಡಿಯುವ ಅಭ್ಯಾಸವನ್ನು ತೊಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ನೀವು ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು ಮತ್ತು ಇದು ನಿಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ. ನಿಮ್ಮ ಸ್ನೇಹಿತರೊಬ್ಬರು ಇಂದು ದೊಡ್ಡ ಸಾಲವನ್ನು ಕೇಳಬಹುದು.


**ಕುಂಭ** ನೀವು ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

**ಮೀನ** ಸೃಜನಶೀಲ ಕೆಲಸ ನಿಮ್ಮನ್ನು ಶಾಂತವಾಗಿರಿಸುತ್ತವೆ. ನೀವು ನಿಮ್ಮ ಹೂಡಿಕೆಗಳನ್ನು ಸಂಪ್ರದಾಯಬದ್ಧವಾಗಿ ಉಳಿತಾಯ ಮಾಡಿದರೆ ಹಣ ಮಾಡುತ್ತೀರಿ. ನಿಮ್ಮ ಕುಟುಂಬದ ಕಲ್ಯಾಣಕ್ಕಾಗಿ ಕೆಲಸ ಮಾಡಿ. ನಿಮ್ಮ ಕಾರ್ಯಗಳು ದುರಾಶೆಯಿಂದಲ್ಲದೇ ಪ್ರೀತಿ ಮತ್ತು ಸಕಾರಾತ್ಮಕ ದೃಷ್ಟಿಯಿಂದ ನಡೆಯಬೇಕು.

# ಎಸ್‌ಐಆರ್ ಮಹಾ ಸಂಪರ್ಕ ಅಭಿಯಾನ: ಕಮಲನಗರ ಪಟ್ಟಣದಲ್ಲಿ ಶಾಸಕ ಪ್ರಭು ಚವ್ಹಾಣರಿಂದ ಜನಜಾಗೃತಿ

• **ಉದಯವಾಹಿನಿ, ಕಮಲನಗರ:**

ಎಸ್‌ಐಆರ್ ಮಹಾ ಸಂಪರ್ಕ ಅಭಿಯಾನದ ನಿಮಿತ್ತ ಔರಾದ(ಬಿ) ಶಾಸಕರು ಹಾಗೂ ಮಾಜಿ ಸಚಿವರಾದ ಪ್ರಭು ಬಿ. ಚವ್ಹಾಣ ಅವರು ಕಮಲನಗರ ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ಮನೆ ಮನೆಗೆ ಭೇಟಿ ನೀಡಿ ಎಸ್‌ಐಆರ್ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ಮನೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಕುಟುಂಬದ ಸದಸ್ಯರೊಂದಿಗೆ ಸಂವಾದ ನಡೆಸಿದ ಅವರು, ನಿಮ್ಮ ಮನೆಯಲ್ಲಿ ಎಷ್ಟು ಜನರಿದ್ದಾರೆ? ಎಷ್ಟು ಎನ್ಯುಮರೇಷನ್ ಅರ್ಜಿಗಳನ್ನು ಭರ್ತಿ ಮಾಡಿದ್ದೀರಿ ಆನ್‌ಲೈನ್‌ನಲ್ಲಿ ಎಂಟ್ರಿ ಆಗಿದೆಯೇ ಫಾರ್ಮ್ ಭರ್ತಿ ಅಥವಾ ಸಲ್ಲಿಕೆಗೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆ ಇದೆಯೇ ಎಂದು ವಿಚಾರಿಸಿ ಮಾಹಿತಿ ಪಡೆದರು. ಜನರ ಸಮಸ್ಯೆಗಳನ್ನು ಆಲಿಸಿ, ಸ್ಥಳದಲ್ಲೇ ಅಗತ್ಯ ಮಾರ್ಗದರ್ಶನ ನೀಡಿದರು. ಸಂಚಾರದ ವೇಳೆ ಅನೇಕ ಮನೆಗಳಲ್ಲಿ ಎಸ್‌ಐಆರ್ ಎನ್ಯುಮರೇಷನ್ ಫಾರ್ಮ್‌ಗಳನ್ನು ಪಡೆದು ಅವುಗಳನ್ನು ಭರ್ತಿ ಮಾಡದೇ ಹಾಗೆಯೇ ಇಟ್ಟುಕೊಂಡಿರುವುದು ಗಮನಕ್ಕೆ ಬಂದಿದೆ. ಇಂತಹ ಮತದಾರರು ವಿಳಂಬ ಮಾಡದೇ ಫಾರ್ಮ್‌ಗಳನ್ನು ಸಂಪೂರ್ಣವಾಗಿ ಭರ್ತಿ ಮಾಡಿ, ನಿಗದಿತ ಅವಧಿಯೊಳಗೆ ತಮ್ಮ ವ್ಯಾಪ್ತಿಯ ಬೂತ್ ಮಟ್ಟದ ಅಧಿಕಾರಿಗಳಿಗೆ (ಬಿಎ) ಸಲ್ಲಿಸಬೇಕು ಎಂದು ಅವರು ತಿಳಿಸಿದರು.



ಉದಯವಾಹಿನಿ ಚಿತ್ರ

ಫಾರ್ಮ್ ಭರ್ತಿ ಮಾಡುವಲ್ಲಿ ಯಾವುದೇ ಗೊಂದಲ ಅಥವಾ ಸಮಸ್ಯೆ ಎದುರಾದರೆ ಬಿಎಗಳು, ಸಂಬಂಧಿತ ಅಧಿಕಾರಿಗಳು ಹಾಗೂ ಪಕ್ಷದ ಕಾರ್ಯಕರ್ತರ ಸಹಾಯ ಪಡೆಯುವಂತೆ ಸಲಹೆ ನೀಡಿದ ಅವರು, ಬಿಎ ಹಾಗೂ ಬಿಎ-2ಗಳು ಮನೆ ಮನೆಗೆ ಭೇಟಿ ನೀಡಿ ಪ್ರತಿಯೊಂದು ಅರ್ಜಿಯೂ ಸಲ್ಲಿಕೆಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಸೂಚಿಸಿದರು.

> ಈ ಸಂದರ್ಭದಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯ ಮಹತ್ವವನ್ನು ವಿವರಿಸಿದ ಅವರು, ಅರ್ಹ ಪ್ರತಿಯೊಬ್ಬ ಮತದಾರರು ಎನ್ಯುಮರೇಷನ್ ಫಾರ್ಮ್ ಅನ್ನು ತಪ್ಪದೇ ಭರ್ತಿ ಮಾಡಿ ನಿಗದಿತ ಅವಧಿಯೊಳಗೆ ಸಲ್ಲಿಸುವಂತೆ ಮನವಿ ಮಾಡಿದರು. -ಶಾಸಕ ಪ್ರಭು ಚವ್ಹಾಣ

# ಸಿ. ಟಿ. ರವಿ ಮನೆ ಮುಂದೆ ಹೈಡ್ರಾಮಾ, ಪೊಲೀಸರ ವಿರುದ್ಧ ಕಾರ್ಯಕರ್ತರ ಆಕ್ರೋಶ!

## ಪೊಲೀಸ್ ತಂಡ ರವಿ ಅವರ ನಿವಾಸಕ್ಕೆ ತೆರಳಿ ನೋಟಿಸ್ ನೀಡಲು ಮುಂದಾಯಿತು. ಆದರೆ, ಸಿ.ಟಿ. ರವಿ ಅದನ್ನು ಸ್ವೀಕರಿಸಲು ನಿರಾಕರಿಸಿದರು

• **ಉದಯವಾಹಿನಿ, ಚಿಕ್ಕಮಗಳೂರು:**

ಬಿಜೆಪಿ ವಿಧಾನ ಪರಿಷತ್ ಸದಸ್ಯ (ಎಂಎಲ್‌ಸಿ) ಸಿ.ಟಿ. ರವಿ ಅವರ ನಿವಾಸದ ಮುಂದೆ ಹೈಡ್ರಾಮಾ ನಡೆದಿದ್ದು, ದ್ವೇಷ ಭಾಷಣ ಪ್ರಕರಣಕ್ಕೆ ಸಂಬಂಧಿಸಿದಂತೆ ನೋಟಿಸ್ ನೀಡಲು ತೆರಳಿದ್ದ ಪೊಲೀಸರಿಗೆ ಸಿ.ಟಿ. ರವಿ ನೋಟಿಸ್ ಸ್ವೀಕರಿಸಲು ನಿರಾಕರಿಸಿದ

1 : ಪ್ರತಿಭಟನೆ ಕುರಿತ ಹೇಳಿಕೆ ಹಿನ್ನೆಲೆ
2 : ಮೊದಲು ಎಫ್‌ಐಆರ್ ಪ್ರತಿ ನೀಡಿ
3 : ಘೋಷಣೆ, ನೋಟಿಸ್ ಹರಿದು ಆಕ್ರೋಶ

ಘಟನೆ ಕೆಲಕಾಲ ಉದ್ವಿಗ್ನ ವಾತಾವರಣಕ್ಕೆ ಕಾರಣವಾಯಿತು.

ಸಮುದಾಯದ ವಿರುದ್ಧ ದ್ವೇಷ ಭಾಷಣ ಮಾಡಿದ ಆರೋಪದ ಮೇಲೆ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ವಿರುದ್ಧ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು,

ಈ ಪ್ರಕರಣ ಸಂಬಂಧ ವಿಚಾರಣೆಗೆ ಹಾಜರಾಗುವಂತೆ ಪೊಲೀಸರ ನೋಟಿಸ್ ಸ್ವೀಕರಿಸಲು ಸಿ.ಟಿ. ರವಿ ನಿರಾಕರಿಸಿದ್ದಾರೆ. ನಗರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಅಭಯ್ ಪ್ರಕಾಶ್ ನೇತೃತ್ವದ ಪೊಲೀಸ್ ತಂಡ ರವಿ ಅವರ ನಿವಾಸಕ್ಕೆ ತೆರಳಿ ನೋಟಿಸ್ ನೀಡಲು ಮುಂದಾಯಿತು. ಆದರೆ, ಸಿ.ಟಿ. ರವಿ ಅದನ್ನು ಸ್ವೀಕರಿಸಲು ನಿರಾಕರಿಸಿದರು. ಈ ವೇಳೆ ಅವರ ಬೆಂಬಲಿಗರು ಪೊಲೀಸರ ಕ್ರಮವನ್ನು ತೀವ್ರವಾಗಿ ಖಂಡಿಸಿ, ಆಡಳಿತಾರೂಢ ಪಕ್ಷದ ಪರವಾಗಿ ಪೊಲೀಸರು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಆರೋಪಿಸಿದರು. ದೆಹಲಿ ವಿದ್ಯಾರ್ಥಿ ಪ್ರತಿಭಟನೆಗೆ ಸಂಬಂಧಿಸಿದಂತೆ ಸಿ.ಟಿ. ರವಿ ನೀಡಿದ್ದ ಎನ್ನಲಾದ ಹೇಳಿಕೆಗೆ ಸಂಬಂಧಿಸಿದ ಪ್ರಕರಣದ ಹಿನ್ನೆಲೆಯಲ್ಲಿ ಪೊಲೀಸರು ನೋಟಿಸ್ ನೀಡಲು ತೆರಳಿದ್ದರು. ವರದಿಗಳ ಪ್ರಕಾರ, ನೀಟ್ ಪರೀಕ್ಷೆಗೂ ಮುಲ್ಲಾಗೂ ಏನು ಸಂಬಂಧ? ಎಂದು ಸಿ.ಟಿ. ರವಿ ಹೇಳಿಕೆ ನೀಡಿದ್ದರು ಎನ್ನಲಾಗಿದೆ. ಪೊಲೀಸರು ನೋಟಿಸ್ ನೀಡಲು ಮುಂದಾದಾಗ, ಮೊದಲು ಎಫ್‌ಐಆರ್ ಪ್ರತಿಯನ್ನು ನೀಡಿ ಎಂದು ಸಿ.ಟಿ. ರವಿ ಆಗ್ರಹಿಸಿದರು.



ಉದಯವಾಹಿನಿ ಚಿತ್ರ

> ವಾಸ್ತವಾಂಶ ಪರಿಶೀಲಿಸದೇ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಕಾಂಗ್ರೆಸ್ ನಾಯಕರ ವಿರುದ್ಧವೂ ದೂರುಗಳು ದಾಖಲಾಗಿವೆ. ಅವರ ವಿರುದ್ಧ ಏಕೆ ಕ್ರಮ ಕೈಗೊಂಡಿಲ್ಲ ಎಂದು ಪ್ರಶ್ನಿಸಿದರು. ಸಿ.ಟಿ. ರವಿ

ನನ್ನ ಭಾಷಣದಲ್ಲಿ ನಾನು ಯಾವುದೇ ಧರ್ಮದ ಬಗ್ಗೆ ಮಾತನಾಡಿದ್ದೇನಾ? ನನ್ನ ಭಾಷಣದಲ್ಲಿ ಧರ್ಮ ಎಂಬ ಪದವೇ ಇಲ್ಲ.ನಾನು ಯಾವುದೇ ಸಮುದಾಯದ ವಿರುದ್ಧ ಮಾತನಾಡಿಲ್ಲ.. 'ಮುಲ್ಲಾ' ಎಂದರೆ ಮುಸ್ಲಿಂ ಸಮುದಾಯ ಎಂದರ್ಥವೇ? ನಾನು ಬೆಂಕಿಗೆ ತುಪ್ಪ ಸುರಿಯಲು ಬಂದವರ ಬಗ್ಗೆ ಮಾತ್ರ ಮಾತನಾಡಿದ್ದೇನೆ, ಯಾವುದೇ ಸಮುದಾಯದ ಬಗ್ಗೆ ಅಲ್ಲ, ಎಂದು ಅವರು ಪೊಲೀಸರಿಗೆ ಹೇಳಿದರು. ಇದೇ ವೇಳೆ, ರಾಜಕಾರಣಿಗಳ ಕೈಗೊಂಬೆಗಳಾಗಿ ಕೆಲಸ ಮಾಡಬೇಡಿ ಎಂದು ಪೊಲೀಸರಿಗೆ ಎಚ್ಚರಿಕೆಯನ್ನೂ ನೀಡಿದರು.ಸಿ.ಟಿ. ರವಿ ಮನೆಯಲ್ಲೇ ಇದ್ದಾಗ ಗೋಡೆಗೆ ನೋಟಿಸ್ ಅಂಟಿಸುವ ಅಗತ್ಯವೇನು? ಎಂದು ಪ್ರಶ್ನಿಸಿ, ಪೊಲೀಸರ ವಿರುದ್ಧ ಕಾರ್ಯಕರ್ತರು ಧಿಕ್ಕಾರದ ಘೋಷಣೆಗಳನ್ನು ಕೂಗಿದರು. ಇನ್ಸ್‌ಪೆಕ್ಟರ್ ಅಭಯ್ ಪ್ರಕಾಶ್ ಪಾಟೀಲ್ ಸ್ಥಳದಿಂದ ತೆರಳುವವರೆಗೂ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

### ಬಿಜೆಪಿ ಕಾರ್ಯಕರ್ತರ ಆಕ್ರೋಶ

ಈ ವೇಳೆ ವಕೀಲ ಸುಧಾಕರ್ ಹಾಗೂ ಇತರ ವಕೀಲರು ಮತ್ತು ಸಿ.ಟಿ. ರವಿ ಅವರ ಬೆಂಬಲಿಗರು ಪೊಲೀಸರ ವಿರುದ್ಧ ಘೋಷಣೆಗಳನ್ನು ಕೂಗಿದರು. ಪರಿಸ್ಥಿತಿ ಉದ್ವಿಗ್ನಗೊಳ್ಳುವ ಲಕ್ಷಣಗಳು ಕಂಡುಬಂದ ಹಿನ್ನೆಲೆಯಲ್ಲಿ ಇನ್ಸ್‌ಪೆಕ್ಟರ್ ಅಭಯ್ ಪ್ರಕಾಶ್ ಮತ್ತು ಪೊಲೀಸ್ ಸಿಬ್ಬಂದಿ ಸ್ಥಳದಿಂದ ತೆರಳಿದರು.

ಸಿ.ಟಿ. ರವಿ ಅವರು ಠಾಣೆಗೆ ಹಾಜರಾಗಲು ಎರಡು ದಿನ ಕಾಲಾವಕಾಶ ಬೇಕು ಎಂದು ಕೇಳಿದರು. ಪೊಲೀಸರು ಇದಕ್ಕೆ ನಿರಾಕರಿಸಿದರು. ಆ ಬಳಿಕ ಪೊಲೀಸರು ಅಂಟಿಸಿದ್ದ ನೋಟಿಸ್ ಅನ್ನು ಬಿಜೆಪಿ ಕಾರ್ಯಕರ್ತರು ಹರಿದು ಹಾಕಿ ಆಕ್ರೋಶ ವ್ಯಕ್ತಪಡಿಸಿದರು.

# ವಕ್ಫ್ ಶಾಖಾ ಸಂಸ್ಥೆಗಳಿಗೆ ಭೇಟಿ ನೀಡಿದ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ

• **ಉದಯವಾಹಿನಿ ಕಲಬುರಗಿ, -**

ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷರಾದ ಡಾ. ಹಫೀಜ್ ಸಯ್ಯದ್ ಮೊಹಮ್ಮದ್ ಅಲಿ ಅಲ್ ಹುಸೈನಿ ಅವರು, ಕಲಬುರಗಿ ನಗರದ ಯತೀಂ ಖಾನಾ, ಅಂಜುಮನ್ ಅನ್ಸಾರುಸ್-ಸುಫ್ಫಾಗೆ ಭೇಟಿ ನೀಡಿ, ವಕ್ಫ್ ಸಂಸ್ಥೆಯ ಆಡಳಿತ, ಕಾರ್ಯನಿರ್ವಹಣೆ ಹಾಗೂ ಕಲ್ಯಾಣ ಕಾರ್ಯಕ್ರಮಗಳ ಮಾಹಿತಿಯನ್ನು ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಡಾ. ಅಲ್ ಹುಸೈನಿ ಅವರು ಯತೀಂ ಖಾನಾದ ಎಸಿಎಫ್ ಆಡಳಿ ವಿಭಾಗದ ಮೊಹಮ್ಮದ್ ಮುಜೀಬುದ್ದೀನ್ ಹಾಗೂ ಕಲಬುರಗಿ ವಕ್ಫ್ ಅಧಿಕಾರಿ ಪರ್ವೇಜ್ ಆಲಂ ಅವರೊಂದಿಗೆ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲಿ ಸಂಸ್ಥೆಯ ದೈನಂದಿನ ಆಡಳಿತ, ವಕ್ಫ್ ಆಸ್ತಿಗಳ ನಿರ್ವಹಣೆ, ಶೈಕ್ಷಣಿಕ ಮತ್ತು ಕಲ್ಯಾಣ ಕಾರ್ಯಕ್ರಮಗಳು ಹಾಗೂ ಮಕ್ಕಳಿಗೆ ನೀಡಲಾಗುತ್ತಿರುವ ಸೇವೆಗಳ ಗುಣಮಟ್ಟವನ್ನು ಇನ್ನಷ್ಟು ಉತ್ತಮಗೊಳಿಸುವ ಕುರಿತು ಸವಿಸ್ತಾರವಾಗಿ ಚರ್ಚಿಸಲಾಯಿತು. ಭೇಟಿಯ ಭಾಗವಾಗಿ ಅಧ್ಯಕ್ಷರು, ವಿದ್ಯಾರ್ಥಿಗಳು ಮತ್ತು ಆಡಳಿತಾಧಿಕಾರಿಗಳು, ಸಿಬ್ಬಂದಿಯೊಂದಿಗೆ ಸಂವಾದ ನಡೆಸಿ, ಅವರ ಅಗತ್ಯತೆಗಳು ಹಾಗೂ ಕುಂದುಕೊರತೆಗಳನ್ನು ಆಲಿಸಿದರು. ಸಂಸ್ಥೆಯ ಕಾರ್ಯನಿರ್ವಹಣೆ ಕುರಿತು ಅಭಿಪ್ರಾಯಗಳನ್ನು ಸಂಗ್ರಹಿಸಿದರು. ಬಳಿಕ ಅವರು ಯತೀಂ ಖಾನಾದ ಆವರಣವನ್ನು ಪರಿಶೀಲಿಸಿ, ವಸತಿ, ಶಿಕ್ಷಣ, ಊಟದ ವ್ಯವಸ್ಥೆ ಹಾಗೂ ನಿವಾಸಿ ಮಕ್ಕಳಿಗೆ ಒದಗಿಸಲಾಗುತ್ತಿರುವ ಇತರೆ ಮೂಲಭೂತ ಸೌಲಭ್ಯಗಳನ್ನು ವೀಕ್ಷಿಸಿದರು. ಡಾ. ಅಲ್ ಹುಸೈನಿ ಅವರು ಮಕ್ಕಳ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಆಡಳಿತ ಮಂಡಳಿ ಹಾಗೂ ಸಿಬ್ಬಂದಿಯ ಕಾರ್ಯವನ್ನು ಶ್ಲಾಘಿಸಿದರು. ವಕ್ಫ್ ಸಂಸ್ಥೆಗಳ ಆಡಳಿತದಲ್ಲಿ ಪಾರದರ್ಶಕತೆ, ಉತ್ತರದಾಯಿತ್ವ ಹಾಗೂ ಮಕ್ಕಳಿಗೆ ಉತ್ತಮ ಆರೈಕೆಯನ್ನು ಕಾಪಾಡಿಕೊಳ್ಳುವ ಮಹತ್ವವನ್ನು ಅವರು ಒತ್ತಿ ಹೇಳಿದರು.



ಉದಯವಾಹಿನಿ ಚಿತ್ರ

> ಅನಾಥ ಹಾಗೂ ಹಿಂದುಳಿದ ಮಕ್ಕಳಿಗೆ ಉತ್ತಮ ಶೈಕ್ಷಣಿಕ ಅವಕಾಶಗಳು ಮತ್ತು ಸಮಗ್ರ ಕಲ್ಯಾಣ ಒದಗಿಸುವ ಉದ್ದೇಶದ ಎಲ್ಲಾ ಯೋಜನೆಗಳಿಗೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಮುಂದೆಯೂ ತನ್ನ ಸಂಪೂರ್ಣ ಬೆಂಬಲವನ್ನು ನೀಡಲಿದೆ ಎಂದು ಅವರು ಭರವಸೆ ನೀಡಿದರು .
> -ವಕ್ಫ್ ಮಂಡಳಿ ಅಧ್ಯಕ್ಷ

# ಕಾರ್ಗಿಲ್ ವಿಜಯೋತ್ಸವ ಆಚರಣೆ

• **ಉದಯವಾಹಿನಿ ಕಲಬುರಗಿ,-**

ಭಾರತ್ ಸ್ಕೌಟ್ಸ್ ಗೈಡ್ಸ್ ಜಿಲ್ಲಾ ಸಂಸ್ಥೆಯಿಂದ ಕಾರ್ಗಿಲ್ ವಿಜಯೋತ್ಸವ ಕಾರ್ಯಕ್ರಮ ಮತ್ತು ಜಾಥಾ ಕಾರ್ಯಕ್ರಮ ಮಾಡಲಾಯಿತು. ಜಿಲ್ಲಾ ಕೇಂದ್ರ ಕಚೇರಿಯಿಂದ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಕಬ್ ಬುಲ್ ಬುಲ್ ಸ್ಕೌಟ್ಸ್ ಗೈಡ್ಸ್, ರೂವರ್ ರೇಂಜರ್ಸ್ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಮತ್ತು ಜಿಲ್ಲಾ ಸಂಸ್ಥೆ ಪದಾಧಿಕಾರಿಗಳು ಜಾಥಾದಲ್ಲಿ ಭಾಗವಹಿಸಿದ್ದರು ಜಾಥಾ ಕಾರ್ಯಕ್ರಮವು ನಗರದ ಸುಪರ್ ಮಾರ್ಕೆಟ್‌ನ ಎಂಪಿಎಸ್‌ಹೆಚ್ ಶಾಲೆಯಿಂದ ಪ್ರಾರಂಭವಾಗಿ ತಹಸೀಲ್ದಾರ್ ಕಾರ್ಯಾಲಯದಿಂದ ಜಗತ್ ಸರ್ಕಲ್ ಮತ್ತು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಚೌಕ ಪೊಲೀಸ್ ಸ್ಟೇಷನ್ ಮಾರ್ಗದಿಂದ ಮರಳಿ ಜಿಲ್ಲಾ ಸಂಸ್ಥೆ ಕೇಂದ್ರ ಕಚೇರಿಗೆ ತಲುಪಲಾಯಿತು. ನಂತರ ಕಾರ್ಗಿಲ್ ವಿಜಯೋತ್ಸವ ಆಚರಣೆ ಮಾಡಲಾಯಿತು. ಜಿಲ್ಲಾ ಸಂಸ್ಥೆ ಕಾರ್ಯದರ್ಶಿ ಪೀರಪ್ಪ ಹೂಗೊಂಡ ಕಾರ್ಗಿಲ್ ವಿಜಯೋತ್ಸವ ಆಚರಣೆ ಕುರಿತು ಪ್ರಾಸ್ತಾವಿಕ ಮಾತನಾಡಿದರು, ನಂತರ ದೇಶ ಸೇವೆ ಸಲ್ಲಿಸಿದ ಸೈನಿಕರಿಗೆ ಜಿಲ್ಲಾ ಸಂಸ್ಥೆಯಿಂದ ಗೌರವಿಸಿ ಸನ್ಮಾನಿಸಲಾಯಿತು ಮತ್ತು ಸೈನಿಕರು ತಮ್ಮ ಹೋರಾಟ ಮತ್ತು ಕಾರ್ಗಿಲ್ ವಿಜಯೋತ್ಸವ ಆಚರಣೆ ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲೆಯ ಕಬ್ ಬುಲ್ ಬುಲ್ ಸ್ಕೌಟ್ಸ್ ಗೈಡ್ಸ್ ರೂವರ್ ರೇಂಜರ್ಸ್ 260 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಕರು ಹಾಗೂ ಪಾಲಕರು ಭಾಗವಹಿಸಿದ್ದರು.

# 1.48 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು

• **ಉದಯವಾಹಿನಿ, ಕಲಬುರಗಿ,-**

ಮನೆ ಬೀಗ ಮುರಿದು 1.48 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು ಮಾಡಿರುವ ಘಟನೆ ಕೋಟನೂರ (ಡಿ)ಯ ದರ್ಶನಾಪೂರ ಲೇಔಟ್‌ನಲ್ಲಿ ನಡೆದಿದೆ. ಸಿದ್ದಪ್ಪ ಸೊನ್ನದ ಎಂಬುವವರ ಮನೆ ಬೀಗ ಮುರಿದು ಕಳ್ಳರು 60 ಸಾವಿರ ರೂ. ಮೌಲ್ಯದ 10 ಗ್ರಾಂ.ಬಂಗಾರದ ಲಾಕೆಟ್, 60 ಸಾವಿರ ರೂ.ಮೌಲ್ಯದ 5 ಗ್ರಾಂ. ಬಂಗಾರದ 2 ಚೈನ್, 28 ಸಾವಿರ ರೂ.ಮೌಲ್ಯದ 5 ಗ್ರಾಂ.ಬಂಗಾರದ ಜುಮಕಿ ಮತ್ತು ಮಾಟಿ ಸೇರಿ 1.48 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು ಮಾಡಿದ್ದಾರೆ.

ಸಿದ್ದಪ್ಪ ಸೊನ್ನದ ಅವರು ತಮ್ಮ ತಾಯಿ ಅನಾರೋಗ್ಯದಿಂದ ಬಳಲುತ್ತಿದ್ದುದ್ದರಿಂದ ಮನೆಗೆ ಬೀಗ ಹಾಕಿಕೊಂಡು ಕುಟುಂಬ ಸಮೇತ ಗೋಗಿ ಗ್ರಾಮಕ್ಕೆ ಹೋಗಿದ್ದರು. ಈ ವೇಳೆ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ.ಈ ಸಂಬಂಧ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ವಿದ್ಯಾರ್ಥಿಗಳಿಗೆ ಆಂಬುಲೆನ್ಸ್‌ಲ್ಲೇ ಡ್ರಗ್ಸ್ ಮಾರಾಟ ಮಂಗಳೂರಲ್ಲಿ ಪ್ರಕರಣ ಪತ್ತೆ

• **ಉದಯವಾಹಿನಿ, ಮಂಗಳೂರು:**

ತುರ್ತು ಚಿಕಿತ್ಸೆ ಅಗತ್ಯವಿರುವರ ಜೀವ ಕಾಪಾಡಲು ಬಳಸುವ ಆ್ಯಂಬುಲೆನ್ಸ್‌ನಲ್ಲಿಯೇ ಡ್ರಗ್ಸ್ ಇಟ್ಟುಕೊಂಡು ವಿದ್ಯಾರ್ಥಿಗಳಿಗೆ ಮಾರಾಟ ಮಾಡುತ್ತಿದ್ದ ಆಘಾತಕಾರಿ ಪ್ರಕರಣವೊಂದನ್ನು ಮಂಗಳೂರು ನಗರ ಅಪರಾಧ ವಿಭಾಗ (ಸಿಸಿಬಿ) ಪೊಲೀಸರು ಬಯಲಿಗೆಳೆದಿದ್ದಾರೆ. ಪ್ರಕರಣ ಬೆಳಕಿಗೆ ಬರುತ್ತಲೇ ಆರೋಪಿ, ಆ್ಯಂಬುಲೆನ್ಸ್ ಚಾಲಕ ಬೆಳ್ತಂಗಡಿಯ ಜಲೀಲ್ ಬಾಬಾ ಎಂಬಾತ ಪರಾರಿಯಾಗಿದ್ದು, ಆತನ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ. ಸಿಸಿಬಿ ಪೊಲೀಸರು ಸುರತ್ಕಲ್ ಸಮೀಪದ ಕುಳಾಯಿಗುಡ್ಡೆ ಸಮೀಪ ಬಾಡಿಗೆ ಮನೆಯೊಂದರ ದಾಳಿ ನಡೆಸಿ ಅಣ್ಣಪ್ಪ ಸ್ವಾಮಿ ಎಂಬಾತನನ್ನು ಬಂಧಿಸಿ ಆತನಿಂದ 1.50 ಲಕ್ಷ ಮೌಲ್ಯದ 15.17 ಗ್ರಾಂ ಎಂಡಿಎಂಎ ವಶಪಡಿಸಿಕೊಂಡಿದ್ದರು. ತನಿಖೆ ವೇಳೆ ಮಾದಕ ವಸ್ತು ಪೂರೈಕೆ ಜಾಲದ ಬಗ್ಗೆ ಮಾಹಿತಿ ಪಡೆದ ಪೊಲೀಸರು, ದೆಹಲಿಯಿಂದ ಎಂಡಿಎಂಎ ಖರೀದಿಸಿಕೊಂಡು ಬೆಂಗಳೂರಿಗೆ ಸಾಗಿಸುತ್ತಿದ್ದ ಜಾಲದ ಬಗ್ಗೆ ಸುಳಿವು ಪಡೆದಿದ್ದರು. ಇದರ ಆಧಾರದಲ್ಲಿ ಬಾಗಲಕೋಟೆ ಜಿಲ್ಲೆಯ ಹುನಗುಂದ ಸಮೀಪದ ರಾಷ್ಟ್ರೀಯ ಹೆದ್ದಾರಿಯಲ್ಲಿರುವ ಲಾಡ್ಜ್ ಮೇಲೆ ದಾಳಿ ನಡೆಸಿ ಮತ್ತೆ ಮೊಹಮ್ಮದ್ ಅಲ್ತಾಫ್, ಉಜಿರೆ ಹಳೆಪೇಟೆಯ ಮೊಹಮ್ಮದ್ ಮುಸ್ತಫಾರನ್ನು ಬಂಧಿಸಿದ್ದರು. ಅವರಿಂದ ಅಂದಾಜು 5.5 ಕೋಟಿ ಮೌಲ್ಯದ ಒಟ್ಟು 5 ಕೆ.ಜಿ ಎಂಡಿಎಂಎ, ಕಾರು, ಬ್ಯಾಗ್ ಮತ್ತು ಮೊಬೈಲ್ ಫೋನ್ ವಶಪಡಿಸಿಕೊಳ್ಳಲಾಗಿತ್ತು.

# ಜನರಿಗೆ ಗಾಯ ಗಾಯಾಳುಗಳಿಗೆ ಧೈರ್ಯ ತುಂಬಿದ ಯಡಿಯಾಪೂರ

• **ಉದಯವಾಹಿನಿ, ತಾಳಿಕೋಟೆ**

ತಾಲ್ಲೂಕಿನ ಕಲಕೇರಿ ಗ್ರಾಮದ ತಾಂಡಾ ನಿವಾಸಿಗಳು ಟಂ ಟಂನಲ್ಲಿ ಕೆಲಸಕ್ಕೆ ತೆರಳುತಿದ್ದ ಸಮಯದಲ್ಲಿ ಟ್ರ್ಯಾಕ್ಟರ್-ಟಂಟಂ ನಡುವೆ ಹಡಗಿನಾಳ ಕ್ರಾಸ್ ಹತ್ತಿರ ನಡೆದ ಅಪಘಾತದಲ್ಲಿ ಓರ್ವನು ಸ್ಥಳದಲ್ಲಿಯೇ ಮೃತಪಟ್ಟಿದ್ದು 5 ಜನ ಗಾಯಾಳುಗಳನ್ನು ವಿಜಯಪುರ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು ಸುದ್ದಿ ತಿಳಿದ ದೇವರ ಹಿಪ್ಪರಗಿ ಮತಕ್ಷೇತ್ರದ ಬಿಜೆಪಿ ಮುಖಂಡ ಬಸನಗೌಡ ಪಾಟೀಲ ಅವರು ಆಸ್ಪತ್ರೆಯಲ್ಲಿ ಗಾಯಾಳುಗಳನ್ನು ಬೆಟ್ಟಿಯಾಗಿ ಧೈರ್ಯ ತುಂಬಿದ್ದಾರೆ.ಮುಂಜಾನೆ 9 ಗಂಟೆಯ ಸುಮಾರಿಗೆ ಕೂಲಿ ಕೆಲಸಕ್ಕೆಂದು ಟಂ ಟಂನಲ್ಲಿ ಕಲಕೇರಿ ತಾಂಡಾ ನಿವಾಸಿಗಳು ತೆರಳುತಿದ್ದ ಸಮಯದಲ್ಲಿ ನಡೆದ ಅಪಘಾತದಲ್ಲಿ ಓರ್ವನು ಸ್ಥಳದಲ್ಲಿಯೇ ಮೃತಪಟ್ಟಿದ್ದಾನೆ ಇನ್ನೂಳೀದ 5 ಜನರಲ್ಲಿ ಕೆಲವರ ಕೈ ಕಾಲುಗಳು ಮುರಿದು ಗಂಬೀರ ಸ್ವರೂಪದ ಗಾಯಗಳಾಗಿದ್ದು ಸ್ಥಳೀಯರು ವಿಜಯಪುರ ಶ್ರೀ ಭಾಗ್ಯವಂತಿ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲು ಮುಂದಾಗಿದ್ದಾರೆ. ವಿಷಯ ಅರೀತು ತಕ್ಷಣ ಆಸ್ಪತ್ರೆಗೆ ಬೆಟ್ಟಿ ನೀಡಿದ ದೇವರ ಹಿಪ್ಪರಗಿ ಮತಕ್ಷೇತ್ರದ ಬಿಜೆಪಿ ಮುಖಂಡ ಬಸನಗೌಡ ಪಾಟೀಲ ಅವರು ಗಾಯಾಳುಗಳನ್ನು ಸಂತೈಸಿ ಸಿದರಲ್ಲದೇ ಅವರಿಗೆ ಧೈರ್ಯ ತುಂಬುವದರೊಂದಿಗೆ ಎಲ್ಲಾ ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡುವ ಕುರಿತು ವೈಧ್ಯಾಧಿಕಾರಿಗಳೊಂದಿಗೆ ಚರ್ಚಿಸಿ ಗಾಯಾಳುಗಳಿಗೆ ಸಹಾಯ ಹಸ್ತವನ್ನು ನೀಡಿದರು.

# ದೇಹವನ್ನು ನಾಶಮಾಡುವ ದುಶ್ಚಟಗಳಿಂದ ದೂರವಿರಿ: ಪಟ್ಟದ್ದೇವರು

• **ಉದಯವಾಹಿನಿ ಭಾಲ್ಕಿ**

ದೇವಾಲಯದಂತೆ ಕಾಪಾಡಬೇಕಾದ ದೇಹವನ್ನು ನಾಶಮಾಡುವ ದುಶ್ಚಟಗಳಿಂದ ಯುವಕರು, ಹಿರಿಯರು ದೂರವಿರಬೇಕು ಎಂದು ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ವಿಜ್ಞಾನ ಪಿಯು ಕಾಲೇಜಿನಲ್ಲಿ ಬೀದರ್ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಡ್ರಗ್ಸ್ ಮುಕ್ತ ಕರ್ನಾಟಕ ಅಭಿಯಾನದ ಭಿತ್ತಿ ಪತ್ರಗಳನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.ಸದ್ಗುಣಗಳು ಯುವಕರನ್ನು ದೇಶದ ಸೂಕ್ತ ಸತ್ಪ್ರಜೆಗಳನ್ನಾಗಿ ರೂಪಿಸುತ್ತವೆ. ಹಾಗಾಗಿ ಯುವಜನತೆ ಗುಟ್ಕಾ, ಸಿಗರೇಟ್, ಬಿಡಿ, ತಂಬಾಕು ಸೇವನೆ, ಡ್ರಗ್ಸ್ ಗಳ ಬಳಕೆಯಿಂದ ದೂರವಿರಬೇಕು ಎಂದು ತಿಳಿಸಿದರು. ಡಿವೈಎಸ್ಪಿ ಬಲ್ಲಪ್ಪ ನಂದಗಾವಿ ಮಾತನಾಡಿ, ರಾಜ್ಯವನ್ನು 2028ರೊಳಗೆ ಸಂಪೂರ್ಣ ಡ್ರಗ್ಸ್ ಮುಕ್ತ ಹಾಗೂ ವ್ಯಸನಮುಕ್ತವನ್ನಾಗಿ ಮಾಡಲು ಸರ್ಕಾರ ನಿರ್ಧರಿಸಿದೆ.

ಈ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ವತಿಯಿಂದ 'ಬೇಡ ಬ್ರೋ' ಮತ್ತು 'ಆಪರೇಷನ್ ರೈಸ್' ಎಂಬ ಹೊಸ ಜಾಗೃತಿ ಅಭಿಯಾನಗಳಿಗೆ ಚಾಲನೆ ನೀಡಲಾಗಿದೆ.ಬೇಡ ಬ್ರೋ ಅಭಿಯಾನವು ಯುವಜನರು ಮತ್ತು ವಿದ್ಯಾರ್ಥಿಗಳಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಿ, ಡ್ರಗ್ಸ್‌ನಿಂದ ದೂರವಿರುವಂತೆ ಪ್ರೇರೇಪಿಸುತ್ತದೆ. ಆಪರೇಷನ್ ರೈಸ್ ಅಭಿನವು ನಿರಾಕರಿಸಿ , ಮಾಹಿತಿ ನೀಡಿ, ಬೆಂಬಲಿಸಿ ಮತ್ತು ಸಬಲಪಡಿಸಿ ಎಂಬ ನಾಲ್ಕು ಪ್ರಮುಖ ತತ್ವಗಳ ಮೇಲಿದೆ ಎಂದು ತಿಳಿಸಿದರು. ಸಾರ್ವಜನಿಕರು ಡ್ರಗ್ಸ್ ಸಾಗಾಟ ಅಥವಾ ಮಾರಾಟದ ಬಗ್ಗೆ ಗೌಪ್ಯ ಮಾಹಿತಿ ನೀಡಬೇಕು. ಅಕ್ರಮವಾಗಿ ಡ್ರಗ್ಸ್ ತಯಾರಿಸುವ ಹಾಗೂ ಮಾರಾಟ ಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.



ಉದಯವಾಹಿನಿ ಚಿತ್ರ

# ಬಂಜೆತನವು ಶಾಪವಲ್ಲ, ನಾಚಿಕೆ ಪಡುವ ವಿಷಯವು ಅಲ್ಲ, ಸ್ತ್ರೀ ತಜ್ಞ ಡಾ. ಶಾರದಾ ಗುದಗೆ

• **ಉದಯವಾಹಿನಿ ಬೀದರ:**



ಉದಯವಾಹಿನಿ ಚಿತ್ರ

ಬಂಜೆತನವು ಶಾಪವಲ್ಲ, ನಾಚಿಕೆ ಪಡುವ ವಿಷಯವು ಅಲ್ಲ, ಇದು ಒಂದು ವೈದ್ಯಕೀಯ ಸಮಸ್ಯೆಯಾಗಿದ್ದು, ಸರಿಯಾದ ವೈದ್ಯಕೀಯ ಪರೀಕ್ಷೆ ಮತ್ತು ಚಿಕಿತ್ಸೆಯಿಂದ ಅನೇಕ ದಂಪತಿಗಳಿಗೆ ಸಂತಾನ ಭಾಗ್ಯ ಪಡೆಯುವಂತೆ ನಾವು ಚಿಕಿತ್ಸೆ ನೀಡಿದ್ದೇವೆ ಎಂದು ಗುದಗೆ ಆಸ್ಪತ್ರೆಯ ಹೆಸರಾಂತ ಸ್ತ್ರಿತಜ್ಞರಾದ ಡಾ. ಶಾರದಾ ಗುದಗೆ ಅವರು ಹೇಳಿದರು. ಅವರು ಬೀದರ ನಗರದ ಗುದಗೆ ಆಸ್ಪತ್ರೆಯಲ್ಲಿ ವಿಶ್ವ ಐವಿಎಫ್ ದಿನದ ನಿಮಿತ್ತವಾಗಿ ಹಮ್ಮಿಕೊಂಡ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದ್ದರು. ಗರ್ಭಧಾರಣೆ ಆಗದಿರುವ ಸ್ಥಿತಿ ಇದು ಮಹಿಳೆಯರಲ್ಲಿ ಮಾತ್ರವಲ್ಲ ಪುರುಷರಲ್ಲಿಯೂ ಕಂಡುಬರುವ ಆರೋಗ್ಯ ಸಮಸ್ಯೆಯಾಗಿದೆ. ಬಂಜೆತನದ ಕಾರಣವನ್ನು ಪತ್ತೆ ಹಚ್ಚಲು ವೈದ್ಯರು ರಕ್ತ ಪರೀಕ್ಷೆ ಅಲ್ಟ್ರಾಸೌಂಡ್ ಸೇರದಂತೆ ಪರೀಕ್ಷೆ ನಡೆಸಿ ಚಿಕಿತ್ಸೆ ನೀಡಬೇಕಾಗುತ್ತದೆ ಎಂದು ಅವರು ವಿವರಿಸಿದ್ದರು. ಗುದಗೆ ಆಸ್ಪತ್ರೆಯ ಅಧ್ಯಕ್ಷರು ಹಾಗೂ ಹೃದಯ ತಜ್ಞರಾದ ಡಾ. ಚಂದ್ರಕಾಂತ ಗುದಗೆಯವರು ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ವಿಶ್ವದಲ್ಲೇ ಬಂಜೆತನ ಗಂಭಿರ ಸಮಸ್ಯೆಯಾಗಿದ್ದು, ಬಂಜೆನತಕ್ಕೆ ಅಗತ್ಯ ಚಿಕಿತ್ಸೆ ಪಡೆದರೆ ಮಕ್ಕಳಾಗಲು ಸಾಧ್ಯವಾಗುತ್ತದೆ. ಡಾ. ಶಾರದಾ ಗುದಗೆ ಅವರು ಬಂಜೆತನಕ್ಕೆ ಅಗತ್ಯ ಚಿಕಿತ್ಸೆ ನೀಡುತ್ತಿರುವುದರಿಂದ ಸಾಕಷ್ಟು ದಂಪತಿಗಳಿಗೆ ಮಕ್ಕಳಾಗಿವೆ, ಎಂದು ಅವರು ಹೇಳಿದ್ದರು.ಬಂಜೆತನ ಚಿಕಿತ್ಸೆಗಾಗಿ ಸೋಲಾಪೂರ, ಹೈದ್ರಾಬಾದ, ಪುಣೆ, ಬೆಂಗಳೂರು ಸೇರಿದಂತೆ ದೊಡ್ಡ-ದೊಡ್ಡ ಪಟ್ಟಣಗಳ ಆಸ್ಪತ್ರೆಗೆ ಹೋಗಲು ತಪ್ಪಿಸಲು ಕಡಿಮೆ ಖರ್ಚಿನಲ್ಲಿ ಬಡ ಜನರಿಗೆ ಅಗತ್ಯೆ ಚಿಕಿತ್ಸೆ ನೀಡಲಾಗುತ್ತಿದೆ. ಅಗತ್ಯೆ ಚಿಕಿತ್ಸೆ ಪಡೆದುಕೊಳ್ಳಲು ಅವರು ಮನವಿ ಮಾಡಿದ್ದಾರೆ.

# ಯೋಗ ಶಿಬಿರಕ್ಕೆ ಚಾಲನೆ : ಯೋಗವನ್ನು ಪ್ರತಿದಿನ ಅಭ್ಯಾಸ ಮಾಡಿ ನಿಮ್ಮ ಜೀವನವನ್ನು ಉಜ್ವಲಗೊಳಿಸಿಕೊಳ್ಳಿ

• **ಉದಯವಾಹಿನಿ ಬಸವನಬಾಗೇವಾಡಿ:**

ತಾಲ್ಲೂಕಿನ ನಾಗೂರು ಗ್ರಾಮದ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 10 ದಿನಗಳ ಯೋಗ ಶಿಬಿರಕ್ಕೆ ಸೋಮವಾರ ಚಾಲನೆ ನೀಡಲಾಯಿತು. ಜಿಲ್ಲಾ ಶಾಲಾ ಉಪನಿರ್ದೇಶಕರಾದ ಎಂ.ಎ. ಗುಳೇದಗುಡ್ಡ ಕಾರ್ಯಕ್ರಮ ಉದ್ಘಾಟಿಸಿ, ಶಾರೀರಿಕ ಹಾಗೂ ಮಾನಸಿಕ ಆರೋಗ್ಯದ ಮೇಲೆ ಬೆಳಕು ಚೆಲ್ಲುವ ಯೋಗವನ್ನು ಪ್ರತಿದಿನ ಅಭ್ಯಾಸ ಮಾಡಿ ನಿಮ್ಮ ಜೀವನವನ್ನು ಉಜ್ವಲಗೊಳಿಸಿಕೊಳ್ಳಿ ಎಂದು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ವಸಂತ ರಾಠೋಡ ಮಾತನಾಡಿ, ಭಾರತೀಯರು ಜಗತ್ತಿಗೆ ನೀಡಿದ ಕೊಡುಗೆ ಯೋಗ, ಇಂತಹ ಯೋಗವನ್ನು ವಿದೇಶಿಯರು ಕಲಿತು ನಮ್ಮ ದೇಶಕ್ಕೆ ಬಂದು ತರಬೇತಿ ನೀಡುತ್ತಿರುವ ವಿಶೇಷವಾಗಿ ಜರ್ಮನಿಯಿಂದ ಬಂದಂತಹ ಅಂತರರಾಷ್ಟ್ರೀಯ ಯೋಗ ತರಬೇತುದಾರರಾದ ಕುಮಾರಿ ಲಿಂಡಾ ಮತ್ತು ನಾಗೂರು ಶಾಲೆಯ ಶಿಕ್ಷಕರಾದ ರಾಜಶೇಖರ ಗುಬ್ಬಿ ಇವರು ಹತ್ತು ದಿನಗಳ ಕಾಲ ಯೋಗ ಶಿಬಿರವನ್ನು ಹಮ್ಮಿಕೊಂಡಿದ್ದು ಹೆಮ್ಮೆಯ ವಿಷಯ ಎಂದರು. ದಿವ್ಯ ಸಾನಿಧ್ಯವನ್ನು ವಹಿಸಿದ್ದ ಸಿದ್ದಲಿಂಗ ಮಹಾಸ್ವಾಮೀಜಿ ಮಾತನಾಡಿದರು. ಶಿಕ್ಷಣ ಸಂಯೋಜಕರಾದ ಎ.ಎಸ್.ಗುಬ್ಬಾ, ಬಿ.ಆರ್.ಪಿಗಳಾದ ಎಂ.ವಿ. ಗಬ್ಬುರ , ಸಿ.ಆರ್.ಪಿಗಳಾದ ಮಹೇಶ ಪೂಜಾರಿ , ಮುಖ್ಯಗುರುಗಳಾದ ಸಂಗಮೇಶ್ ಪೂಜಾರ್,ಎಸ್. ಬಿ ಗಂಗೂರ , ಪಿ. ಎಸ್ ಹೊಸಮಠ , ರೇವಣಸಿದ್ದ ನಂದ್ಯಾಳ ವೇದಿಕೆಯ ಮೇಲೆ ಉಪಸ್ಥಿತರಿದ್ದರು.ಮುಖಂಡರಾದ ಚಂದ್ರಶೇಖರ ಮುಳವಾಡ, ಹೈದರಸಾಬ ಚಪ್ಪರಬಂದ ಬಂದೇನವಾಜ ವಾಲಿಕಾರ, ಮಹೇಶ ಮುಳವಾಡ , ಚಂದ್ರಶೇಖರ ಡೋಣೂರ , ಶರಣಪ್ಪ ನಾಲತವಾಡ , ಅಮರಯ್ಯ ಹಿರೇಮಠ ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

# ಕನ್ನಡ ಸಾಹಿತ್ಯ ಯುವ ಜನತೆಗೆ ಮಾರ್ಗದರ್ಶಿಯಾಗಲಿ: ಸುರೇಶ ಚೆನ್ನಶೆಟ್ಟಿ

## ನಗರದ ಗುರುನಾನಕ ಗೇಟ್ ಎದುರಿನ ಹೋಟೆಲ್ ಕೃಷ್ಣ ರೆಜೆನ್ಸಿ ಸಭಾಂಗಣದಲ್ಲಿ ರವಿವಾರ ಬೆಳಿಗ್ಗೆ ಜನಪರ ಸಾಂಸ್ಕೃತಿಕ ಪ್ರತಿಷ್ಠಾನ

• **ಉದಯವಾಹಿನಿ, ಬೀದರ್ :**

1 : ಕನ್ನಡ ಸಾಹಿತ್ಯ ಪರಿಷತ್ತಿನ
2 : ಕರ್ನಾಟಕ ಗಡಿ ಅಭಿವೃದ್ಧಿ
3 : ಸಮಾಜದ ವಾಸ್ತವ ಚಿತ್ರಣ

ಕನ್ನಡವನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಜಗತ್ತಿನಲ್ಲಿ ಛಲವಿದ್ದರೆ ಅಸಾಧ್ಯವಾದದ್ದು ಯಾವುದೂ ಇಲ್ಲ. ಭಾರತವು ಯುವಕರ ರಾಷ್ಟ್ರವಾಗಿದ್ದು, ಯುವ ಪ್ರತಿಭೆಗಳು ಇನ್ನಷ್ಟು ಹೊರಹೊಮ್ಮಬೇಕಿದೆ. ಸಾಹಿತಿಗಳು ಮತ್ತು ಕವಿಗಳು ತಮ್ಮ ಕೃತಿಗಳ ಮೂಲಕ ವಾಸ್ತವಿಕತೆಯನ್ನು ಅನಾವರಣಗೊಳಿಸಿ ಯುವ ಜನತೆಗೆ ಮಾರ್ಗದರ್ಶನ ನೀಡಬೇಕು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಸುರೇಶ ಚೆನ್ನಶೆಟ್ಟಿ ಅವರು ಹೇಳಿದರು. ನಗರದ ಗುರುನಾನಕ ಗೇಟ್ ಎದುರಿನ ಹೋಟೆಲ್ ಕೃಷ್ಣ ರೆಜೆನ್ಸಿ ಸಭಾಂಗಣದಲ್ಲಿ ರವಿವಾರ ಬೆಳಿಗ್ಗೆ ಜನಪರ ಸಾಂಸ್ಕೃತಿಕ ಪ್ರತಿಷ್ಠಾನ, ಬೀದರ ವತಿಯಿಂದ ಆಯೋಜಿಸಿದ್ದ ಜಿಲ್ಲೆಯ ಉದಯೋನ್ಮುಖ ಕವಿ ಹಾಗೂ ಲೇಖಕ ಅಶ್ವಜೀತ ದಂಡಿನ ಅವರ 'ಚಿಮ್ಮಿದ ಬುಗ್ಗೆ' ಕೃತಿ ಲೋಕಾರ್ಪಣೆ, ಕವಿಗೋಷ್ಠಿ ಹಾಗೂ ವಿವಿಧ ಕ್ಷೇತ್ರಗಳ ಸಾಧಕರಿಗೆ ಗೌರವ ಸನ್ಮಾನ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.



ಉದಯವಾಹಿನಿ ಚಿತ್ರ

> ಸಾಹಿತ್ಯವು ಯಾರೊಬ್ಬರ ಸ್ವತ್ತಲ್ಲ. ಬರೆಯುವ ಆಸಕ್ತಿ, ಆಳವಾದ ಜ್ಞಾನ ಮತ್ತು ಸಾಮಾಜಿಕ ಕಳಕಳಿಯುಳ್ಳವರು ಉತ್ತಮ ಸಾಹಿತ್ಯವನ್ನು ಸೃಷ್ಟಿಸಬಲ್ಲರು. 'ಚಿಮ್ಮಿದ ಬುಗ್ಗೆ' ಕೃತಿಯಲ್ಲಿ ಶೋಷಿತ, ದಮನಿತ ಹಾಗೂ ನೊಂದವರ ಬದುಕಿನ ನೋವನ್ನು ಸೆರೆಹಿಡಿಯುವ ಪ್ರಯತ್ನ ಮಾಡಲಾಗಿದೆ. ಸಮಾಜದಲ್ಲಿ ಸಮಾನತೆಯ ಭಾವನೆ ಮೂಡಿದಾಗ ಮಾತ್ರ ನಿಜವಾದ ಸಾಮಾಜಿಕ ಸಾಮರಸ್ಯ ಸಾಧ್ಯ ಎಂದರು. -ಬಿ.ಜೆ. ಪಾರ್ವತಿ

> 'ಚಿಮ್ಮಿದ ಬುಗ್ಗೆ' ಕೃತಿಯಲ್ಲಿ ನೊಂದವರ ನೋವು ಮತ್ತು ಸಮಾಜದ ವಾಸ್ತವ ಚಿತ್ರಣವನ್ನು ಲೇಖಕರು ಪರಿಣಾಮಕಾರಿಯಾಗಿ ಮೂಡಿಸಿದ್ದಾರೆ. ಪ್ರತಿಭಾವಂತ ಕವಿಗಳು ಮತ್ತು ಲೇಖಕರನ್ನು ಗುರುತಿಸಿ ಪ್ರೋತ್ಸಾಹಿಸುವ ಮೂಲಕ ಅವರನ್ನು ಮುಖ್ಯವಾಹಿನಿಗೆ ತರಬೇಕಾದ ಅಗತ್ಯವಿದೆ ಎಂದು ಹೇಳಿದರು.
> -ಡಾ. ಸಂಜೀವಕುಮಾರ ಅತಿವಾಳೆ

ಉಪನ್ಯಾಸಕ ಪ್ರೊ. ಮಯೂರ ಬಸವರಾಜ ಅವರು 'ಚಿಮ್ಮಿದ ಬುಗ್ಗೆ' ಕೃತಿಯನ್ನು ಲೋಕಾರ್ಪಣೆ ಮಾಡಿದರು. ಮುಖ್ಯ ಅತಿಥಿಗಳಾಗಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ಅಮೃತರಾವ ಚಿಮಕೋಡೆ, ಮಾರ್ಗದಾತ ದಿನಪತ್ರಿಕೆಯ ಸಂಪಾದಕ ಡಾ. ಕಾಶಿನಾಥ ಚೆಲ್ವಾ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಎಂ.ಎಸ್. ಮನೋಹರ ಹಾಗೂ ಕೃತಿಕಾರ ಅಶ್ವಜೀತ ದಂಡಿನ ಉಪಸ್ಥಿತರಿದ್ದು ಮಾತನಾಡಿದರು. ವೇದಿಕೆಯಲ್ಲಿ ಸರ್ಕಾರಿ ನೌಕರರ ಸಂಘದ ಜಿಲ್ಲಾ ಖಜಾಂಚಿ ದೇವಪ್ಪ ಚಾಂಬಳೆ ಮಾಳೆಗಾಂವ, ಕೆ.ಎಸ್. ಬಂಧು, ಮಾಣಿಕರಾವ್, ಜಯದೇವ ಗುರೂಜಿ ಆಳವಾಯಿ ಸೇರಿದಂತೆ ಇತರರು ವೇದಿಕೆ ಮೇಲೆ ಉಪಸ್ಥಿತರಿದ್ದರು.

ಆರಂಭದಲ್ಲಿ ಅಜೀತ್ ಎನ್. ನೇಳಗಿ ಸ್ವಾಗತಿಸಿದರು. ದಿಲೀಪಕುಮಾರ ಮೋಘ ಕಾರ್ಯಕ್ರಮ ನಿರೂಪಿಸಿದರು. ಅವಿನಾಶ್ ಸೋನೆ ವಂದಿಸಿದರು.

ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಕವಿಗಳು ಕವಿಗೋಷ್ಠಿಯಲ್ಲಿ ಭಾಗವಹಿಸಿ ತಮ್ಮ ಸ್ವರಚಿತ ಕವನಗಳನ್ನು ವಾಚಿಸಿದರು. ಇದೇ ಸಂದರ್ಭದಲ್ಲಿ ಸಮಾಜ, ಸಾಹಿತ್ಯ, ಶಿಕ್ಷಣ, ಜಾನಪದ ಕಲೆ ಹಾಗೂ ಸಾರ್ವಜನಿಕ ಸೇವಾ ಕ್ಷೇತ್ರಗಳಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ ಗಣ್ಯರನ್ನು ಗೌರವಿಸಿ ಸನ್ಮಾನಿಸಲಾಯಿತು. ಸಾಹಿತ್ಯಾಸಕ್ತರು, ಕವಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು